ಕರ್ನಾಟಕ ವಿಧಾನ ಪರಿಷತ್ತು

# ನೂರ ಐವತ್ತಾರನೆಯ ಅಧಿವೇಶನದ
# ಸಂಕ್ಷಿಪ್ತ ವರದಿ

**ದಿನಾಂಕ:11.08.2025 ರಿಂದ 22.08.2025ರವರೆಗೆ**

ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯ
ವಿಧಾನ ಸೌಧ, ಬೆಂಗಳೂರು–560 001

# ನೂರ ಐವತ್ತಾರನೆಯ ಅಧಿವೇಶನದ
# ಸಂಕ್ಷಿಪ್ತ ವರದಿ

**ದಿನಾಂಕ:11.08.2025 ರಿಂದ 22.08.2025ರವರೆಗೆ**

**ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯ**
ವಿಧಾನ ಸೌಧ, ಬೆಂಗಳೂರು–560 001

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತಾರನೆಯ ಅಧಿವೇಶನ

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಸೋಮವಾರ, ದಿನಾಂಕ:11.08.2025**

**(01)**

ದಿನಾಂಕ:11.08.2025 ರಂದು ಬೆಳಗ್ಗೆ 11.08 ಗಂಟೆಗೆ ಸದನವು ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

'ವಂದೇ ಮಾತರಂ' ಗೀತೆಯೊಂದಿಗೆ ಗೌರವ ಸೂಚಿಸುವ ಮೂಲಕ ಸದನದ ಕಾರ್ಯಕಲಾಪಗಳು ವಿಧ್ಯುಕ್ತವಾಗಿ ಆರಂಭಗೊಂಡಿತು.

## ಭಾರತದ ಸಂವಿಧಾನ

### ಪೀಠಿಕೆ

ಮಾನ್ಯ ಸಭಾಪತಿಯವರು ಎಲ್ಲಾ ಶಾಸಕರಿಗೂ ಸಂವಿಧಾನದ ಪೀಠಿಕೆಯನ್ನು ಬೋಧಿಸಿದರು.

### 1. ಸಂತಾಪ ಸೂಚನೆಗಳು

ಕಳೆದ ಅಧಿವೇಶನದ ನಂತರ ನಿಧನ ಹೊಂದಿದ ಈ ಕೆಳಕಂಡ ಗಣ್ಯರುಗಳಿಗೆ ಮಾನ್ಯ ಸಭಾಪತಿಯವರು ಸಂತಾಪ ಸೂಚನಾ ನಿರ್ಣಯವನ್ನು ಸದನದಲ್ಲಿ ಮಂಡಿಸಿದರು.

01. ಡೇವಿಡ್ ಸಿಮೆಯೋನ್, ವಿಧಾನ ಪರಿಷತ್ತಿನ ಮಾಜಿ ಸಭಾಪತಿಗಳು, ಮಾಜಿ ಉಪ ಸಭಾಪತಿಗಳು ಹಾಗೂ ವಿಧಾನ ಪರಿಷತ್ತಿನ ಮಾಜಿ ಶಾಸಕರು

02. ಡಾ: ಎನ್. ತಿಪ್ಪಣ್ಣ, ವಿಧಾನ ಪರಿಷತ್ತಿನ ಮಾಜಿ ಸಭಾಪತಿಗಳು ಹಾಗೂ ವಿಧಾನ ಪರಿಷತ್ತಿನ ಮಾಜಿ ಶಾಸಕರು

03. ಬೇಗಾನೆ ರಾಮಯ್ಯ, ಮಾಜಿ ಸಚಿವರು ಹಾಗೂ ವಿಧಾನ ಸಭೆಯ ಮಾಜಿ ಶಾಸಕರು

04. ಡಾ: ಕೆ. ಕಸ್ತೂರಿರಂಗನ್, ಭಾರತದ ಪ್ರಖ್ಯಾತ ಬಾಹ್ಯಾಕಾಶ ವಿಜ್ಞಾನಿ

05. ಜಿ.ಎಸ್. ಸಿದ್ದಲಿಂಗಯ್ಯ, ಖ್ಯಾತ ವಿಮರ್ಶಕ ಹಾಗೂ ಹಿರಿಯ ಸಾಹಿತಿ

06. ಪ್ರೊ. ಸುಬ್ಬಣ್ಣ ಅಯ್ಯಪ್ಪನ್, ಖ್ಯಾತ ಕೃಷಿ ವಿಜ್ಞಾನಿ

07. ಡಾ: ಎಮ್.ಆರ್. ಶ್ರೀನಿವಾಸನ್, ಹಿರಿಯ ಪರಮಾಣು ವಿಜ್ಞಾನಿ

08. ಡಾ: ಹೆಚ್.ಎಸ್. ವೆಂಕಟೇಶ್ ಮೂರ್ತಿ, ಹಿರಿಯ ಸಾಹಿತಿಗಳು, ಅಂಕಣಕಾರರು ಹಾಗೂ ವಿಮರ್ಶಕರು

09. ಡಾ: ಬಿ. ಸರೋಜಾದೇವಿ, ಭಾರತೀಯ ಸಿನಿಮಾ ರಂಗದ ನಟಿ

ಮಾನ್ಯ ಸಭಾನಾಯಕರು ಹಾಗೂ ವಿರೋಧ ಪಕ್ಷದ ನಾಯಕರು ಸಂತಾಪ ಸೂಚನಾ ನಿರ್ಣಯವನ್ನು ಅನುಮೋದಿಸಿ ಮಾತನಾಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸಂತಾಪ ಸೂಚನಾ ನಿರ್ಣಯವನ್ನು ಅನುಮೋದಿಸಿ ಮಾತನಾಡಿದರು.

1. ಶ್ರೀ ಸುನೀಲ್ ವಲ್ಯಾಪುರ್, ಮಾನ್ಯ ವಿರೋಧ ಪಕ್ಷದ ಉಪ ನಾಯಕರು
2. ಶ್ರೀ ಸಿ.ಟಿ. ರವಿ
3. ಶ್ರೀ ಈಶ್ವರ್ ಖಂಡ್ರೆ, ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು
4. ಶ್ರೀ ಸಲೀಂ ಅಹಮದ್, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು
5. ಶ್ರೀ ಐವನ್ ಡಿ'ಸೋಜಾ
6. ಶ್ರೀ ಶರವಣ ಟಿ.ಎ.
7. ಡಾ: ಉಮಾಶ್ರೀ
8. ಶ್ರೀ ತಿಪ್ಪಣ್ಣಪ್ಪ ಕಮಕನೂರ

ಮೃತರುಗಳ ಆತ್ಮಕ್ಕೆ ಸದ್ಗತಿಯನ್ನು ಕೋರಿ ಒಂದು ನಿಮಿಷ ಮೌನ ಆಚರಿಸಲಾಯಿತು. ಮೃತ ಗಣ್ಯರುಗಳ ಕುಟುಂಬದವರಿಗೆ ಸಂತಾಪ ಸೂಚನಾ ನಿರ್ಣಯದ ಪ್ರತಿಯನ್ನು ಕಳುಹಿಸಿಕೊಡಲಾಗುವುದೆಂದು ಮಾನ್ಯ ಸಭಾಪತಿಯವರು ತಿಳಿಸಿದರು.

ಮಧ್ಯಾಹ್ನ 12.10 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು(ಶ್ರೀ **ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

ಸದನವು ಮಧ್ಯಾಹ್ನ 12.25 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 2. ನಿಲುವಳಿ ಸೂಚನೆ

ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ ಅವರು ಬೆಂಗಳೂರಿನ ಕಾಡುಗೋಡಿ

ಪ್ಲಾಂಟೇಷನ್ ಪ್ರದೇಶದಲ್ಲಿರುವ ಕೃಷಿ ಭೂಮಿಯನ್ನು ಅರಣ್ಯ ಭೂಮಿಯೆಂದು ಗುರುತಿಸಿರುವ ಕುರಿತು ನಿಯಮ 59ರ ಅಡಿಯಲ್ಲಿ ಪ್ರಸ್ತಾಪಿಸಲು ಅವಕಾಶ ನೀಡಬೇಕೆಂದು ಸೂಚಿಸಿದರು.

ಪ್ರಶ್ನೋತ್ತರ ನಂತರ ಅವಕಾಶ ನೀಡುವುದಾಗಿ ಮಾನ್ಯ ಸಭಾಪತಿಯವರು ತಿಳಿಸಿದರು.

ಮಾನ್ಯ ಶಾಸಕರಾದ ಶ್ರೀ ಎಸ್.ಎಲ್. ಭೋಜೇಗೌಡ ಅವರು ಅಧಿವೇಶನದ ಪ್ರಾರಂಭದ ದಿನದಂದು ನಾಡಗೀತೆಯನ್ನು ನುಡಿಸಬೇಕೆಂದು ಪ್ರಸ್ತಾಪಿಸಿದರು.

ಕಾರ್ಯಕಲಾಪಗಳ ಸಲಹಾ ಸಮಿತಿಯಲ್ಲಿ ತೀರ್ಮಾನ ಕೈಗೊಳ್ಳಲಾಗುವುದೆಂದು ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ತಿಳಿಸಿದರು.

## 3. ಪ್ರಶ್ನೋತ್ತರ

ದಿನಾಂಕ:11.08.2025ರಂದು ಸದನದಲ್ಲಿ ಉತ್ತರಿಸುವ ಸಮೂಹ–Iರ 1ನೇ ಪಟ್ಟಿಯ ಈ ಕೆಳಕಂಡ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 1 (113+164+144)
2. 2(21)
3. 3(76)
4. 4(85)
5. 5(34) ಅರ್ಧಗಂಟೆ ಕಾಲಾವಧಿ ಚರ್ಚೆ
6. 6(94)

| | | |
|---|---|---|
| 7. | 7(149) | ಗೈರು ಹಾಜರಿ |
| 8. | 8(19) | |
| 9. | 9(63+5) | |
| 10. | 10(139) | ಮಾನ್ಯ ಶಾಸಕರೊಂದಿಗೆ ಸಭೆ ಏರ್ಪಡಿಸುವ ಕುರಿತು ಮಾನ್ಯ ಸಚಿವರು ತಿಳಿಸಿದರು |
| 11. | 11(20) | |
| 12. | 12(142) | |
| 13. | 13(133) | ವರ್ಗಾವಣೆ |
| 14. | 14(135) | |
| 15. | 15(35) | |

ದಿನಾಂಕ:11.08.2025ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–Iರ 1ನೇ ಪಟ್ಟಿಯ ಒಟ್ಟು 150 ಪ್ರಶ್ನೆಗಳ ಪೈಕಿ 76 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

## 4. ಶೂನ್ಯ ವೇಳೆ ಪ್ರಸ್ತಾವಗಳು

1. **ಶ್ರೀ ಡಿ.ಎಸ್. ಅರುಣ್** ಅವರು ರಾಜ್ಯದ ಧಾರ್ಮಿಕ ಹೆಮ್ಮೆ ಮತ್ತು ಸಾಂಸ್ಕೃತಿಕ ಕೇಂದ್ರವಾಗಿರುವ ಧರ್ಮಸ್ಥಳದ ವಿರುದ್ಧ ಅನಾಮಿಕ ವ್ಯಕ್ತಿಯೊಬ್ಬರೂ ಯಾವುದೇ ಸಾಕ್ಷ್ಯವಿಲ್ಲದೆ ಆರೋಪ ಮಾಡಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ಸಿ.ಎನ್. ಮಂಜೇಗೌಡ** ಅವರು ರಾಜ್ಯದ ಆರು ಸಾವಿರ ಗ್ರಾಮ ಪಂಚಾಯತಿಗಳಿಗೆ, 187 ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸುವ ಸಂಬಂಧ ಮೀಸಲಾತಿ ಪಟ್ಟಿಯನ್ನು ಚುನಾವಣೆ ಆಯೋಗಕ್ಕೆ ರಾಜ್ಯ ಸರ್ಕಾರ ಈವರೆಗೂ ನೀಡದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಯವರಿಂದ ಉತ್ತರವನ್ನು ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ಪಿ.ಹೆಚ್. ಪೂಜಾರ್ ಮತ್ತು ಶ್ರೀ ಶಶೀಲ್ ಜಿ. ನಮೋಶಿ** ಅವರು ರಾಜ್ಯದಲ್ಲಿ ಮಹಿಳೆಯರು ಮತ್ತು ಹೆಣ್ಣು ಮಕ್ಕಳು ನಾಪತ್ತೆ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ ಪ್ರತಿ ಜಿಲ್ಲೆ ಮತ್ತು ತಾಲ್ಲೂಕು ಮಟ್ಟದಲ್ಲಿ ವಿಶೇಷ ತಂಡಗಳನ್ನು ರಚಿಸಬೇಕೆಂದು ಹಾಗೂ ಭಾಗಿಯಾದವರ ವಿರುದ್ಧ ಕಾನೂನು ಕ್ರಮ ಜರುಗಿಸುವ ಕುರಿತು.

ಮಾನ್ಯ ಗೃಹ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ದಕ್ಷಿಣ ಭಾರತದಲ್ಲಿ ಮೊಟ್ಟಮೊದಲು ಪ್ರಾರಂಭವಾದ ಗುಲಬರ್ಗಾ ದೂರದರ್ಶನ ಕೇಂದ್ರವನ್ನು ಕೇಂದ್ರ ಸರ್ಕಾರ ರದ್ದು ಮಾಡುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ರಾಜ್ಯ ಸರ್ಕಾರವು ತಂತ್ರಜ್ಞಾನ ಆಧಾರಿತ ಸ್ಮಾರ್ಟ್ ಬೋರ್ಡ್, ಡಿಜಿಟಲ್ ಕ್ಲಾಸ್‌ಗಳಲ್ಲಿ ಬೋಧನೆ ಮಾಡುವ ಮೂಲಕ ಮಕ್ಕಳನ್ನು

ಆಧುನಿಕ ಜಗತ್ತಿಗೆ ತಯಾರುಗೊಳಿಸಿ ಮಾನವ ಸಂಪನ್ಮೂಲವನ್ನು ಮೇಲ್ದರ್ಜೆಗೇರಿಸುವ ಬಗ್ಗೆ ಹೊರಡಿಸಿರುವ ಎಲ್‌ಬಿಎ ಆದೇಶದಿಂದ ಶಿಕ್ಷಕರು ತೊಂದರೆಗೀಡಾಗಿದ್ದು, ಸದರಿ ಆದೇಶವನ್ನು ಹಿಂಪಡೆಯಬೇಕೆಂಬ ವಿಷಯದ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀ ಎಂ. ನಾಗರಾಜು** ಅವರು ಖಾನಾಪುರ ತಾಲ್ಲೂಕಿನ ನಂದಗಡ ಗ್ರಾಮದಲ್ಲಿರುವ ಟಿಎಪಿಎಂಸಿ (ಮಾರ್ಕೆಟಿಂಗ್) ಸೊಸೈಟಿಯಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ಸೂಕ್ತ ತನಿಖೆ ನಡೆಸಿ ಆರೋಪಿಗಳ ವಿರುದ್ಧ ಸೂಕ್ತ ಕ್ರಮಕೈಗೊಳ್ಳಬೇಕೆಂದು ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಹಕಾರ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಶ್ರೀ ಐವನ್ ಡಿ'ಸೋಜಾ** ಅವರು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೆಂಪು ಕಲ್ಲು ಹಾಗೂ ಮರಳುಗಾರಿಕೆ ಸಂಪೂರ್ಣ ಸ್ಥಗಿತಗೊಂಡಿರುವುದರಿಂದ ಕೂಲಿ ಕಾರ್ಮಿಕರು ಹಾಗೂ ಸಣ್ಣ ಗುತ್ತಿಗೆದಾರರು ತೊಂದರೆಯಲ್ಲಿದ್ದು, ಕರಾವಳಿ ಜಿಲ್ಲೆಗಳಿಗೆ ಹೊಸ ನೀತಿಯನ್ನು ಜಾರಿಗೊಳಿಸಿ ಪರವಾನಗೆ ನೀಡುವ ಬಗ್ಗೆ ಪ್ರಸ್ತಾಪಿಸಿದರು.

ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀ ಗೋವಿಂದರಾಜು** ಅವರು ಸಮಗ್ರ ಶಿಶು ಅಭಿವೃದ್ಧಿ ಯೋಜನೆ, ಗರ್ಭಿಣಿ, ಬಾಣಂತಿಯರು, ಕಿಶೋರಿಯರು ಹಾಗೂ 6 ವರ್ಷದೊಳಗಿನ ಮಕ್ಕಳಿಗೆ ಪೌಷ್ಠಿಕ ಆಹಾರ ವಿತರಿಸಲು ಫಲಾನುಭವಿಗಳಿಗೆ ಅಳವಡಿಸಿರುವ ಫೇಸ್ ಕ್ಯಾಪ್ಚರ್ ನೆಟವರ್ಕ್ ಅಭಾವದಿಂದಾಗಿ ಸರಿಯಾಗಿ ಕಾರ್ಯನಿರ್ವಹಿಸದಿರುವ ಸಂದರ್ಭದಲ್ಲಿ ಆಗುತ್ತಿರುವ ತೊಂದರೆಗಳ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಉತ್ತರಿಸಿದರು.

9. **ಶ್ರೀ ಎಸ್.ವ್ಹಿ. ಸಂಕನೂರ** ಅವರು ಧಾರವಾಡದಲ್ಲಿರುವ ಕರ್ನಾಟಕ ವಿಶ್ವವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕರುಗಳ/ ನೌಕರರ ಪಿಂಚಣಿ ಹಣವನ್ನು ಪ್ರತಿ ತಿಂಗಳು ಪಾವತಿಸಲು ಅನುದಾನವನ್ನು ಬಿಡುಗಡೆ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉನ್ನತ ಶಿಕ್ಷಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

ಮಧ್ಯಾಹ್ನ 2.40 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 4.05 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ಮಾನ್ಯ ವಿರೋಧ ಪಕ್ಷದ ನಾಯಕರು ಗುಲಬರ್ಗಾದ ಚಿತ್ತಾಪುರದಲ್ಲಿ ನಡೆದ ಘಟನೆಗೆ ಸಂಬಂಧಿಸಿದಂತೆ ಹಕ್ಕುಚ್ಯುತಿ ಸೂಚನೆ ನೀಡಿದ್ದು, ಸಮಿತಿಯ ಪರಿಶೀಲನೆಗೆ ವಹಿಸಲಾಗಿದೆ ಎಂದು ಮಾನ್ಯ

ಸಭಾಪತಿಯವರು (ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ) ಪ್ರಕಟಿಸಿದರು.

ಗುಲಬರ್ಗಾದ ಚಿತ್ತಾಪುರದಲ್ಲಿ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ವಿರೋಧ ಪಕ್ಷದ ನಾಯಕರನ್ನು ಬಂಧನದಲ್ಲಿರಿಸಿದ್ದು, ಸರಿಯಾಗಿದೆ ಎಂದು ಮರುದಿನ ನಡೆದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿರುವ ಸಂಬಂಧ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ, ಮಾನ್ಯ ಮುಖ್ಯ ಮಂತ್ರಿಗಳಿಗೆ ಮತ್ತು ಘನತೆವೆತ್ತ ರಾಜ್ಯಪಾಲರಿಗೆ ದೂರನ್ನು ಸಲ್ಲಿಸಿದ್ದು, ಸಚಿವರ ಮೇಲೆ ಯಾವುದೇ ಕ್ರಮ ಕೈಗೊಳ್ಳದೆ ಇರುವ ಕುರಿತು ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ ಅವರು ಪ್ರಸ್ತಾಪಿಸಿದರು.

### "ಗದ್ದಲ"

ಮಧ್ಯಾಹ್ನ 4.16 ಗಂಟೆಯಲ್ಲಿ ಶ್ರೀ ಎಸ್.ಎಲ್. ಭೋಜೇಗೌಡ ಅವರು ಸಭಾಪತಿಯವರ ಪೀಠದಲ್ಲಿ ಆಸೀನರಾದರು.

### 5. ಸಭೆಯ ಮುಂಡಿಡಲಾಗುವ ಕಾಗದ ಪತ್ರಗಳು

ಮಾನ್ಯ ಸಭಾನಾಯಕರು ಮಾನ್ಯ ಮುಖ್ಯಮಂತ್ರಿಗಳ ಹಾಗೂ ಸಂಬಂಧಪಟ್ಟ ಮಾನ್ಯ ಸಚಿವರುಗಳ ಪರವಾಗಿ ಸಭೆಯ ಮುಂದಿಡಲಾಗುವ ಕಾಗದ ಪತ್ರಗಳ ಒಂದನೇ ಮತ್ತು ಎರಡನೇ ಪಟ್ಟಿಗಳನ್ನು ಮಂಡಿಸಿದರು.

### 6. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಮಂಡಿಸಿದರು.

| ಕ್ರ ಸಂ. | ವಿಧೇಯಕಗಳ ಪಟ್ಟಿ | ಒಪ್ಪಿಗೆಯನ್ನು ಪಡೆದ ದಿನಾಂಕ | ಒಪ್ಪಿಗೆಯನ್ನು ನೀಡಿದವರು |
|---|---|---|---|
| 1. | ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರ ವಿಧೇಯಕ, 2024 (ವಿಧೇಯಕ ಸಂ.19)<br><br>THE GADAG-BETAGERI, CULTURE AND EXHIBITION AUTHORITY BILL, 2024 | 13.05.2025 | ರಾಜ್ಯಪಾಲರು |
| 2. | ಸಿವಿಲ್ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದುಪಡಿ) ವಿಧೇಯಕ, 2024 (ವಿ.ಸಂ.55)<br><br>THE CODE OF CIVIL PROCEDURE (KARNATAKA AMENDMENT) BILL, 2024 | 19.05.2025 | ರಾಷ್ಟ್ರಪತಿಯವರು |
| 3. | ಮೈಸೂರು ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024 (ವಿ.ಸಂ.54)<br><br>THE MYSURU DEVELOPMENT AUTHORITY BILL, 2024 | 13.05.2025 | ರಾಜ್ಯಪಾಲರು |
| 4. | ಬೆಂಗಳೂರು ಅರಮನೆ (ಭೂ ಬಳಕೆ ಮತ್ತು ನಿಯಂತ್ರಣ) ವಿಧೇಯಕ,2025 (ವಿಧೇಯಕ ಸಂ-5)<br><br>THE BANGALORE PALACE (UTILIZATION AND REGULATION OF LAND) BILL, 2025 | 12.03.2025 | ರಾಜ್ಯಪಾಲರು |

| | | | |
|---|---|---|---|
| 5. | ಕರ್ನಾಟಕ ಗಿರವಿದಾರರ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂ–2)<br><br>THE KARNATAKA PAWN BROKERS (AMENDMENT) BILL, 2025 | 24.03.2025 | ರಾಜ್ಯಪಾಲರು |
| 6. | ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆಯ ನಿಷೇಧ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂ–3)<br><br>THE KARNATAKA PROHIBITION OF CHARGING EXORBITANT INTEREST (AMENDMENT) BILL, 2025 | 24.03.2025 | ರಾಜ್ಯಪಾಲರು |
| 7. | ಕರ್ನಾಟಕ ಲೇವಾದೇವಿದಾರರ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂ–4)<br><br>THE KARNATAKA MONEY LENDERS (AMENDMENT) BILL, 2025 | 24.03.2025 | ರಾಜ್ಯಪಾಲರು |
| 8. | ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂ–1)<br><br>THE KARNATAKA AGRICULTURAL PRODUCE MARKETING (REGULATION AND DEVELOPMENT) BILL, 2025 | 24.03.2025 | ರಾಜ್ಯಪಾಲರು |

| | | | |
|---|---|---|---|
| 9. | ಕರ್ನಾಟಕ ಕಿರು (Micro) ಸಾಲ ಮತ್ತು ಸಣ್ಣ ಸಾಲ (ಬಲವಂತದ ಕ್ರಮಗಳ ಪ್ರತಿಬಂಧಕ) ವಿಧೇಯಕ, 2025 (ವಿಧೇಯಕ ಸಂ–6)<br>THE KARNATAKA MICRO LOAN AND SMALL LOAN (PREVENTION OF COERCIVE ACTIONS) BILL, 2025 | 24.03.2025 | ರಾಜ್ಯಪಾಲರು |
| 10. | ಗ್ರೇಟರ್ ಬೆಂಗಳೂರು ಆಡಳಿತ ವಿಧೇಯಕ, 2024 (ವಿಧೇಯಕ ಸಂ.34)<br>THE GREATER BENGALURU GOVERNANCE BILL, 2024 | 23.04.2025 | ರಾಜ್ಯಪಾಲರು |
| 11. | ಕರ್ನಾಟಕ ಗ್ರಾಮ ಹುದ್ದೆಗಳ ರದ್ದಿಯಾತಿ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂ.14)<br>THE KARNATAKA VILLAGE OFFICES ABOLITION (AMENDMENT) BILL, 2025 | 03.04.2025 | ರಾಜ್ಯಪಾಲರು |
| 12. | ಕರ್ನಾಟಕ ಭೂ ಕಬಳಿಕೆ ನಿಷೇಧ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂ.15)<br>THE KARNATAKA LAND GRABBING PROHIBITION (AMENDMENT) BILL, 2025 | 05.04.2025 | ರಾಜ್ಯಪಾಲರು |
| 13. | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂ.17) | 10.04.2025 | ರಾಜ್ಯಪಾಲರು |

| | | | |
|---|---|---|---|
| | THE BRUHAT BENGALURU MAHANAGARA PALIKE (AMENDMENT) BILL, 2025 | | |
| 14. | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂ.18)<br>THE KARNATAKA GRAM SWARAJ AND PANCHAYAT RAJ (AMENDMENT) BILL, 2025 | 05.04.2025 | ರಾಜ್ಯಪಾಲರು |
| 15. | ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂ.19)<br>THE UNIVERSITIES OF AGRICULTURAL SCIENCES (AMENDMENT) BILL, 2025 | 23.04.2025 | ರಾಜ್ಯಪಾಲರು |
| 16. | ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂ.20)<br>THE KARNATAKA MOTOR VEHICLES TAXATION (AMENDMENT) BILL, 2025 | 03.04.2025 | ರಾಜ್ಯಪಾಲರು |
| 17. | ಕರ್ನಾಟಕ ಪಶು ಆಹಾರ (ಉತ್ಪಾದನೆ ಮತ್ತು ಗುಣಮಟ್ಟ ನಿಯಂತ್ರಣದ ವಿನಿಯಮನ) ವಿಧೇಯಕ, 2025 (ವಿಧೇಯಕ ಸಂ.21) | 05.04.2025 | ರಾಜ್ಯಪಾಲರು |

| | | | |
|---|---|---|---|
| | THE KARNATAKA ANIMAL FEED (REGULATION OF MANUFACTURE AND QUALITY CONTROL) BILL, 2025 | | |
| 18. | ಕರ್ನಾಟಕ ಧನವಿನಿಯೋಗ (ಸಂ.2) ವಿಧೇಯಕ, 2025 (ವಿಧೇಯಕ ಸಂ.22)<br><br>THE KARNATAKA APPROPRIATION (No.2) BILL, 2025 | 26.03.2025 | ರಾಜ್ಯಪಾಲರು |
| 19. | ಡಾ.ಎಚ್. ನರಸಿಂಹಯ್ಯ ವಿಜ್ಞಾನ, ಶೈಕ್ಷಣಿಕ, ಸಾಂಸ್ಕೃತಿಕ ಮತ್ತು ಪ್ರವಾಸೋದ್ಯಮ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2025 (ವಿಧೇಯಕ ಸಂ.24)<br><br>Dr. H. NARASIMAIAH SCIENCE, EDUCATIONAL, CULTURAL AND TOURISM DEVELOPMENT AUTHORITY BILL, 2025 | 05.04.2025 | ರಾಜ್ಯಪಾಲರು |
| 20. | ಕರ್ನಾಟಕ ವಿಧಾನಮಂಡಲದ ಸಂಬಳಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂ.25)<br><br>THE KARNATAKA LEGISLATURE SALARIES, PENSIONS AND ALLOWANCES (AMENDMENT) BILL, 2025 | 03.04.2025 | ರಾಜ್ಯಪಾಲರು |

| | | | |
|---|---|---|---|
| 21. | ಕರ್ನಾಟಕ ಮಂತ್ರಿಗಳ ಸಂಬಳಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂ.26)<br>THE KARNATAKA MINISTERS SALARIES AND ALLOWANCES (AMENDMENT) BILL, 2025 | 03.04.2025 | ರಾಜ್ಯಪಾಲರು |
| 22. | ಬೆಂಗಳೂರು ಅರಮನೆ (ಭೂ ಬಳಕೆ ಮತ್ತು ನಿಯಂತ್ರಣ) (ತಿದ್ದುಪಡಿ) ವಿಧೇಯಕ,2025 (ವಿಧೇಯಕ ಸಂ–27)<br>THE BANGALORE PALACE (UTILIZATION AND REGULATION OF LAND) (AMENDMENT) BILL, 2025 | 10.04.2025 | ರಾಜ್ಯಪಾಲರು |
| 23. | ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂ.12)<br>THE KARNATAKA STAMP (AMENDMENT) BILL, 2025 | 05.04.2025 | ರಾಜ್ಯಪಾಲರು |
| 24. | ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂ.11)<br>THE KARNATAKA LAND REVENUE (AMENDMENT) BILL, 2025 | 05.04.2025 | ರಾಜ್ಯಪಾಲರು |
| 25. | ಕರ್ನಾಟಕ ವೃತ್ತಿಗಳ, ಕಸುಬುಗಳ, ಆಜೀವಿಕೆಗಳ ಮತ್ತು ಉದ್ಯೋಗಗಳ | 10.04.2025 | ರಾಜ್ಯಪಾಲರು |

| | | | |
|---|---|---|---|
| | ಮೇಲಣ ತೆರಿಗೆ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂ.8)<br><br>THE KARNATAKA TAX ON PROFESSION, TRADES, CALLINGS AND EMPLOYMENTS (AMENDMENT) BILL, 2025 | | |
| 26. | ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂ.7)<br><br>THE KARNATAKA STATE RURAL DEVELOPMENT AND PANCHAYAT RAJ UNIVERSITY (AMENDMENT) BILL, 2025 | 27.03.2025 | ರಾಜ್ಯಪಾಲರು |
| 27. | ಕರ್ನಾಟಕ ಧನವಿನಿಯೋಗ ವಿಧೇಯಕ, 2025 (ವಿಧೇಯಕ ಸಂ.10)<br><br>THE KARNATAKA APPROPRIATION BILL, 2025 | 26.03.2025 | ರಾಜ್ಯಪಾಲರು |
| 28. | ನೋಂದಣಿ (ಕರ್ನಾಟಕ ತಿದ್ದುಪಡಿ) ವಿಧೇಯಕ, 2025 (ವಿಧೇಯಕ ಸಂ.13)<br><br>THE REGISTRATION (KARNATAKA AMENDMENT) BILL, 2025 | 22.07.2025 | ರಾಷ್ಟ್ರಪತಿಯವರು |

## 7. ಗಮನ ಸೆಳೆಯುವ ಸೂಚನೆ

1. **ಡಾ:ತಳವಾರ್ ಸಾಬಣ್ಣ** ಅವರು ಕಲಬುರಗಿ ಜಿಲ್ಲೆಯಲ್ಲಿನ ಜಮೀನುಗಳನ್ನು ಖರೀದಿಸಿ ಅತ್ಯಮೂಲ್ಯವಾದ ಸುಣ್ಣದ ಕಲ್ಲಿನ ನೈಸರ್ಗಿಕ ಸಂಪನ್ಮೂಲ ಬಳಸಿಕೊಂಡು ಸಿಮೆಂಟ್ ಉತ್ಪಾದನೆ ಮಾಡುತ್ತಿರುವ ಕಾರ್ಖಾನೆಗಳಿಂದ ಜನ ಜಾನುವಾರು ಮತ್ತು ಬೆಳೆಗಳ ಮೇಲೆ ದುಷ್ಪರಿಣಾಮಗಳು ಉಂಟಾಗುತ್ತಿರುವ ಕುರಿತು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರ ಗಮನ ಸೆಳೆದರು.

   ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಉತ್ತರಿಸಿದರು.

2. **ಶ್ರೀ ಐವನ್ ಡಿ'ಸೋಜಾ** ಅವರು ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ಅರಣ್ಯ ವಿಭಾಗದಲ್ಲಿ ಆನೆಗಳ ಸಂಘರ್ಷವನ್ನು ತಡೆಯಲು 'ಎಲಿಫೆಂಟ್ ಟಾಸ್ಕ ಫೋರ್ಸ್' ಅನ್ನು ರಚಿಸಿ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಮತ್ತು ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಗಮನ ಸೆಳೆದರು.

   ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಉತ್ತರಿಸಿದರು.

ಸಂಜೆ 5.10 ಗಂಟೆಗೆ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

3. **ಡಾ: ಎಂ.ಜಿ.ಮುಳೆ** ಅವರು ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿಗೆ ಅನುದಾನದ ಕೊರತೆಯಿಂದಾಗಿ ಬಸವ ಕಲ್ಯಾಣದಲ್ಲಿ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗಿರುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆದರು.

   ಮಾನ್ಯ ಕಂದಾಯ ಸಚಿವರು ಉತ್ತರಿಸಿದರು.

**8. ನಿಯಮ 330ರ ಮೇರೆಗೆ**

1. ಶ್ರೀ ಸಿ.ಎನ್. **ಮಂಜೇಗೌಡ** ಅವರು ರಾಜ್ಯಾದ್ಯಂತ ನಿರ್ಮಾಣಗೊಳ್ಳುತ್ತಿರುವ ಅಕ್ರಮ ಬಡಾವಣೆಗಳನ್ನು ತಡೆಗಟ್ಟಲು ಕಾನೂನು ರೀತ್ಯಾ ಕ್ರಮ ಕೈಗೊಳ್ಳದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಉತ್ತರಿಸಿದರು.

**ನಿಲುವಳಿ ಸೂಚನೆ**

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ,** ಮಾನ್ಯ ವಿರೋಧ ಪಕ್ಷದ ನಾಯಕರು, **ಶ್ರೀ ಎನ್. ರವಿಕುಮಾರ್,** ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಮಾನ್ಯ ಶಾಸಕರುಗಳಾದ **ಶ್ರೀ ಶಶೀಲ್ ಜಿ. ನಮೋಶಿ, ಶ್ರೀ ಎಸ್.ಎಲ್. ಭೋಜೇಗೌಡ, ಶ್ರೀ ಶರವಣ ಟಿ.ಎ,** ಹಾಗೂ ಇತರರು ಬೆಂಗಳೂರಿನ ಕಾಡುಗೋಡಿ ಪ್ಲಾಂಟೇಷನ್ ಪ್ರದೇಶದಲ್ಲಿರುವ ಕೃಷಿ ಭೂಮಿಯನ್ನು ಅರಣ್ಯ ಭೂಮಿಯೆಂದು ಗುರುತಿಸಿರುವ ಕುರಿತು ನಿಯಮ 59ರ ಅಡಿಯಲ್ಲಿ ಪ್ರಸ್ತಾಪಿಸಲು ಅನುಮತಿ ನೀಡಬೇಕೆಂದು ಕೋರಿದರು.

ನಿಲುವಳಿ ಸೂಚನೆಯನ್ನು ನಿಯಮ 68ರ ಅಡಿಯಲ್ಲಿ ಚರ್ಚಿಸಲು ಅವಕಾಶ ಕಲ್ಪಿಸಿರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

ಸದನವನ್ನು ಸಂಜೆ 5.53 ಗಂಟೆಯಲ್ಲಿ ಮುಂದೂಡಿ ದಿನಾಂಕ:12.08.2025ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**

**ಕಾರ್ಯದರ್ಶಿ**

****

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತಾರನೆಯ ಅಧಿವೇಶನ

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಮಂಗಳವಾರ, ದಿನಾಂಕ:12.08.2025**

**(02)**

ಸದನವು ಬೆಳಗ್ಗೆ 11.05 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ ಅವರು ಮಾನ್ಯ ಸಹಕಾರ ಸಚಿವರನ್ನು ವಜಾ ಮಾಡಿರುವ ವಿಷಯದ ಕುರಿತು ಪ್ರಸ್ತಾಪಿಸಿದರು.

ಬೆಳಗ್ಗೆ 11.08 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು(**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

ಸದನವು ಮಧ್ಯಾಹ್ನ 11.23 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಪ್ರಶ್ನೋತ್ತರ

ದಿನಾಂಕ:12.08.2025ರಂದು ಸದನದಲ್ಲಿ ಉತ್ತರಿಸುವ ಸಮೂಹ–IIರ 2ನೇ ಪಟ್ಟಿಯ ಈ ಕೆಳಕಂಡ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 16(252)
2. 17(367)

3. 18(282)
4. 19(239)
5. 20(255)
6. 21(261)
7. 22(253)
8. 23(297)
9. 24(267)
10. 25(272)
11. 26(217)
12. 27(284)
13. 28(169)
14. 29(172)
15. 30(233)

ವರ್ಗಾವಣೆ

ದಿನಾಂಕ:12.08.2025ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IIರ 2ನೇ ಪಟ್ಟಿಯ ಒಟ್ಟು 121 ಪ್ರಶ್ನೆಗಳ ಪೈಕಿ 78 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

## 2. ಶೂನ್ಯವೇಳೆ ಪ್ರಸ್ತಾವಗಳು

1. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ರಾಜ್ಯದಲ್ಲಿ ಕಳೆದ 30 ವರ್ಷಗಳಲ್ಲಿ 98 ಸಫಾಯಿ ಕರ್ಮಚಾರಿಗಳು ಶೌಚದ ಗುಂಡಿ

ಹಾಗೂ ಒಳಚರಂಡಿಗಳಲ್ಲಿ ಕೆಲಸ ಮಾಡುವ ಸಂದರ್ಭದಲ್ಲಿ ಉಸಿರುಗಟ್ಟಿ ಸಾವನ್ನಪ್ಪಿರುವ ಬಗ್ಗೆ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಉತ್ತರಿಸಿದರು.

2. **ಶ್ರೀ ಸಿ.ಎನ್. ಮಂಜೇಗೌಡ** ಅವರು ಮೈಸೂರಿನ ಚಾಮರಾಜೇಂದ್ರ ಮೃಗಾಲಯದ, ಕೃಷ್ಣರಾಜ ಸಾಗರ (ಕೆ.ಆರ್.ಎಸ್) ಬೃಂದಾವನ, ಶ್ರೀರಂಗಪಟ್ಟಣ ತಾಲ್ಲೂಕಿನ ರಂಗನತಿಟ್ಟು ಪಕ್ಷಿಧಾಮ ಪ್ರವೇಶ ದರ ಹಾಗೂ ಬೋಟಿಂಗ್‌ಗಳಿಗೆ ಹೆಚ್ಚಿಸಿರುವ ದರಗಳನ್ನು ಹಿಂಪಡೆಯುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ಪಿ.ಹೆಚ್. ಪೂಜಾರ್** ಅವರು ಸಂಸ್ಕೃತ ವಿಶ್ವವಿದ್ಯಾಲಯದ ಹೊಸ ಕ್ಯಾಂಪಸ್, ಮರಡಿಗುಡ್ಡೆಯ 100 ಎಕರೆಯಲ್ಲಿ ಕಟ್ಟಡ ನಿರ್ಮಾಣಗೊಂಡರೂ ಬಳಕೆಯಾಗದೆ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದ್ದು, ಕೂಡಲೇ ಮೂಲಸೌಕರ್ಯಗಳನ್ನು ಕಲ್ಪಿಸಿ ವಿಶ್ವವಿದ್ಯಾಲಯದ ಕಟ್ಟಡ ಉದ್ಘಾಟಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉನ್ನತ ಶಿಕ್ಷಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಡಾ: ಧನಂಜಯ ಸರ್ಜಿ** ಅವರು ಕೇಂದ್ರ ಸರ್ಕಾರವು ದಿನಾಂಕ:25.06.2025ರಲ್ಲಿ ಹೊರಡಿಸಿರುವ ಆದೇಶದಲ್ಲಿ

ತಿಳಿಸಿರುವಂತೆ ಹೊಸ ವಿದ್ಯುತ್ ಸಂಪರ್ಕ ಕಲ್ಪಿಸುವ ಸಂಬಂಧ ಇರುವ ಕಾಯ್ದೆಗೆ ತಿದ್ದುಪಡಿ ತರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಇಂಧನ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಟಿ.ಎನ್. ಜವರಾಯಿಗೌಡ** ಅವರು ಸಾಮಾಜಿಕ ಹೊಣೆಗಾರಿಕೆ ಯೋಜನೆಯಡಿ (ಸಿ.ಎಸ್.ಆರ್ ಅನುದಾನದಡಿ) ಬೆಂಗಳೂರು ನಗರದಲ್ಲಿ ಸರ್ಕಾರಿ ಶಾಲೆಗಳನ್ನು ತುರ್ತಾಗಿ ದುರಸ್ಥಿಪಡಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಡಾ: ತಳವಾರ್ ಸಾಬಣ್ಣ** ಅವರು ಕಲಬುರ್ಗಿ ಜಿಲ್ಲೆ ಸೇಡಂ ತಾಲ್ಲೂಕಿನ ಮಳಖೇಡ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಬರುವ ಕೊಂಕನಹಳ್ಳಿ ಗ್ರಾಮದಲ್ಲಿ ನೆಟ್ಟಿರುವ ಹಾಗೂ ನಾಮಫಲಕವನು ತೆರವುಗೊಳಿಸದೆ ಉಳಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಶ್ರೀ ರಾಮೋಜಿಗೌಡ** ಅವರು ರಾಜ್ಯದ ಎಲ್ಲಾ ಮಲ್ಟಿಪ್ಲೆಕ್ಸ್ ಮತ್ತು ಚಿತ್ರ ಮಂದಿರಗಳಲ್ಲಿ ಏಕರೂಪದ ದರ ಜಾರಿಗೊಳಿಸಿ ಸರ್ಕಾರ ಆದೇಶಿಸಿದ್ದರೂ, ಕೆಲವು ಮಲ್ಟಿಪ್ಲೆಕ್ಸ್‌ಗಳಲ್ಲಿ ಪರಭಾಷಾ ಚಿತ್ರಗಳಿಗೆ ಹೆಚ್ಚಿನ ದರ ನಿಗದಿಪಡಿಸಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀ ಮಂಜುನಾಥ್ ಭಂಡಾರಿ** ಅವರು ಭೂ ಪರಿವರ್ತಿತ ಜಮೀನಿನ ಏಕವಿನ್ಯಾಸ ನಕ್ಷೆಗಳಿಗೆ ಜಿಲ್ಲಾ ಕೇಂದ್ರ ಅನುಮೋದನೆ ಪಡೆಯಬೇಕಾಗಿರುವುದರಿಂದ ತೊಂದರೆಯಾಗುತ್ತಿದ್ದು, ಯೋಜನಾ ಪ್ರದೇಶದ ವ್ಯಾಪ್ತಿಯಿಂದ ಹೊರಗಿರುವ ಗ್ರಾಮ ಪಂಚಾಯತಿಗಳಿಗೆ ಪ್ರತ್ಯೇಕ ಗ್ರಾಮಾಂತರ ಯೋಜನೆ ರೂಪಿಸಿ ಸರಳ ನಿಯಮಗಳನ್ನು ಅಳವಡಿಸುವ ಬಗ್ಗೆ ಪ್ರಸ್ತಾಪಿಸಿದರು.

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಮಾತೃ ಭಾಷೆ ಕೊಂಕಣಿ ಎಂಬ ಕಾರಣದಿಂದ ಕಾಸರಗೋಡಿನ ಕನ್ನಡ ವಿದ್ಯಾರ್ಥಿಗಳಿಗೆ ಕರ್ನಾಟಕದಲ್ಲಿ ಉನ್ನತ ಶಿಕ್ಷಣ ನಿಷೇಧ ಮಾಡಿರುವ ಬಗ್ಗೆ ಪ್ರಸ್ತಾಪಿಸಿದರು.

ಮಾನ್ಯ ಕೃಷಿ ಸಚಿವರು ಉತ್ತರಿಸಿದರು.

10. **ಶ್ರೀ ಗೋವಿಂದರಾಜು** ಅವರು ಕೋಲಾರ ಜಿಲ್ಲೆ, ಕೆಜಿಎಫ್‌ನಲ್ಲಿ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಉತ್ತಮ ಗುಣಮಟ್ಟದ ಪರಿಕರಗಳನ್ನು ವಿತರಿಸಿ ಕೊಳವೆ ಬಾವಿ ಕೊರೆಸುವ ಬಗ್ಗೆ ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

11. **ಶ್ರೀ ಎಂ. ನಾಗರಾಜು** ಅವರು ನೆಲಮಂಗಲದ ಅರಶಿನಕುಂಟೆ ಬಿನ್ನಮಂಗಲದ ಕೆರೆಗಳ ನೀರು ಕಲುಷಿತಗೊಂಡಿದ್ದು, ಬಳಕೆಗೆ ಯೋಗ್ಯವಾಗುವಂತೆ ಕೂಡಲೇ ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ ಪ್ರಸ್ತಾಪಿಸಿದರು.

ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರಿಸಿದರು.

12. **ಶ್ರೀ ಶರವಣ ಟಿ.ಎ** ಅವರು ಸರ್ಕಾರದ ವಿವಿಧ ವಸತಿ ಯೋಜನೆಗಳಡಿ ಅಪೂರ್ಣಗೊಂಡಿರುವ ಮನೆಗಳ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸುವ ಬಗ್ಗೆ ಪ್ರಸ್ತಾಪಿಸಿದರು.

ಮಾನ್ಯ ವಸತಿ ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

13. **ಶ್ರೀ ಕಿಶೋರ್ ಕುಮಾರ್ ಪುತ್ತೂರ್** ಅವರು ರಾಷ್ಟ್ರೀಯ ಸ್ವಯಂ ಸೇವಕ ಸಂಘದ ವಿರುದ್ಧ ಸುಳ್ಳು ಸುದ್ದಿ ಹರಡುತ್ತಿರುವ ಬಗ್ಗೆ ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

14. **ಶ್ರೀ ಸಿ.ಟಿ. ರವಿ** ಅವರು ರಾಜ್ಯದ ವಿವಿಧ ಭಾಗಗಳಲ್ಲಿ ಗೋಹತ್ಯೆ ಪ್ರಕರಣಗಳು ನಡೆಯುತ್ತಿರುವ ಬಗ್ಗೆ ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

## 3. ಶೂನ್ಯವೇಳೆ ಪ್ರಸ್ತಾವಗಳಿಗೆ ಉತ್ತರ

1. **ಶ್ರೀ ಡಿ.ಎಸ್. ಅರುಣ್** ಅವರು ರಾಜ್ಯದ ಧಾರ್ಮಿಕ ಹೆಮ್ಮೆ ಮತ್ತು ಸಾಂಸ್ಕೃತಿಕ ಕೇಂದ್ರವಾಗಿರುವ ಧರ್ಮಸ್ಥಳದ ವಿರುದ್ಧ ಅನಾಮಿಕ ವ್ಯಕ್ತಿಯೊಬ್ಬರೂ ಯಾವುದೇ ಸಾಕ್ಷ್ಯವಿಲ್ಲದೆ ಆರೋಪ ಮಾಡಿರುವ ಕುರಿತು ದಿನಾಂಕ:11.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

2. **ಶ್ರೀ ಪಿ.ಹೆಚ್. ಪೂಜಾರ್ ಮತ್ತು ಶ್ರೀ ಶಶೀಲ್ ಜಿ. ನಮೋಶಿ** ಅವರುಗಳು ರಾಜ್ಯದಲ್ಲಿ ಮಹಿಳೆಯರು ಮತ್ತು ಹೆಣ್ಣು ಮಕ್ಕಳು ನಾಪತ್ತೆ ಪ್ರಕರಣಗಳಿಗೆ ಸಂಬಂಧಿಸಿದಂತೆ "ರಾಜ್ಯದ 7 ಜಿಲ್ಲೆಗಳಲ್ಲಿ 2719 ಮಹಿಳೆಯರು ನಾಪತ್ತೆ, ಕಲ್ಯಾಣ ಕರ್ನಾಟಕ ಭಾಗದಲ್ಲೇ ಹೆಚ್ಚು ಪ್ರಕರಣಗಳು ದಾಖಲು" ಎಂಬ ಶೀರ್ಷಿಕೆಯಡಿಯಲ್ಲಿ ಪ್ರಕಟಗೊಂಡಿರುವ ವಿಷಯದ ಕುರಿತು ದಿನಾಂಕ:11.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

3. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ದಕ್ಷಿಣ ಭಾರತದಲ್ಲಿ ಮೊಟ್ಟಮೊದಲು ಪ್ರಾರಂಭವಾದ ಗುಲಬರ್ಗಾ ದೂರದರ್ಶನ ಕೇಂದ್ರವನ್ನು ಕೇಂದ್ರ ಸರ್ಕಾರ ಬಂದ್ ಮಾಡಲು ಹೊರಟಿರುವ ಬಗ್ಗೆ ದಿನಾಂಕ:04.08.2025ರಂದು ಸಂಯುಕ್ತ ಕರ್ನಾಟಕ ದಿನ ಪತ್ರಿಕೆಯಲ್ಲಿ ವರದಿಯಾಗಿರುವ ಕುರಿತು ದಿನಾಂಕ:11.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

4. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ತಂತ್ರಜ್ಞಾನ ಆಧಾರಿತ ಸ್ಮಾರ್ಟ್ ಬೋರ್ಡ್, ಡಿಜಿಟಲ್ ಕ್ಲಾಸ್‌ಗಳಲ್ಲಿ ಬೋಧನೆ ಮಾಡುವ ಮೂಲಕ ಮಕ್ಕಳನ್ನು ಆಧುನಿಕ ಜಗತ್ತಿಗೆ

ತಯಾರುಗೊಳಿಸಿ ಮಾನವ ಸಂಪನ್ಮೂಲವನ್ನು ಮೇಲ್ದರ್ಜೆಗೆ ಏರಿಸಬೇಕಿದೆ ಎಂಬ ಕುರಿತು ದಿನಾಂಕ:11.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

5. **ಶ್ರೀ ಎಂ. ನಾಗರಾಜು** ಅವರು ದಿನಾಂಕ:09.08.2025ರಂದು "ನಂದಗಡ ಮಾರ್ಕೆಟಿಂಗ್ ಸೊಸೈಟಿಯಲ್ಲಿ ಅವ್ಯವಹಾರ" ಎಂದು ಸಂಯುಕ್ತ ಕರ್ನಾಟಕ ದಿನಪತ್ರಿಕೆಯಲ್ಲಿ ವರದಿಯಾಗಿರುವ ಕುರಿತು ದಿನಾಂಕ:11.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

ಮಾನ್ಯ ವಿರೋಧ ಪಕ್ಷದ ನಾಯಕರು ಮಾನ್ಯ ಸಚಿವರನ್ನು ವಜಾಗೊಳಿಸಿರುವ ಬಗ್ಗೆ ಪತ್ರಿಕೆಯಲ್ಲಿ ಪ್ರಕಟಣೆಯಾಗಿರುವ ಬಗ್ಗೆ ಮಾಹಿತಿ ನೀಡಬೇಕೆಂದು ಸರ್ಕಾರವನ್ನು ಒತ್ತಾಯಿಸಿದರು.

ಮಾನ್ಯ ಸಭಾನಾಯಕರು ಈ ವಿಷಯವು ಮಾನ್ಯ ಮುಖ್ಯಮಂತ್ರಿಯವರ ವಿವೇಚನೆಗೆ ಬಿಟ್ಟಿರುವ ವಿಚಾರವಾಗಿದೆಯೆಂದು ತಿಳಿಸಿದರು.

ಮಧ್ಯಾಹ್ನ 1.50 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಸದನವು ಮಧ್ಯಾಹ್ನ 3.25 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**"ಸಚಿವರ ರಾಜೀನಾಮೆ ಕುರಿತು"**

**"ಗದ್ದಲ"**

ಈ ಕೆಳಕಂಡ ಮಾನ್ಯ ಶಾಸಕರುಗಳು ಸಚಿವರ ರಾಜೀನಾಮೆ ಕುರಿತು ಮಾತನಾಡಿದರು.

1. ಶ್ರೀ ಅಡಗೂರ್ ಹೆಚ್. ವಿಶ್ವನಾಥ್
2. ಶ್ರೀ ಕೆ.ಎಸ್. ನವೀನ್

**3. ನಿಯಮ 330ರ ಮೇರೆಗೆ**

1. **ಶ್ರೀ ಎಸ್.ಎಲ್. ಭೋಜೇಗೌಡ** ಅವರು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಕೈಗಾರಿಕಾ ಪ್ರದೇಶಗಳನ್ನು ಸ್ಥಾಪಿಸಲು ವಶಪಡಿಸಿಕೊಳ್ಳಲಾದ ಜಮೀನುಗಳಿಗೆ ಭೂ ಪರಿಹಾರ ಪಾವತಿಯನ್ನು ಬಟವಾಡೆ ಮಾಡುವಾಗ ಉಂಟಾಗಿರುವ ಲೋಪದೋಷಗಳ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಉತ್ತರಿಸಿದರು.

   ಮಾನ್ಯ ಶಾಸಕರಾದ ಶ್ರೀ ಪಿ.ಹೆಚ್. ಪೂಜಾರ್ ಅವರು ಸ್ಪಷ್ಟೀಕರಣ ಕೋರಿದರು.

   ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಸ್ಪಷ್ಟೀಕರಣ ನೀಡಿದರು.

**4. ಗಮನ ಸೆಳೆಯುವ ಸೂಚನೆ**

1. **ಡಾ: ಧನಂಜಯ ಸರ್ಜಿ** ಅವರು ರಾಜ್ಯದಲ್ಲಿ ಪದವಿ ಮತ್ತು ಉನ್ನತ ವ್ಯಾಸಂಗದ ಕೋರ್ಸುಗಳ ಪಠ್ಯಕ್ರಮವನ್ನು ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಾದ ಯು.ಪಿ.ಎಸ್.ಸಿ, ಎಸ್.ಎಸ್.ಸಿ ಹಾಗೂ ಇನ್ನಿತರೆ

ನೇಮಕಾತಿಗಳಿಗೆ ಅನುಕೂಲವಾಗುವಂತೆ ಪರಿಷ್ಕೃತಗೊಳಿಸುವ ಕುರಿತು ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆದರು.

ಮಧ್ಯಾಹ್ನ 4.18 ಗಂಟೆಯಲ್ಲಿ ಶ್ರೀ ಎಸ್.ಎಲ್. ಭೋಜೇಗೌಡ ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

ಮಾನ್ಯ ಉನ್ನತ ಶಿಕ್ಷಣ ಸಚಿವರು ಉತ್ತರಿಸಿದರು.

2. **ಶ್ರೀ ವೈ.ಎಂ. ಸತೀಶ್** ಅವರು ಬಳ್ಳಾರಿ ನಗರದಲ್ಲಿರುವ ತಾರಾನಾಥ ಆಯುರ್ವೇದ ಕಾಲೇಜಿನಲ್ಲಿನ ಬೋಧಕ ಹುದ್ದೆಗಳು ಖಾಲಿ ಇರುವುದರಿಂದ, ಭಾರತೀಯ ವೈದ್ಯಕೀಯ ರಾಷ್ಟ್ರೀಯ ಆಯೋಗವು ವಿದ್ಯಾರ್ಥಿಗಳ ಪ್ರವೇಶವನ್ನು ಕಡಿಮೆ ಮಾಡಲು ಶಿಫಾರಸ್ಸು ಮಾಡಿರುವ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಉತ್ತರಿಸಿದರು.

## 05. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಕುರಿತು ಚರ್ಚೆ

**ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್ ಮತ್ತು ಮಾನ್ಯ ಶಾಸಕರುಗಳಾದ ಶ್ರೀ ಶಶೀಲ್ ಜಿ. ನಮೋಶಿ, ಶ್ರೀ ಎಸ್.ಎಲ್. ಭೋಜೇಗೌಡ, ಶ್ರೀ ಶರವಣ ಟಿ.ಎ ಹಾಗೂ ಇತರರು** ಬೆಂಗಳೂರಿನ ಕಾಡುಗೋಡಿ ಪ್ಲಾಂಟೇಷನ್ ಪ್ರದೇಶದಲ್ಲಿರುವ ಕೃಷಿ ಭೂಮಿಯನ್ನು ಅರಣ್ಯ ಭೂಮಿಯೆಂದು ಗುರುತಿಸಿರುವ ಕುರಿತು ಚರ್ಚೆ.

ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ ಅವರು ಚರ್ಚೆಯನ್ನು ಪ್ರಾರಂಭಿಸಿದರು.

ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಉತ್ತರಿಸಿದರು.

ಸಂಜೆ 5.15 ಗಂಟೆಗೆ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪೀಠದಲ್ಲಿ ಆಸೀನರಾದರು.

ಈ ಕೆಳಕಂಡ ಮಾನ್ಯ ಶಾಸಕರು ಸ್ಪಷ್ಟೀಕರಣ ಕೋರಿದರು.

1. ಶ್ರೀ ಸಿ.ಟಿ. ರವಿ

2. ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು

ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಹಾಗೂ ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರುಗಳು ಉತ್ತರಿಸಿದರು.

ಸಂಜೆ 6.20 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ:13.08.2025ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**

**ಕಾರ್ಯದರ್ಶಿ**

****

# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತಾರನೆಯ ಅಧಿವೇಶನ

## ಲಘು ಪ್ರಕಟಣೆ ಭಾಗ-1

## ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಬುಧವಾರ, ದಿನಾಂಕ:13.08.2025**

**(03)**

ಸದನವು ಬೆಳಗ್ಗೆ: 11.20 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

### 1. ಪ್ರಶ್ನೋತ್ತರ

ದಿನಾಂಕ:13.08.2025ರಂದು ಸದನದಲ್ಲಿ ಉತ್ತರಿಸುವ ಸಮೂಹ-IIIರ 3ನೇ ಪಟ್ಟಿಯ ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

| | | |
|---|---|---|
| 1. | 31(448) | |
| 2. | 32(399) | |
| 3. | 33(443) | ವರ್ಗಾವಣೆ |
| 4. | 34(354) | |
| 5. | 35(435) | |
| 6. | 36(386) | |
| 7. | 37(220) | ಗೈರು ಹಾಜರಿ |
| 8. | 38(336) | |

9. 39(346)
10. 40(388)
11. 41(434)
12. 42(407)
13. 43(326)
14. 44(325)
15. 45(310)

ದಿನಾಂಕ:13.08.2025ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ-IIIರ 3ನೇ ಪಟ್ಟಿಯ ಒಟ್ಟು 133 ಪ್ರಶ್ನೆಗಳ ಪೈಕಿ **53** ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

## 2. ಪ್ರಕಟಣೆ

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಮಧ್ಯಾಹ್ನ 1.30 ಗಂಟೆಗೆ ಬ್ಯಾಂಕ್ವೆಟ್ ಹಾಲ್‌ನಲ್ಲಿ ಭೋಜನ ಕೂಟವನ್ನು ಏರ್ಪಡಿಸಲಾಗಿದ್ದು, ಮಾನ್ಯ ಎಲ್ಲಾ ಶಾಸಕರುಗಳು ಭೋಜನ ಕೂಟದಲ್ಲಿ ಭಾಗವಹಿಸಬೇಕೆಂದು ಮಾನ್ಯ ಸಭಾಪತಿಯವರು ಪ್ರಕಟಿಸಿದರು.

## 3. ಶೂನ್ಯವೇಳೆ ಪ್ರಸ್ತಾವಗಳು

1. **ಶ್ರೀ ಕೇಶವ ಪ್ರಸಾದ್ ಎಸ್** ಅವರು ಮಂಡ್ಯ ಜಿಲ್ಲೆ, ಆಲಕೇರಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳಿಗೆ ಮಧ್ಯಾಹ್ನ ಬಿಸಿ ಊಟ ಯೋಜನೆಯಡಿ ಮೊಟ್ಟೆ ವಿತರಿಸುವ ಕುರಿತು ಪೋಷಕರಿಂದ ವಿರೋಧ ವ್ಯಕ್ತವಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರವನ್ನು ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ರಾಮೋಜಿಗೌಡ** ಅವರು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಉದ್ಯೋಗ ವಿನಿಮಯ ಕೇಂದ್ರ ಸ್ಥಾಪಿಸಿ ಜಾಬ್ ಕಾರ್ಡ್ (ಎಂಪ್ಲಾಯಮೆಂಟ್ ಕಾರ್ಡ್) ಮಾಡಿಸುವ ಪ್ರಕ್ರಿಯೆಗೆ ಚಾಲನೆ ನೀಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರಿಂದ ಉತ್ತರವನ್ನು ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು 2012ರಲ್ಲಿ ಆಫ್ರಿಕನ್ ಕ್ಯಾಟ್‌ಫಿಶ್‌ಗಳ ಸಾಕಾಣಿಕೆಯನ್ನು ಸರ್ಕಾರ ನಿಷೇಧಿಸಿದ್ದರೂ, ಅಕ್ರಮವಾಗಿ ಸಾಕಾಣಿಕೆ ಮಾಡುತ್ತಿರುವುದು ಜನರ ಅನಾರೋಗ್ಯಕ್ಕೆ ಕಾರಣವಾಗಿರುವುದರಿಂದ ಕಟ್ಟುನಿಟ್ಟಾಗಿ ಇದನ್ನು ನಿಯಂತ್ರಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಉತ್ತರಿಸಿದರು.

4. **ಶ್ರೀ ಪಿ.ಹೆಚ್. ಪೂಜಾರ್** ಅವರು ಬಾಗಲಕೋಟೆ ಜಿಲ್ಲೆ ಹುನಗುಂದ ಪುರಸಭೆಯ ವ್ಯಾಪ್ತಿಯಲ್ಲಿ ಸರ್ಕಾರದ ಅನುದಾನದಡಿ ನಿರ್ಮಿಸಿದ ಶೌಚಾಲಯ ಹಾಗೂ ಕಟ್ಟಡಗಳ ಸೂಕ್ತ ನಿರ್ವಹಣೆ ಆಗದಿರುವ ಬಗ್ಗೆ ಹಾಗೂ ಮಾರುಕಟ್ಟೆ ಅವ್ಯವಸ್ಥೆ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರಿಂದ ಉತ್ತರವನ್ನು ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀ ಟಿ.ಎನ್. ಜವರಾಯಿ ಗೌಡ** ಅವರು ನೈಸ್ ಸಂಸ್ಥೆಯ ಬೆಂಗಳೂರು-ಮೈಸೂರು ಇನ್ಫ್ರಾಸ್ಟ್ರಕ್ಚರ್ ಕಾರಿಡಾರ್ (ಬಿ.ಎಂ.ಐ.ಸಿ) ಯೋಜನೆಯ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಗಳಿಂದ ಉತ್ತರವನ್ನು ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀ ಎಂ. ನಾಗರಾಜು** ಅವರು ಚಾಮರಾಜನಗರ ಜಿಲ್ಲೆ ಹನೂರು ತಾಲ್ಲೂಕಿನ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿನ ಕೊಠಡಿಗಳನ್ನು ದುರಸ್ಥಿಗೊಳಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರವನ್ನು ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.** ಅವರು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಭೂ ಪರಿವರ್ತನೆಗೊಳಿಸುವ ಜಮೀನಿಗೆ ಸರ್ಕಾರಿ ರಸ್ತೆ ಸಂಪರ್ಕ ಹೊಂದಿದ್ದರೆ ಮಾತ್ರ ಭೂ ಪರಿವರ್ತನೆ ಮಾಡುವ ಹಾಗೂ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ದೊರಕುತ್ತಿದ್ದ 9/11ಎ ಖಾತಾ ದೃಢೀಕರಣ ಪತ್ರವನ್ನು ಸ್ಥಳೀಯ ಯೋಜನಾ ಪ್ರಾಧಿಕಾರಕ್ಕೆ ವರ್ಗಾಯಿಸಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಂದಾಯ ಸಚಿವರಿಂದ ಉತ್ತರವನ್ನು ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

8. **ಶ್ರೀ ಬಿ.ಕೆ. ಹರಿಪ್ರಸಾದ್** ಅವರು ರಾಜ್ಯದಲ್ಲಿ ಆ್ಯಸಿಡ್ ದಾಳಿಗೆ ಒಳಗಾದ ಮಹಿಳೆಯರಿಗೆ ನೀಡುತ್ತಿರುವ ಪಿಂಚಣಿಯನ್ನು ಹೆಚ್ಚಿಸುವ ಹಾಗೂ ವಿಶೇಷ ಸೌಲಭ್ಯದಡಿ ಹಂಚಿಕೆ ಮಾಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರವನ್ನು ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. **ಶ್ರೀ ಕೆ. ಅಬ್ದುಲ್ ಜಬ್ಬರ್** ಅವರು ದಾವಣಗೆರೆ ಜಿಲ್ಲೆಯ ಚನ್ನಗಿರಿ ತಾಲ್ಲೂಕಿನ ಕೆರೆಬಿಳಚಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸ್ತ್ರೀರೋಗ ತಜ್ಞರ ವರ್ಗಾವಣೆ ಹಾಗೂ ಹುದ್ದೆಗಳನ್ನು ಕಡಿತಗೊಳಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರವನ್ನು ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

10. **ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್)** ಅವರು ರಾಷ್ಟ್ರೀಯ ಶಿಕ್ಷಣ ನೀತಿ (ಎನ್‌ಇಪಿ) ಜಾರಿಗೊಳಿಸುವ ಹಾಗೂ ಶಿಕ್ಷಣ ಇಲಾಖೆಯಲ್ಲಿ ಅನುಕಂಪದ ಆಧಾರದ ನೇಮಕಾತಿ ಪ್ರಕ್ರಿಯೆ ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರವನ್ನು ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

11. **ಶ್ರೀ ಶಶೀಲ್ ಜಿ. ನಮೋಶಿ** ಅವರು ರಾಜ್ಯದ ಸಾವಿರಾರು ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಮಸ್ಯೆಗಳನ್ನು ಬಗೆಹರಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರವನ್ನು ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

12. **ಶ್ರೀಮತಿ ಬಲ್ಕೀಸ್ ಬಾನು** ಅವರು ಬೆಳಗಾವಿ ಜಿಲ್ಲೆಯ ರಾಮದುರ್ಗ ತಾಲ್ಲೂಕಿನಲ್ಲಿ ಹಿಂಬದಿ ಮುಖ್ಯರಸ್ತೆ ಬದಿಯಲ್ಲಿರುವ ಜಮೀನಿನ ಮಾಲೀಕರು ಹಿಂಬದಿ ಜಮೀನುಗಳಿಗೆ ಹೋಗುವ ಯುವಕರನ್ನು ಮರಕ್ಕೆ ಕಟ್ಟಿ ಹಲ್ಲೆ ಮಾಡಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರಿಂದ ಉತ್ತರವನ್ನು ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

13. **ಶ್ರೀ ಐವನ್ ಡಿ'ಸೋಜಾ** ಅವರು ಮಂಗಳೂರಿನ ಕೇಂದ್ರ ಕಾರಾಗೃಹಕ್ಕೆ ಅಳವಡಿಸಿರುವ ಜಾಮರ್‌ನಿಂದಾಗಿ ಉಂಟಾಗಿರುವ ಸಮಸ್ಯೆಗಳ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರು ಉತ್ತರಿಸಿದರು.

14. **ಶ್ರೀಮತಿ ಹೇಮಲತಾ ನಾಯಕ್** ಅವರು ಕೊಪ್ಪಳ ಜಿಲ್ಲೆಯಲ್ಲಿ ರಾಷ್ಟ್ರೀಯ ಹೆದ್ದಾರಿಯಿಂದ ಕೇಂದ್ರೀಯ ವಿದ್ಯಾಲಯದ ತನಕ ಚತುಷ್ಪಥ ರಸ್ತೆ ನಿರ್ಮಿಸಿ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರಿಂದ ಉತ್ತರವನ್ನು ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

15. **ಶ್ರೀ ಮಂಜುನಾಥ್ ಭಂಡಾರಿ** ಅವರು ಉಡುಪಿ ಜಿಲ್ಲೆಯಲ್ಲಿ ಗ್ರಾಮ ಸಡಕ್ ಯೋಜನೆಯಡಿ ನಿರ್ಮಿತವಾದ ರಸ್ತೆಗಳು

ದುರಸ್ಥಿತಿಯಾಗಿದ್ದು, ಕೂಡಲೇ ಸರಿಪಡಿಸಲು ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಲೋಕೋಪಯೋಗಿ ಸಚಿವರಿಂದ ಉತ್ತರವನ್ನು ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

16. **ಶ್ರೀ ಬಿ.ಜಿ. ಪಾಟೀಲ್** ಅವರು ಕಲಬುರಗಿ ಜಿಲ್ಲೆ, ಚಿತ್ತಾಪುರ ತಾಲ್ಲೂಕಿನ ವಾಡಿ ಪಟ್ಟಣದ ಬಸವಮಣಿ ನಿವಾಸಿಗಳಿಗೆ ಹಕ್ಕುಪತ್ರ ನೀಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಂದಾಯ ಸಚಿವರಿಂದ ಉತ್ತರವನ್ನು ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

17. **ಶ್ರೀ ಚಿದಾನಂದ್ ಎಂ. ಗೌಡ** ಅವರು ಮೈಸೂರು ವಿಶ್ವವಿದ್ಯಾಲಯದಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉನ್ನತ ಶಿಕ್ಷಣ ಸಚಿವರು ಉತ್ತರಿಸಿದರು.

ಮಧ್ಯಾಹ್ನ 1.45 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

ಸದನವು ಮಧ್ಯಾಹ್ನ 3.30 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## ಶೂನ್ಯವೇಳೆ ಪ್ರಸ್ತಾವ

18. **ಶ್ರೀ ಎನ್. ರವಿಕುಮಾರ್** ಅವರು ಬೆಂಗಳೂರು ನಗರ ಒಳಗೊಂಡಂತೆ ರಾಜ್ಯದಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರವನ್ನು ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

**4. ಚುನಾವಣಾ ಪ್ರಸ್ತಾವಗಳು**

2025-26ನೇ ಸಾಲಿನ ವಿಧಾನ ಮಂಡಲದ ಜಂಟಿ ಸಮಿತಿಗಳು ಹಾಗೂ ವಿಧಾನ ಪರಿಷತ್ತಿನ ಈ ಕೆಳಕಂಡ ಸ್ಥಾಯಿ ಸಮಿತಿಗಳಿಗೆ ಸದಸ್ಯರುಗಳನ್ನು ಚುನಾಯಿಸಬೇಕೆಂಬ ಪ್ರಸಾವವನ್ನು ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಮಂಡಿಸಿದರು.

ಅ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 259(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸರ್ಕಾರಿ ಭರವಸೆಗಳ ಸಮಿತಿಗೆ ಒಂಭತ್ತು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಆ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 250(1)ನೇ ನಿಯಮದ ಅನುಸಾರವಾಗಿ ಈ ಸಭೆ **ಹಕ್ಕುಬಾಧ್ಯತಾ ಸಮಿತಿಗೆ ಏಳು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಇ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 349(2)ನೇ ನಿಯಮದ ಅನುಸಾರವಾಗಿ ಈ ಸಭೆ **ವಸತಿ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ

ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಈ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 261(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸದಸ್ಯರುಗಳ ಖಾಸಗಿ ವಿಧೇಯಕಗಳು ಮತ್ತು ನಿರ್ಣಯಗಳ ಸಮಿತಿಗೆ ಎಂಟು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಉ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 245(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಊ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 248ನೇ ನಿಯಮದ ಅನುಸಾರವಾಗಿ ಈ ಸಭೆ **ಸಾರ್ವಜನಿಕ ಉದ್ಯಮಗಳ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಋ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 254(1)ನೇ ನಿಯಮದ ಅನುಸಾರವಾಗಿ ಈ ಸಭೆ **ಅಧೀನ ಶಾಸನ ರಚನಾ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ

ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಎ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 264ನೇ ನಿಯಮದ ಅನುಸಾರವಾಗಿ ಈ ಸಭೆ **ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಏ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 267ನೇ ನಿಯಮದ ಅನುಸಾರವಾಗಿ ಈ ಸಭೆ **ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುತ್ತೇನೆ.

## 5. ನಿಲುವಳಿ ಸೂಚನೆ

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು, ಶ್ರೀ ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಮಾನ್ಯ ಶಾಸಕರುಗಳಾದ ಶ್ರೀ ಸಿ.ಟಿ. ರವಿ, ಶ್ರೀ ಎಸ್.ವ್ಹಿ. ಸಂಕನೂರ, ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಹಾಗೂ ಇತರರು** ರಾಜ್ಯದಲ್ಲಿ ಕೊಲೆ, ಅತ್ಯಾಚಾರ, ಮಾದಕ ವಸ್ತುಗಳು, ಧರ್ಮಾಧಾರಿತ ಪ್ರಕರಣಗಳು ಹೆಚ್ಚಾಗಿದ್ದು, ತಡೆಗಟ್ಟುವಲ್ಲಿ ಸರ್ಕಾರ ವಿಫಲವಾಗಿರುವ ಕುರಿತು ನಿಯಮ 59ರ ಅಡಿಯಲ್ಲಿ ಪ್ರಸ್ತಾಪಿಸಲು ಅವಕಾಶ ನೀಡಬೇಕೆಂದು ಕೋರಿದರು.

ನಿಯಮ 330ಕ್ಕೆ ಪರಿವರ್ತಿಸಲಾಗಿದೆ ಎಂದು ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

**6. ಗಮನ ಸೆಳೆಯುವ ಸೂಚನೆಗಳು**

1. **ಶ್ರೀ ಮಂಜುನಾಥ್ ಭಂಡಾರಿ ಮತ್ತು ಶ್ರೀ ಡಿ.ಎಸ್. ಅರುಣ್** ಅವರುಗಳು ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯಿತಿಗಳಿಗೆ ಶೀಘ್ರವಾಗಿ ಚುನಾವಣೆ ನಡೆಸುವ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆದರು.

   ಮಧ್ಯಾಹ್ನ 3.45 ಗಂಟೆಯಲ್ಲಿ ಶ್ರೀಮತಿ ಭಾರತಿ ಶೆಟ್ಟಿ ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

   ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಉತ್ತರಿಸಿದರು.

2. **ಶ್ರೀ ಗೋವಿಂದರಾಜು** ಅವರು ಕೋಲಾರ ತಾಲ್ಲೂಕಿನ ಕೆಂದಟ್ಟಿಯಲ್ಲಿ ಘನತ್ಯಾಜ್ಯ ವಿಲೇವಾರಿ ಘಟಕ ನಿರ್ಮಿಸಲಾಗಿದ್ದರೂ ನಗರಸಭೆ ವ್ಯಾಪ್ತಿಯಲ್ಲಿ ಸಂಗ್ರಹಿಸುತ್ತಿರುವ ತ್ಯಾಜ್ಯವನ್ನು ಅವೈಜ್ಞಾನಿಕ ಹಾಗೂ ಅನಧಿಕೃತವಾಗಿ ಸುತ್ತಮುತ್ತಲಿನ ಕೆರೆ, ಕಾಲುವೆ ಹಾಗೂ ತಗ್ಗಿನ ಪ್ರದೇಶಕ್ಕೆ ತ್ಯಾಜ್ಯ ಸುರಿದು ಬಿಲ್ ಮಾಡುತ್ತಿರುವ ಕುರಿತು ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರ ಗಮನ ಸೆಳೆದರು.

   ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಉತ್ತರಿಸಿದರು.

## ಪ್ರಕಟಣೆ

2. ಮಾನ್ಯ ಸಭಾಧ್ಯಕ್ಷರಿಂದ ಬಂದಿರುವ ಸಂದೇಶವನ್ನು ಸಭಾಪತಿಯವರು ಪ್ರಕಟಿಸಿದರು.

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗ, ನಡವಳಿಕೆಯ ನಿಯಮಗಳ **104ನೇ ನಿಯಮದ** ಮೇರೆಗೆ ವಿಧಾನ ಸಭೆಯು ಅಂಗೀಕರಿಸಿರುತ್ತದೆಂದು ಮತ್ತು ಸದರಿ ವಿಧೇಯಕಗಳಿಗೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

1. ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿ (ತಿದ್ದುಪಡಿ) ವಿಧೇಯಕ, 2025
2. ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ(ತಿದ್ದುಪಡಿ) ವಿಧೇಯಕ,2025
3. ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025
4. ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ(ತಿದ್ದುಪಡಿ) ವಿಧೇಯಕ,2025
5. ಕೂಡಲ ಸಂಗಮ ಅಭಿವೃದ್ಧಿ ಮಂಡಳಿ (ತಿದ್ದುಪಡಿ) ವಿಧೇಯಕ, 2025
6. ಬನವಾಸಿ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025
7. ಸರ್ವಜ್ಞ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025
8. ನೋಂದಣಿ (ಕರ್ನಾಟಕ ತಿದ್ದುಪಡಿ) ವಿಧೇಯಕ, 2025
9. ಕರ್ನಾಟಕ ಭೂ ಸುಧಾರಣೆಗಳು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2025

## ಗಮನ ಸೆಳೆಯುವ ಸೂಚನೆಗಳು

3. **ಶ್ರೀ ಐವನ್ ಡಿ'ಸೋಜಾ** ಅವರು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸರ್ಕಾರಿ ವೆನ್‌ಲಾಕ್ ಆಸ್ಪತ್ರೆಯ ಅಧೀನದಲ್ಲಿರುವ ಮೂಡಶೆಡ್ಡೆಯಲ್ಲಿ ಕ್ಷಯ ಮತ್ತು ಎದೆ ರೋಗಗಳ ಆಸ್ಪತ್ರೆಯ 8 ಎಕರೆ ಸ್ಥಳದಲ್ಲಿ ಜಯದೇವ ಹೃದ್ರೋಗ ಹಾಗೂ ಕಿದ್ವಾಯಿ ಕ್ಯಾನ್ಸರ್ ಸಂಸ್ಥೆಯ ಸ್ಯಾಟಲೈಟ್ ಸೆಂಟರ್‌ಗಳನ್ನು ಮೈಸೂರು ಮತ್ತು ಗುಲಬರ್ಗಾ ಮಾದರಿಯಲ್ಲಿ ಪ್ರಾರಂಭಿಸುವ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಉತ್ತರಿಸಿದರು.

4. **ಶ್ರೀ ಶಾಂತಾರಾಮ್ ಬುಡ್ನ** ಸಿದ್ದಿ ಅವರು ರಾಜ್ಯದಲ್ಲಿ ಬುಡಕಟ್ಟು ಮತ್ತು ವನವಾಸಿ ಜನಾಂಗಗಳು ವಾಸಿಸುವ ಸ್ಥಳಗಳಲ್ಲಿ ದೇವಸ್ಥಾನಗಳ ನಿರ್ಮಾಣಕ್ಕಾಗಿ ಅನುದಾನ ಮಂಜೂರು ಮಾಡುವ ಕುರಿತು ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಗಮನ ಸೆಳೆದರು.

ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರಿಂದ ಉತ್ತರವನ್ನು ಒದಗಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

## 7. ನಿಯಮ 330ರ ಮೇರೆಗೆ

1. **ಶ್ರೀ ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಮಾನ್ಯ ಶಾಸಕರುಗಳಾದ ಶ್ರೀ ಕೆ.ಎಸ್. ನವೀನ್ ಹಾಗೂ ಶ್ರೀ ಡಿ.ಎಸ್. ಅರುಣ್** ಅವರುಗಳು ಕಾರ್ಮಿಕ ಇಲಾಖಾ ವತಿಯಿಂದ ಶಾಲೆಗಳನ್ನು ತೆರೆಯಲು

ಮೀಸಲಿಟ್ಟಿರುವ 750 ಕೋಟಿ ರೂಪಾಯಿಗಳ ಅನುದಾನವನ್ನು ಸರ್ಕಾರಿ ಶಾಲೆಗಳಿಗೆ ಬಳಕೆ ಮಾಡಿಕೊಂಡು ಕಾರ್ಮಿಕರ ಮಕ್ಕಳಿಗೆ ಪ್ರವೇಶಾತಿಯಲ್ಲಿ ಅವಕಾಶ ಕಲ್ಪಿಸುವುದು ಹಾಗೂ ಬಡ ದಲಿತ ಹಿಂದುಳಿದ ಮಹಿಳಾ ಕಾರ್ಮಿಕರ ಉನ್ನತಿಗಾಗಿ ಮೀಸಲಿಟ್ಟಿರುವ ಹಣದ ಸದ್ಬಳಕೆ ಮಾಡಿಕೊಳ್ಳುವ ಕುರಿತು ಪ್ರಸ್ತಾಪಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

1. ಶ್ರೀ ಕೆ.ಎಸ್. ನವೀನ್

2. ಶ್ರೀ ಡಿ.ಎಸ್. ಅರುಣ್

3. ಶ್ರೀ ಎನ್. ರವಿಕುಮರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು

ಸಂಜೆ 4.50 ಗಂಟೆಗೆ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪೀಠದಲ್ಲಿ ಆಸೀನರಾದರು.

ಮಾನ್ಯ ಕಾರ್ಮಿಕ ಸಚಿವರು ಹಾಗೂ ಉನ್ನತ ಶಿಕ್ಷಣ ಸಚಿವರು ಉತ್ತರಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

4. ಶ್ರೀಮತಿ ಭಾರತಿ ಶೆಟ್ಟಿ

5. ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್)

6. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.

7. ಶ್ರೀ ಬಿ.ಕೆ. ಹರಿಪ್ರಸಾದ್

8. ಶ್ರೀ ಎಸ್.ಎಲ್. ಭೋಜೇಗೌಡ

ಮಾನ್ಯ ಕಾರ್ಮಿಕ ಸಚಿವರು ಹಾಗೂ ಉನ್ನತ ಶಿಕ್ಷಣ ಸಚಿವರು ಸ್ಪಷ್ಟೀಕರಣ ನೀಡಿದರು.

2. **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.** ಅವರು ರಾಜ್ಯದಲ್ಲಿ ಅಡಿಕೆ ತೋಟಗಳಲ್ಲಿ ಕಾಣಿಸಿಕೊಂಡಿರುವ ಕೊಳೆ ರೋಗದಿಂದಾಗಿ ಅಡಿಕೆ ಬೆಳೆಗಾರರು ಸಂಕಷ್ಟಕ್ಕೀಡಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರ ಪರವಾಗಿ ಮಾನ್ಯ ಕಂದಾಯ ಸಚಿವರು ಉತ್ತರಿಸಿದರು.

## ಪ್ರಕಟಣೆ

3. ದಿನಾಂಕ: 13.08.2025 ರಂದು ನಡೆದ ಕಾರ್ಯಕಲಾಪಗಳ ಸಲಹಾ ಸಮಿತಿ ಸಭೆಯಲ್ಲಿ ಈ ಕೆಳಕಂಡಂತೆ ತೀರ್ಮಾನಿಸಲಾಗಿದೆ ಎಂದು ಮಾನ್ಯ ಸಭಾಪತಿಯವರು ಪ್ರಕಟಿಸಿದರು.

- ತಾತ್ಕಾಲಿಕ ಕಾರ್ಯಕ್ರಮದ ಪಟ್ಟಿಯ ರೀತ್ಯಾ ದಿನಾಂಕ:22.08.2025ರವರೆಗೆ ಪ್ರತಿ ದಿನ ಬೆಳಗ್ಗೆ 10.00 ಗಂಟೆಯಿಂದ ರಾತ್ರಿ 08.00 ಗಂಟೆಯವರೆಗೆ ಕಾರ್ಯಕಲಾಪಗಳನ್ನು ನಡೆಸುವುದು.
- ವಿಧಾನ ಸಭೆಯಿಂದ ಸ್ವೀಕರಿಸಲಾಗುವ ವಿಧೇಯಕಗಳನ್ನು ಮಂಡಿಸಿ, ಪರ್ಯಾಲೋಚಿಸಿ ಅಂಗೀಕರಿಸುವುದು.

➢ ಹೆಣ್ಣು ಮಕ್ಕಳು ಶಿಕ್ಷಣದಿಂದ ವಂಚಿತರಾಗುತ್ತಿರುವುದು, ಪೋಸ್ಕೋ (POSCO) ಕಾಯ್ದೆಯಡಿ ಪ್ರಕರಣಗಳು ಹೆಚ್ಚಿನ ಸಂಖ್ಯೆಯಲ್ಲಿ ದಾಖಲಾಗುತ್ತಿರುವುದರಿಂದ ಮಕ್ಕಳ ಭವಿಷ್ಯದ ಮೇಲೆ ಉಂಟಾಗುತ್ತಿರುವ ದುಷ್ಪರಿಣಾಮಗಳನ್ನು ತಪ್ಪಿಸಲು ಶಾಲೆಗಳಲ್ಲಿ ಹೆಣ್ಣು ಮಕ್ಕಳಿಗೆ ಸೂಕ್ತ ಅರಿವು ಮೂಡಿಸುವ ಶಿಕ್ಷಣ ನೀಡುವ ವ್ಯವಸ್ಥೆ ಜಾರಿಗೆ ತರುವ ಕುರಿತು ಬುಧವಾರ ದಿನಾಂಕ:20.08.2025ರಂದು ಮಧ್ಯಾಹ್ನ ಚರ್ಚೆಗೆ ಅವಕಾಶ ಕಲ್ಪಿಸಲಾಗಿದೆ.

ಸದನವನ್ನು ಸಂಜೆ 6.00 ಗಂಟೆಯಲ್ಲಿ ಮುಂದೂಡಿ ದಿನಾಂಕ:14.08.2025ರಂದು ಬೆಳಗ್ಗೆ 10.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು ಪ್ರಕಟಿಸಿದರು.

ಕೆ.ಆರ್.ಮಹಾಲಕ್ಷ್ಮಿ

ಕಾರ್ಯದರ್ಶಿ

*****

# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತಾರನೆಯ ಅಧಿವೇಶನ

## ಲಘು ಪ್ರಕಟಣೆ ಭಾಗ-1

## ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಗುರುವಾರ, ದಿನಾಂಕ:14.08.2025**

**(04)**

ಸದನವು ಬೆಳಗ್ಗೆ: 10.10 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

### 1. ಪ್ರಶ್ನೋತ್ತರ

ದಿನಾಂಕ:14.08.2025ರಂದು ಸದನದಲ್ಲಿ ಉತ್ತರಿಸುವ ಸಮೂಹ-IVರ 4ನೇ ಪಟ್ಟಿಯ ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 46(510)
2. 47(496)
3. 48(608)
4. 49(568)
5. 50(541)
6. 51(555)
7. 52(525)
8. 53(596) ಗೈರು ಹಾಜರಿ

| | | |
|---|---|---|
| 9. | 54(558) | ಕಾಲಾವಕಾಶ |
| 10. | 55(563) | |
| 11. | 56(493) | |
| 12. | 57(547) | |
| 13. | 58(542) | |
| 14. | 59(599) | ವರ್ಗಾವಣೆ |
| 15. | 60(522) | ವರ್ಗಾವಣೆ |

**ದಿನಾಂಕ:13.08.2025ರ 3ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆ**

1. 33(443)

ದಿನಾಂಕ:14.08.2025ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IVರ 4ನೇ ಪಟ್ಟಿಯ ಒಟ್ಟು 146 ಪ್ರಶ್ನೆಗಳ ಪೈಕಿ **56** ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

ಮಧ್ಯಾಹ್ನ 12.20 ಗಂಟೆಯಲ್ಲಿ **ಶ್ರೀ ಮಂಜುನಾಥ್ ಭಂಡಾರಿ** ಅವರು ಸಭಾಪತಿಯವರ ಪೀಠದಲ್ಲಿ ಆಸೀನರಾದರು.

**2. ಶೂನ್ಯವೇಳೆ ಪ್ರಸ್ತಾವಗಳು**

1. **ಶ್ರೀಯುತರುಗಳಾದ ಶಾಂತಾರಾಮ್ ಬುಡ್ನ ಸಿದ್ದಿ, ಬಲ್ಕೀಸ್ ಬಾನು, ರಾಮೋಜಿಗೌಡ, ಹೇಮಲತಾ ನಾಯಕ್** ಅವರುಗಳು ರಾಜ್ಯದ ಆಶಾಕಾರ್ಯಕರ್ತೆಯರು ಗೌರವಧನ ಹೆಚ್ಚಳ ಹಾಗೂ ಇನ್ನಿತರೆ ಬೇಡಿಕೆಗಳನ್ನು ಈಡೇರಿಸಬೇಕೆಂದು ಧರಣಿ ನಡೆಸುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀ ಡಿ.ಎಸ್. ಅರುಣ್** ಅವರು ವಿಜಯಪುರ ಜಿಲ್ಲೆಯ ಮುದ್ದೇಬಿಹಾಳದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ನಿಧನ ಹೊಂದಿದ ವ್ಯಕ್ತಿಯ ಹೆಸರಿನಲ್ಲಿ ಡಯಾಲಿಸಿಸ್ ಚಿಕಿತ್ಸೆ ಪಡೆದಿರುವಂತೆ ನಕಲಿ ದಾಖಲೆ ಸೃಷ್ಟಿಸಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ಶರವಣ ಟಿ.ಎ** ಅವರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ನಿರ್ಮಿಸಲು ಉದ್ದೇಶಿಸಿರುವ ಬಡಾವಣೆಯ ಮುಂದುವರೆದ ಭಾಗ ಹಾಗೂ ಹೊಸ ಬಡಾವಣೆ ಬರಲಿರುವ ಪ್ರದೇಶಗಳಲ್ಲಿ ಸ್ಥಳೀಯರು ನಿರ್ಮಿಸಿಕೊಳ್ಳುವ ಸ್ವಂತ ಮನೆಗಳಿಗೆ ವಿದ್ಯುತ್ ಸಂಪರ್ಕ ಮತ್ತು ಎನ್‌ಒಸಿ ನೀಡಿ ಅನುಕೂಲ ಮಾಡಿಕೊಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಗಳು ಉತ್ತರಿಸಿದರು.

4. **ಶ್ರೀ ಪಿ.ಹೆಚ್. ಪೂಜಾರ್** ಅವರು ಹುನಗುಂದ ತಾಲ್ಲೂಕಿನ ಬೇವಿನಾಳ ಮತ್ತು ಸುರಳಿಕಲ್ಲು ಗ್ರಾಮದ ನಡುವೆ ಬರುವ ನದಿಗೆ ನಿರ್ಮಿಸುವ ಬ್ರಿಡ್ಜ್-ಕಂ-ಬ್ಯಾರೇಜ್‌ಗಳಿಗೆ ಗೇಟ್‌ಗಳನ್ನು ಅಳವಡಿಸಿ ರೈತರ ಭೂಮಿ ನೀರು ಪಾಲಾಗದಂತೆ ತಡೆಗಟ್ಟುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಉತ್ತರಿಸಿದರು.

5. **ಶ್ರೀ ಸಿ.ಟಿ. ರವಿ** ಅವರು ಯುಜಿಸಿ ನಿಯಮಗಳ ಪ್ರಕಾರ ಪ್ರಥಮ ದರ್ಜೆಗಳಲ್ಲಿ ಸಹಾಯಕ ಪ್ರಾಧ್ಯಾಪಕರುಗಳ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆ ಮತ್ತು ಮಾನದಂಡಗಳು ಹೊಂದಿಲ್ಲದೆ ಇದ್ದರು ಹಾಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಪ್ರಾಧ್ಯಾಪಕರುಗಳು ಯುಜಿಸಿ ವೇತನ ಶ್ರೇಣಿಯಲ್ಲಿ ವೇತನ ಪಡೆಯುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉನ್ನತ ಶಿಕ್ಷಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀ ಐವನ್ ಡಿ'ಸೋಜಾ** ಅವರು ಕರ್ನಾಟಕ ಕರಾವಳಿ ಭಾಗದಲ್ಲಿ ಜರುಗುವ ಕಂಬಳ ಕ್ರೀಡೆಗೆ ಸರ್ಕಾರವು ದಿನಾಂಕ: 19.12.2024ರಂದು ಹೊರಡಿಸಿರುವ ಆದೇಶದಲ್ಲಿ 24 ಕಂಬಳಗಳಿಗೆ ತಲಾ 5 ಲಕ್ಷ ರೂ. ನೀಡುವಂತೆ ಘೋಷಣೆಯಾಗಿದ್ದರೂ ಪೂರ್ಣ ಪ್ರಮಾಣದಲ್ಲಿ ಬಿಡುಗಡೆಯಾಗದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಶ್ರೀ ಬಿ.ಕೆ. ಹರಿಪ್ರಸಾದ್** ಅವರು ರಾಜ್ಯದಲ್ಲಿ ಈಡಿಗ/ಬಿಲ್ಲವ ಸಮಾಜದ ಉದ್ದಿಮೆದಾರರಿಗೆ ಶೇ.20ರಷ್ಟು ಲಾಭಾಂಶ ನೀಡುವುದನ್ನು ಮುಂದುವರೆಸಿ ಹಾಲಿ ವಿಧಿಸಿರುವ ಶುಲ್ಕವನ್ನು ಹಿಂಪಡೆದು, ಸದರಿ ಸಮುದಾಯದ ಮೂಲ ಕಸುಬುದಾರರಿಗೆ

ವ್ಯವಹಾರಿಕ ಲಾಭಾಂಶವನ್ನು ನೀಡುವ ಸಂಬಂಧ ಸಮಿತಿಯನ್ನು ರಚಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಅಬಕಾರಿ ಸಚಿವರು ಉತ್ತರಿಸಿದರು.

8. **ಡಾ: ತಳವಾರ್ ಸಾಬಣ್ಣ** ಅವರು ಜಾನಪದ ವಿಶ್ವವಿದ್ಯಾಲಯದಲ್ಲಿ ಹೊರಗುತ್ತಿಗೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗೆ ವೇತನ ಪಾವತಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉನ್ನತ ಶಿಕ್ಷಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. **ಶ್ರೀ ಸಿ.ಎನ್. ಮಂಜೇಗೌಡ ಮತ್ತು ಶ್ರೀ ಎಸ್.ವ್ಹಿ. ಸಂಕನೂರ** ಅವರು ಮೈಸೂರಿನಲ್ಲಿ ಡ್ರಗ್ಸ್ ಮಾಫಿಯಾ ಹಾಗೂ ಮಾದಕ ವಸ್ತುಗಳ ಪ್ರಕರಣಗಳು ವರದಿಯಾಗಿದ್ದು, ಉನ್ನತ ಮಟ್ಟದ ತನಿಖೆ ನಡೆಸಿ NDPS & COTPA ಕಾಯ್ದೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

10. **ಶ್ರೀ ಬಸನಗೌಡ ಬಾದರ್ಲಿ** ಅವರು ಸಿಂಧನೂರು ನಗರದ ಮಧ್ಯಭಾಗದಲ್ಲಿ ತೋಟಗಾರಿಕೆ ಇಲಾಖೆಯ 19 ಎಕರೆ ಭೂಮಿಯನ್ನು ಸದ್ಬಳಕೆ ಮಾಡಿಕೊಂಡು ಹಣ್ಣುಗಳನ್ನು ಬೆಳೆಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

ಮಧ್ಯಾಹ್ನ 12.15 ಗಂಟೆಗೆ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪೀಠದಲ್ಲಿ ಆಸೀನರಾದರು.

ಮಧ್ಯಾಹ್ನ 12.30 ಗಂಟೆಯಲ್ಲಿ **ಶ್ರೀ ಮಂಜುನಾಥ್ ಭಂಡಾರಿ** ಅವರು ಸಭಾಪತಿಯವರ ಪೀಠದಲ್ಲಿ ಆಸೀನರಾದರು.

### 3. ಶೂನ್ಯವೇಳೆ ಪ್ರಸ್ತಾವಗಳಿಗೆ ಉತ್ತರ

1. **ಶ್ರೀ ಗೋವಿಂದರಾಜು** ಅವರು ಸಮಗ್ರ ಶಿಶು ಅಭಿವೃದ್ಧಿ ಯೋಜನೆ, ಗರ್ಭಿಣಿ, ಬಾಣಂತಿಯರು, ಕಿಶೋರಿಯರು ಹಾಗೂ 6 ವರ್ಷದೊಳಗಿನ ಮಕ್ಕಳಿಗೆ ಪೌಷ್ಠಿಕ ಆಹಾರ ಪೂರೈಕೆ ಸೇರಿದಂತೆ ಆರೋಗ್ಯದ ಮೇಲೆ ನಿಗಾವಹಿಸಲು ಫಲಾನುಭವಿಗಳಿಗೆ ಫೇಸ್ ಕ್ಯಾಪ್ಚರ್ ಮೂಲಕ ಸರಬರಾಜು ಮಾಡುವಲ್ಲಿ ಆಗುತ್ತಿರುವ ತೊಂದರೆಗಳ ಕುರಿತು ದಿನಾಂಕ:11.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

2. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ರಾಜ್ಯದಲ್ಲಿ ಕಳೆದ 30 ವರ್ಷಗಳಲ್ಲಿ 98 ಸಫಾಯಿ ಕರ್ಮಚಾರಿಗಳು ಶೌಚದ ಗುಂಡಿ ಹಾಗೂ ಒಳಚರಂಡಿಗಳಲ್ಲಿ ಕೆಲಸ ಮಾಡುವ ಸಂದರ್ಭದಲ್ಲಿ ಉಸಿರುಗಟ್ಟಿ ಸಾವನ್ನಪ್ಪಿರುವ ಕುರಿತು ದಿನಾಂಕ: 12.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

3. **ಡಾ: ತಳವಾರ್ ಸಾಬಣ್ಣ** ಅವರು ಕಲಬುರ್ಗಿ ಜಿಲ್ಲೆ ಸೇಡಂ ತಾಲ್ಲೂಕಿನ ಮಳಖೇಡ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಬರುವ ಕೊಂಕನಹಳ್ಳಿ ಗ್ರಾಮದಲ್ಲಿ ನೆಟ್ಟಿರುವ ಹಾಗೂ ನಾಮಫಲಕವನು ತೆರವುಗೊಳಿಸದೆ ಉಳಿಸುವ ಕುರಿತು

ದಿನಾಂಕ:12.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

4. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಕೇಂದ್ರ ಸರ್ಕಾರವು ಯೂರಿಯಾ ಮತ್ತು ಡಿ.ಎ.ಪಿ ರಸಗೊಬ್ಬರವನ್ನು ಪೂರೈಸಿದ್ದರೂ ರಾಜ್ಯ ಸರ್ಕಾರವು ರೈತರಿಗೆ ಸಮರ್ಪಕವಾಗಿ ವಿತರಣೆ ಮಾಡವಲ್ಲಿ ವಿಫಲವಾಗಿರುವ ಕುರಿತು ದಿನಾಂಕ: 12.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

5. **ಶ್ರೀ ಎಂ. ನಾಗರಾಜು** ಅವರು ನೆಲಮಂಗಲದ ಅರಶಿನಕುಂಟೆ ಬಿನ್ನಮಂಗಲದ ಕೆರೆಗಳ ನೀರು ಕಲುಷಿತಗೊಂಡಿದ್ದು, ಬಳಕೆಗೆ ಯೋಗ್ಯವಾಗುವಂತೆ ಕೂಡಲೇ ಸೂಕ್ತ ಕ್ರಮ ಕೈಗೊಳ್ಳುವ ಕುರಿತು ದಿನಾಂಕ:12.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

6. **ಶ್ರೀ ಕಿಶೋರ್ ಕುಮಾರ್ ಪುತ್ತೂರ್** ಅವರು ರಾಷ್ಟ್ರೀಯ ಸ್ವಯಂ ಸೇವಕ ಸಂಘದ ವಿರುದ್ಧ ಸುಳ್ಳು ಸುದ್ದಿ ಹರಡುತ್ತಿರುವ ಕುರಿತು ದಿನಾಂಕ:12.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

7. **ಶ್ರೀ ಸಿ.ಟಿ. ರವಿ** ಅವರು ರಾಜ್ಯದ ವಿವಿಧ ಭಾಗಗಳಲ್ಲಿ ಗೋಹತ್ಯೆ ಪ್ರಕರಣಗಳು ನಡೆಯುತ್ತಿರುವ ಕುರಿತು ದಿನಾಂಕ:12.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

8. **ಶ್ರೀ ಐವನ್ ಡಿ'ಸೋಜಾ** ಅವರು ಮಂಗಳೂರಿನ ಕೇಂದ್ರ ಕಾರಾಗೃಹಕ್ಕೆ ಅಳವಡಿಸಿರುವ ಜಾಮರ್‌ನಿಂದಾಗಿ

ಉಂಟಾಗಿರುವ ಸಮಸ್ಯೆಗಳ ಕುರಿತು ದಿನಾಂಕ: 13.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

9. **ಶ್ರೀಮತಿ ಹೇಮಲತಾ ನಾಯಕ್** ಅವರು ಕೊಪ್ಪಳ ಜಿಲ್ಲೆಯಲ್ಲಿ ರಾಷ್ಟ್ರೀಯ ಹೆದ್ದಾರಿಯಿಂದ ಕೇಂದ್ರೀಯ ವಿದ್ಯಾಲಯದ ತನಕ ಚತುಷ್ಪಥ ರಸ್ತೆ ನಿರ್ಮಿಸಿ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡುವ ಕುರಿತು ದಿನಾಂಕ:13.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

## 4. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಕಾರ್ಯದರ್ಶಿಯವರು ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದೆ ಮಂಡಿಸಿದರು.**

01. ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿ (ತಿದ್ದುಪಡಿ) ವಿಧೇಯಕ, 2025

02. ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025

03. ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025

04. ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025

05. ಕೂಡಲ ಸಂಗಮ ಅಭಿವೃದ್ಧಿ ಮಂಡಳಿ (ತಿದ್ದುಪಡಿ) ವಿಧೇಯಕ, 2025

06. ಬನವಾಸಿ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025

07. ಸರ್ವಜ್ಞ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025

08. ನೋಂದಣಿ (ಕರ್ನಾಟಕ ತಿದ್ದುಪಡಿ) ವಿಧೇಯಕ, 2025

09. ಕರ್ನಾಟಕ ಭೂ ಸುಧಾರಣೆಗಳು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2025

ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಮಾನ್ಯ ಶಾಸಕರುಗಳು ಪರಿಶಿಷ್ಟ ಜಾತಿ ಅಡಿಯಲ್ಲಿ ಬರುವ ವಿವಿಧ ಸಮುದಾಯಗಳಿಗೆ ಒಳಮೀಸಲಾತಿಯನ್ನು ಅನುಷ್ಠಾನಗೊಳಿಸಿ ನ್ಯಾಯ ಒದಗಿಸುವ ಬಗ್ಗೆ ನಿಯಮ 330ರ ಅಡಿ ನೀಡಲಾಗಿದ್ದ ಸೂಚನೆಯನ್ನು ಚರ್ಚೆಗೆ ತೆಗೆದುಕೊಳ್ಳಬೇಕೆಂದು ಒತ್ತಾಯಿಸಿದರು. ಇಂದಿನ ಕಾರ್ಯಕಲಾಪಗಳ ಪಟ್ಟಿಯ ರೀತ್ಯಾ, ಕಾರ್ಯಕಲಾಪವನ್ನು ನಡೆಸುವುದಾಗಿ ಮಾನ್ಯ ಸಭಾಪತಿಯವರು ತಿಳಿಸಿದರು.

## 5. ಶಾಸನ ರಚನೆ

### ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಕಂದಾಯ ಸಚಿವರು ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

2. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಕಂದಾಯ ಸಚಿವರು ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

3. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಕಂದಾಯ ಸಚಿವರು ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

4. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಕಂದಾಯ ಸಚಿವರು ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

5. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕೂಡಲ ಸಂಗಮ ಅಭಿವೃದ್ಧಿ ಮಂಡಳಿ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಕಂದಾಯ ಸಚಿವರ ಪರವಾಗಿ ಮಾನ್ಯ

ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

6. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಬನವಾಸಿ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಕಂದಾಯ ಸಚಿವರು ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

7. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಸರ್ವಜ್ಞ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಕಂದಾಯ ಸಚಿವರು ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

8. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ನೋಂದಣಿ (ಕರ್ನಾಟಕ ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಕಂದಾಯ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಸಿ.ಟಿ. ರವಿ
2. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.

3. ಶ್ರೀ ಐವನ್ ಡಿ'ಸೋಜಾ

4. ಶ್ರೀ ಕೆ.ಎಸ್. ನವೀನ್

5. ಶ್ರೀ ಸಿ.ಎನ್. ಮಂಜೇಗೌಡ

6. ಶ್ರೀ ಪುಟ್ಟಣ್ಣ

ಮಾನ್ಯ ಕಂದಾಯ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

ಸದನವನ್ನು ಮಧ್ಯಾಹ್ನ 2.50 ಗಂಟೆಗೆ ಮುಂದೂಡಿ ದಿನಾಂಕ:18.08.2025ರಂದು ಬೆಳಗ್ಗೆ 10.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಮಂಜುನಾಥ್ ಭಂಡಾರಿ**) ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**

**ಕಾರ್ಯದರ್ಶಿ**

****

# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತಾರನೆಯ ಅಧಿವೇಶನ

## ಲಘು ಪ್ರಕಟಣೆ ಭಾಗ–1

## ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಸೋಮವಾರ, ದಿನಾಂಕ:18.08.2025**

**(05)**

ಸದನವು ಬೆಳಗ್ಗೆ: 10.15 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

### 1. ಸಂತಾಪ ಸೂಚನೆಗಳು

ಕಲಬುರಗಿಯ ಶರಣ ಸಂಸ್ಥಾನದ ಎಂಟನೆಯ ಪೀಠಾಧಿಪತಿಯಾಗಿದ್ದ **ಡಾ: ಶರಣಬಸಪ್ಪ ಅಪ್ಪ** ಅವರು ದಿನಾಂಕ:14.08.2025ರಂದು ಹಾಗೂ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ **ಕುಮಾರ ಚಂದ್ರಶೇಖರನಾಥ ಸ್ವಾಮೀಜಿ** ಅವರು ದಿನಾಂಕ:16.08.2025ರಂದು ನಿಧನ ಹೊಂದಿದ್ದು, ಮಾನ್ಯ ಸಭಾಪತಿಯವರು ಸಂತಾಪ ಸೂಚನಾ ನಿರ್ಣಯವನ್ನು ಸದನದಲ್ಲಿ ಮಂಡಿಸಿದರು.

ಮಾನ್ಯ ಸಭಾನಾಯಕರು ಹಾಗೂ ವಿರೋಧ ಪಕ್ಷದ ನಾಯಕರು ಸಂತಾಪ ಸೂಚನಾ ನಿರ್ಣಯವನ್ನು ಅನುಮೋದಿಸಿ ಮಾತನಾಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸಂತಾಪ ಸೂಚನಾ ನಿರ್ಣಯವನ್ನು ಅನುಮೋದಿಸಿ ಮಾತನಾಡಿದರು.

1. ಡಾ: ಶರಣ ಪ್ರಕಾಶ್ ಪಾಟೀಲ್, ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು

2. ಡಾ: ತಳವಾರ್ ಸಾಬಣ್ಣ

3. ಶ್ರೀ ದಿನೇಶ್ ಗೂಳಿಗೌಡ

4. ಶ್ರೀ ಈಶ್ವರ್ ಖಂಡ್ರೆ, ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

5. ಶ್ರೀ ಶಶೀಲ್ ಜಿ. ನಮೋಶಿ

ಮೃತರುಗಳ ಆತ್ಮಕ್ಕೆ ಸದ್ಗತಿಯನ್ನು ಕೋರಿ ಒಂದು ನಿಮಿಷ ಮೌನ ಆಚರಿಸಲಾಯಿತು. ಮೃತ ಗಣ್ಯರುಗಳ ಕುಟುಂಬದವರಿಗೆ ಸಂತಾಪ ಸೂಚನಾ ನಿರ್ಣಯದ ಪ್ರತಿಯನ್ನು ಕಳುಹಿಸಿಕೊಡಲಾಗುವುದೆಂದು ಮಾನ್ಯ ಸಭಾಪತಿಯವರು ತಿಳಿಸಿದರು.

**2. ಪ್ರಕಟಣೆ**

**ಮಾನ್ಯ ಸಭಾಧ್ಯಕ್ಷರವರಿಂದ ಬಂದಿರುವ ಕೆಳಕಂಡ ಸಂದೇಶವನ್ನು ಮಾನ್ಯ ಸಭಾಪತಿಯವರು ಪ್ರಕಟಿಸಿದರು.**

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ 104ನೇ ನಿಯಮದ ಮೇರೆಗೆ ವಿಧಾನ ಸಭೆಯು ದಿನಾಂಕ:14.08.2025ರಂದು 2025ನೇ ಸಾಲಿನ **"ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕ"**ವನ್ನು ಅಂಗೀಕರಿಸಿರುತ್ತದೆಂದು ಹಾಗೂ ಸದರಿ ವಿಧೇಯಕಕ್ಕೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

**3. ಪ್ರಶ್ನೋತ್ತರ**

ದಿನಾಂಕ:18.08.2025ರಂದು ಸದನದಲ್ಲಿ ಉತ್ತರಿಸುವ ಸಮೂಹ–Iರ 5ನೇ ಪಟ್ಟಿಯ ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 61(740)
2. 62(776)
3. 63(703)
4. 64(693)
5. 65(637+811)
6. 66(723)
7. 67(755)
8. 68(760)
9. 69(645)
10. 70(45)
11. 71(784)

ಮಧ್ಯಾಹ್ನ 12.20 ಗಂಟೆಯಲ್ಲಿ ಶ್ರೀ ಮಂಜುನಾಥ್ ಭಂಡಾರಿ ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

12. 72(701)
13. 73(785) ಕಾಲಾವಕಾಶ
14. 74(812)
15. 75(655)

ದಿನಾಂಕ:18.08.2025ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–Iರ 5ನೇ ಪಟ್ಟಿಯ ಒಟ್ಟು 165 ಪ್ರಶ್ನೆಗಳ ಪೈಕಿ **56** ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

## 4. ಶೂನ್ಯವೇಳೆ ಪ್ರಸ್ತಾವನೆಗಳಿಗೆ ಉತ್ತರ

1. **ಶ್ರೀ ಐವನ್ ಡಿ'ಸೋಜಾ** ಅವರು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೆಂಪು ಕಲ್ಲು ಹಾಗೂ ಮರಳುಗಾರಿಕೆ ಸಂಪೂರ್ಣ ಸ್ಥಗಿತಗೊಂಡಿರುವುದರಿಂದ ಕೂಲಿ ಕಾರ್ಮಿಕರು ಹಾಗೂ ಸಣ್ಣ ಗುತ್ತಿಗೆದಾರರು ತೊಂದರೆಯಲ್ಲಿದ್ದು, ಕರಾವಳಿ ಜಿಲ್ಲೆಗಳಿಗೆ ಹೊಸ ನೀತಿಯನ್ನು ಜಾರಿಗೊಳಿಸಿ ಪರವಾನಗಿ ನೀಡುವ ಕುರಿತು ದಿನಾಂಕ:11.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

2. **ಶ್ರೀ ಟಿ.ಎನ್. ಜವರಾಯಿ ಗೌಡ** ಅವರು ಸಾಮಾಜಿಕ ಹೊಣೆಗಾರಿಕೆ ಯೋಜನೆಯಡಿ (ಸಿ.ಎಸ್.ಆರ್ ಅನುದಾನದಡಿ) ಬೆಂಗಳೂರು ನಗರದಲ್ಲಿ ಸರ್ಕಾರಿ ಶಾಲೆಗಳನ್ನು ತುರ್ತಾಗಿ ದುರಸ್ಥಿಪಡಿಸುವ ಕುರಿತು ದಿನಾಂಕ:12.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

3. **ಶ್ರೀ ಕೇಶವ ಪ್ರಸಾದ್ ಎಸ್** ಅವರು ಮಂಡ್ಯ ಜಿಲ್ಲೆ, ಆಲಕೇರಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳಿಗೆ ಮಧ್ಯಾಹ್ನ ಬಿಸಿ ಊಟ ಯೋಜನೆಯಡಿ ಮೊಟ್ಟೆ ವಿತರಿಸುವ ಕುರಿತು ಪೋಷಕರಿಂದ ವಿರೋಧ ವ್ಯಕ್ತವಾಗಿರುವ ಕುರಿತು ದಿನಾಂಕ:13.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

4. **ಶ್ರೀ ರಾಮೋಜಿಗೌಡ** ಅವರು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಉದ್ಯೋಗ ವಿನಿಮಯ ಕೇಂದ್ರ ಸ್ಥಾಪಿಸಿ ಜಾಬ್ ಕಾರ್ಡ್ (ಎಂಪ್ಲಾಯಮೆಂಟ್ ಕಾರ್ಡ್) ಮಾಡಿಸುವ ಪ್ರಕ್ರಿಯೆಗೆ ಚಾಲನೆ ನೀಡುವ ಕುರಿತು ದಿನಾಂಕ:13.08.2025ರಂದು

ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

5. **ಶ್ರೀ ಎಂ. ನಾಗರಾಜು** ಅವರು ಚಾಮರಾಜನಗರ ಜಿಲ್ಲೆ ಹನೂರು ತಾಲ್ಲೂಕಿನ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿನ ಕೊಠಡಿಗಳನ್ನು ದುರಸ್ಥಿಗೊಳಿಸುವ ಕುರಿತು ದಿನಾಂಕ: 13.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

6. **ಶ್ರೀ ಬಿ.ಕೆ. ಹರಿಪ್ರಸಾದ್** ಅವರು ರಾಜ್ಯದಲ್ಲಿ ಆ್ಯಸಿಡ್ ದಾಳಿಗೆ ಒಳಗಾದ ಮಹಿಳೆಯರಿಗೆ ನೀಡುತ್ತಿರುವ ಪಿಂಚಣಿಯನ್ನು ಹೆಚ್ಚಿಸುವ ಹಾಗೂ ವಿಶೇಷ ಸೌಲಭ್ಯದಡಿ ಹಂಚಿಕೆ ಮಾಡುವ ಕುರಿತು ದಿನಾಂಕ:13.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

7. **ಶ್ರೀಮತಿ ಬಲ್ಕೀಸ್ ಬಾನು** ಅವರು ಬೆಳಗಾವಿ ಜಿಲ್ಲೆಯ ರಾಮದುರ್ಗ ತಾಲ್ಲೂಕಿನಲ್ಲಿ ಮುಖ್ಯರಸ್ತೆ ಬದಿಯಲ್ಲಿರುವ ಜಮೀನಿನ ಮಾಲೀಕರು ಹಿಂಬದಿ ಜಮೀನುಗಳಿಗೆ ಹೋಗುವ ಯುವಕರನ್ನು ಮರಕ್ಕೆ ಕಟ್ಟಿ ಹಲ್ಲೆ ಮಾಡಿರುವ ಕುರಿತು ದಿನಾಂಕ:13.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

8. **ಶ್ರೀ ಡಿ.ಎಸ್. ಅರುಣ್** ಅವರು ವಿಜಯಪುರ ಜಿಲ್ಲೆಯ ಮುದ್ದೇಬಿಹಾಳದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ನಿಧನ ಹೊಂದಿದ ವ್ಯಕ್ತಿಯ ಹೆಸರಿನಲ್ಲಿ ಡಯಾಲಿಸಿಸ್ ಚಿಕಿತ್ಸೆ ಪಡೆದಿರುವಂತೆ ನಕಲಿ ದಾಖಲೆ ಸೃಷ್ಟಿಸಿರುವ ಕುರಿತು ದಿನಾಂಕ:14.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

9. **ಶ್ರೀ ಸಿ.ಟಿ. ರವಿ** ಅವರು ಯುಜಿಸಿ ನಿಯಮಗಳ ಪ್ರಕಾರ ಪ್ರಥಮ ದರ್ಜೆಗಳಲ್ಲಿ ಸಹಾಯಕ ಪ್ರಾಧ್ಯಾಪಕರುಗಳ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆ ಮತ್ತು ಮಾನದಂಡಗಳನ್ನು ಹೊಂದಿಲ್ಲದೆ ಇದ್ದರು ಹಾಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಪ್ರಾಧ್ಯಾಪಕರುಗಳು ಯುಜಿಸಿ ವೇತನ ಶ್ರೇಣಿಯಲ್ಲಿ ವೇತನ ಪಡೆಯುತ್ತಿರುವ ಕುರಿತು ದಿನಾಂಕ:14.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

10. **ಡಾ:ತಳವಾರ್ ಸಾಬಣ್ಣ** ಅವರು ಜಾನಪದ ವಿಶ್ವವಿದ್ಯಾಲಯದಲ್ಲಿ ಹೊರಗುತ್ತಿಗೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗೆ ವೇತನ ಪಾವತಿಸುವ ಕುರಿತು ದಿನಾಂಕ:14.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

## 5. ಶೂನ್ಯವೇಳೆ ಪ್ರಸ್ತಾವಗಳು

1. **ಶ್ರೀ ಸಿ.ಎನ್. ಮಂಜೇಗೌಡ** ಅವರು ಮೈಸೂರು ವಿಶ್ವವಿದ್ಯಾಲಯದಲ್ಲಿ ನಿವೃತ್ತ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳಿಗೆ ನಿವೃತ್ತಿ ವೇತನ ಬಿಡುಗಡೆ ಮಾಡದಿರುವ ಕುರಿತು ಪ್ರಸ್ತಾಪಿಸಿದರು.

   ಮಾನ್ಯ ಉನ್ನತ ಶಿಕ್ಷಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

2. **ಶ್ರೀಮತಿ ಬಲ್ಕೀಸ್ ಬಾನು** ಅವರು 2010-11ನೇ ಸಾಲಿನಲ್ಲಿ ಭದ್ರಾವತಿಯ ಎಂಪಿಎಂ ಸಕ್ಕರೆ ಕಾರ್ಖಾನೆಗೆ ಕಬ್ಬು ಸರಬರಾಜು ಮಾಡಿರುವ ರೈತರಿಗೆ ಪ್ರೋತ್ಸಾಹಧನ ನೀಡಲು ಬಾಕಿ ಉಳಿಸಿಕೊಂಡಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

3. **ಶ್ರೀ ಟಿ.ಎನ್. ಜವರಾಯಿ ಗೌಡ** ಅವರು ಬೆಂಗಳೂರು ನಗರ ಬ್ಯಾಡರಹಳ್ಳಿ ಪೊಲೀಸ್ ಠಾಣೆಯಲ್ಲಿ ಅಕ್ರಮವಾಗಿ ನ್ಯಾಯಾಲಯದ ಆದೇಶವಿಲ್ಲದೇ 6 ದಿವಸಗಳವರೆಗೆ ವ್ಯಕ್ತಿಯೊಬ್ಬರನ್ನು ಬಂಧಿಸಿ ದೈಹಿಕ ಮತ್ತು ಮಾನಸಿಕವಗಿ ಹಲ್ಲೆ ಮಾಡಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

4. **ಡಾ: ತಳವಾರ್ ಸಾಬಣ್ಣ** ಅವರು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಗ್ರೇಡ್-1 ಪ್ರಾಂಶುಪಾಲರ ಹುದ್ದೆಗಳ ಅಂತಿಮ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉನ್ನತ ಶಿಕ್ಷಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

5. **ಶ್ರೀಮತಿ ಹೇಮಲತಾ ನಾಯಕ್** ಅವರು ತುಂಗಭದ್ರ ಜಲಾಶಯದ 8 ಗೇಟ್ ಜಾಮ್ ಆಗಿ ನಿಷ್ಕ್ರಿಯಗೊಂಡಿದ್ದು, ಕೇವಲ 80 ಟಿಎಂಸಿಗೆ ಸಂಗ್ರಹ ಸಾಮರ್ಥ್ಯ ಇಳಿಕೆಯಾಗಿದ್ದು, ನೀರಿನ ಪ್ರಮಾಣವನ್ನು ಹೆಚ್ಚಿಸಲು ಕೂಡಲೇ ಗೇಟ್ ಸರಿಪಡಿಸಿ ಎತ್ತರಿಸುವ ಸಂಬಂಧ ಸೂಕ್ತ ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಗಳಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

6. **ಶ್ರೀಮತಿ ಭಾರತಿ ಶೆಟ್ಟಿ** ಅವರು ಪ್ರೌಢ ಶಾಲೆ ಮತ್ತು ಸಂಯುಕ್ತ ಪದವಿ ಪೂರ್ವ ಕಾಲೇಜುಗಳಿಗೆ ಏಕರೂಪದ ಅನುದಾನ ಹಂಚಿಕೆ ಆಗುತ್ತಿರುವುದರಿಂದ ಮೂಲಸೌಲಭ್ಯಗಳ ನಿರ್ವಹಣೆಯಲ್ಲಿ ಶಿಕ್ಷಕರ ನಡುವೆ ಗೊಂದಲು ಸೃಷಿಯಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

7. **ಶ್ರೀ ಎಂ. ನಾಗರಾಜು** ಅವರು ಬಾಲ್ಯ ವಿವಾಹದ ಪಿಡುಗನ್ನು ತಡೆಗಟ್ಟುವಲ್ಲಿ ವಿಫಲವಾಗಿರುವ ಪರಿಣಾಮ ಬಾಲ ಗರ್ಭಿಣಿಯರ ಸಂಖ್ಯೆ ಹೆಚ್ಚಾಗಿದ್ದು, ಇದರಿಂದ ಆಗುವ ಸಮಸ್ಯೆಗಳ ಬಗ್ಗೆ ಪೋಷಕರಲ್ಲಿ ಮತ್ತು ಬಾಲಕಿಯರಲ್ಲಿ ಅರಿವು ಮೂಡಿಸಲು ಕ್ರಮ ಕೈಗೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

ಮಧ್ಯಾಹ್ನ 1.25 ಗಂಟೆಗೆ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪೀಠದಲ್ಲಿ ಆಸೀನರಾದರು.

8. **ಶ್ರೀ ಮಂಜುನಾಥ್ ಭಂಡಾರಿ** ಅವರು ಮಂಗಳೂರು ವಿಶ್ವವಿದ್ಯಾಲಯದಲ್ಲಿ 2018ರಿಂದ 2023ರ ಅವಧಿಯಲ್ಲಿ ತಾತ್ಕಾಲಿಕ ಹಾಗೂ ಹೊರಗುತ್ತಿಗೆ ಆಧಾರದಲ್ಲಿ ಲಭ್ಯವಿದ್ದ ಹುದ್ದೆಗಳ ಸಂಖ್ಯೆ ಮೀರಿ 359 ಮಂದಿಯನ್ನು ನೇಮಕ ಮಾಡಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉನ್ನತ ಶಿಕ್ಷಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

9. **ಶ್ರೀ ಶಶೀಲ್ ಜಿ. ನಮೋಶಿ** ಅವರು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಹಿಂದುಳಿದ ವರ್ಗಗಳಿಗೆ ಶಿಕ್ಷಣ ಮತ್ತು ಉದ್ಯೋಗಕ್ಕಾಗಿ ಮೀಸಲಾತಿ ನೀಡುವಾಗ ವಿಭಿನ್ನ ಕೆನೆಪದರ ನೀತಿಯನ್ನು ಅನುಸರಿಸುತ್ತಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕಂದಾಯ ಸಚಿವರು ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮಾಹಿತಿ ಪಡೆದು ಉತ್ತರ ನೀಡುವುದಾಗಿ ತಿಳಿಸಿದರು.

10. **ಶ್ರೀ ಕಿಶೋರ್ ಕುಮಾರ್ ಪುತ್ತೂರ್** ಅವರು ಧರ್ಮಸ್ಥಳದ ಪ್ರಕರಣಕ್ಕೆ ಸಂಬಂಧಿಸಿದಂತೆ ಅನಾಮಿಕ ದೂರುದಾರನ ಮಂಪರು ಪರೀಕ್ಷೆ ನಡೆಸಿ ವರದಿ ಬಂದ ನಂತರ ಕ್ರಮವಹಿಸದೆ SIT ರಚಿಸಿದ್ದು, 12 ಗುಂಡಿಗಳನ್ನು ಅಗೆದ ಸ್ಥಳದಲ್ಲಿ ಯಾವುದೇ ಮಾಹಿತಿ ದೊರೆಯದೆ ಇರುವುದರಿಂದ ಧಾರ್ಮಿಕ ಶ್ರದ್ಧಾ ಕೇಂದ್ರವಾಗಿರುವ ಶ್ರೀ ಕ್ಷೇತ್ರ ಧರ್ಮಸ್ಥಳದ ಗೌರವವನ್ನು ಉಳಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಸಭಾನಾಯಕರು ತಿಳಿಸಿದರು.

## 6. ನಿಲುವಳಿ ಸೂಚನೆ

ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ ಅವರು ರಾಜ್ಯದಲ್ಲಿ ರಸಗೊಬ್ಬರ ವಿತರಣೆ, ಕಳಪೆ ಗುಣಮಟ್ಟ ಬಿತ್ತನೆ ಬೀಜ, ವಿದ್ಯುತ್ ಸಂಪರ್ಕದಲ್ಲಿ ವ್ಯತ್ಯಯದಿಂದಾಗಿ ರೈತರು ಸಂಕಷ್ಟಕ್ಕೀಡಾಗಿರುವ ಬಗ್ಗೆ ನಿಯಮ 59ರ ಅಡಿಯಲ್ಲಿ ಪ್ರಸ್ತಾಪಿಸಲು ಅನುಮತಿ ನೀಡಬೇಕೆಂದು ಕೋರಿದರು.

ನಿಯಮ 330ಕ್ಕೆ ಪರಿವರ್ತಿಸಿರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

## 7. ವರದಿಯನ್ನೊಪ್ಪಿಸುವುದು

**ಶ್ರೀ ಎಂ. ನಾಗರಾಜು (ಅಧ್ಯಕ್ಷರು, ಹಕ್ಕುಬಾಧ್ಯತಾ ಸಮಿತಿ)** ಅವರು ವಿಧಾನ ಪರಿಷತ್ತಿನ 2024–25ನೇ ಸಾಲಿನ ಹಕ್ಕುಬಾಧ್ಯತಾ ಸಮಿತಿಯ 104ನೇ ವರದಿಯನ್ನು ಒಪ್ಪಿಸಿದರು.

## 8. ಸಭೆಯ ಮುಂದಿಡಲಾಗುವ ಕಾಗದ ಪತ್ರ

ಕಾರ್ಯದರ್ಶಿಯವರು ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ **2025ನೇ ಸಾಲಿನ "ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕ"**ವನ್ನು ಸಭೆಯ ಮುಂದೆ ಮಂಡಿಸಿದರು.

## 9. ಶಾಸನ ರಚನೆ

1. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಮಾನ್ಯ ಕಂದಾಯ ಸಚಿವರು ವಿವರಣೆ ನೀಡಿದರು.

   ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

   1. ಶ್ರೀ ಪಿ.ಹೆಚ್. ಪೂಜಾರ್
   2. ಶ್ರೀ ಕೆ.ಎಸ್. ನವೀನ್
   3. ಶ್ರೀ ಕೇಶವ ಪ್ರಸಾದ್ ಎಸ್

4. ಶ್ರೀ ಎನ್. ರವಿಕುಮಾರ್

5. ಶ್ರೀ ಎಂ. ನಾಗರಾಜು

6. ಶ್ರೀ ಶರವಣ ಟಿ.ಎ.

ಮಾನ್ಯ ಕಂದಾಯ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

ಮಧ್ಯಾಹ್ನ 2.40 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.45 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಮಧ್ಯಾಹ್ನ 4.10 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**10. ಗಮನ ಸೆಳೆಯುವ ಸೂಚನೆ**

1. **ಶ್ರೀ ಎಂ. ನಾಗರಾಜು** ಅವರು ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ ಆಸ್ಪತ್ರೆಯಲ್ಲಿ ನಿಯಮಿತವಾಗಿ ನವಜಾತ ಶಿಶುಗಳು ಮೃತಪಡುತ್ತಿರುವ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಗಮನ ಸೆಳೆದರು.

   ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಉತ್ತರಿಸಿದರು.

**ಶಾಸನ ರಚನೆ**

2. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ಭೂ ಸುಧಾರಣೆಗಳು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ

ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಮಾನ್ಯ ಕಂದಾಯ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಗೋವಿಂದರಾಜು
2. ಶ್ರೀ ಐವನ್ ಡಿ'ಸೋಜಾ
3. ಶ್ರೀ ಸಿ.ಟಿ. ರವಿ
4. ಶ್ರೀ ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು
5. ಶ್ರೀ ಕೇಶವ ಪ್ರಸಾದ್ ಎಸ್
6. ಶ್ರೀ ಮಂಜುನಾಥ್ ಭಂಡಾರಿ
7. ಶ್ರೀ ಜಗದೇವ್ ಗುತ್ತೇದಾರ್
8. ಶ್ರೀ ಎ. ವಸಂತ ಕುಮಾರ್

ಮಾನ್ಯ ಕಂದಾಯ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

**ಗಮನ ಸೆಳೆಯುವ ಸೂಚನೆ**

2. ಶ್ರೀ ಸಿ.ಟಿ. ರವಿ ಅವರು ಸರ್ಕಾರಿ ಶಾಲಾ ಕೊಠಡಿಗಳು ಶಿಥಿಲಾವಸ್ಥೆಯಲ್ಲಿರುವುದು ಹಾಗೂ ಕಲ್ಯಾಣ ಕರ್ನಾಟಕದ ಭಾಗದಲ್ಲಿ ಶಿಕ್ಷಕರ ಕೊರತೆಯಿಂದಾಗಿ ಕಲಿಕೆ ಮತ್ತು ಫಲಿತಾಂಶದಲ್ಲಿ ವ್ಯತಿರಿಕ್ತ ಪರಿಣಾಮಗಳು ಉಂಟಾಗಿರುವ ಕುರಿತು ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಗಮನ ಸೆಳೆದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಚರ್ಚೆಯಲ್ಲಿ ಭಾಗವಹಿಸಿದರು.

1. ಶ್ರೀಮತಿ ಹೇಮಲತಾ ನಾಯಕ್
2. ಶ್ರೀ ಅಡಗೂರ್ ಹೆಚ್. ವಿಶ್ವನಾಥ್
3. ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.
4. ಡಾ: ತಳವಾರ್ ಸಾಬಣ್ಣ
5. ಶ್ರೀ ಐವನ್ ಡಿ'ಸೋಜಾ
6. ಶ್ರೀ ಶಶೀಲ್ ಜಿ. ನಮೋಶಿ
7. ಶ್ರೀ ಪಿ.ಹೆಚ್. ಪೂಜಾರ್
8. ಶ್ರೀ ಸಿ.ಟಿ. ರವಿ

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಉತ್ತರಿಸಿದರು.

ಸಂಜೆ 5.55 ಗಂಟೆಯಲ್ಲಿ **ಶ್ರೀಮತಿ ಭಾರತಿ ಶೆಟ್ಟಿ** ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

## 11. ನಿಯಮ 330ರ ಮೇರೆಗೆ

1. **ಶ್ರೀಮತಿ ಹೇಮಲತಾ ನಾಯಕ್** ಅವರು ಕೊಪ್ಪಳ ನಗರದ ಸುತ್ತಮುತ್ತಲಿನ ಪರಿಸರ, ಜನ-ಜಾನುವಾರುಗಳ ಹಿತದೃಷ್ಠಿಯಿಂದ ಹೊಸ ಕಾರ್ಖಾನೆಗಳನ್ನು ತೆರೆಯಲು ಅನುಮತಿಸದಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಶಾಸಕರಾದ ಶ್ರೀ ವೈ.ಎಂ. ಸತೀಶ್‌ರವರು ಚರ್ಚೆಯಲ್ಲಿ ಭಾಗವಹಿಸಿದರು.

ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಉತ್ತರಿಸಿದರು.

ಸಂಜೆ 6.10 ಗಂಟೆಗೆ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

**ಪ್ರಕಟಣೆ**

1. ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಾದ ಶ್ರೀ ಬಿ.ಎಸ್.ಸುರೇಶ್(ಬೈರತಿ) ಹಾಗೂ ಮಾನ್ಯ ಉನ್ನತ ಶಿಕ್ಷಣ ಸಚಿವರಾದ ಡಾ: ಎಂ.ಸಿ. ಸುಧಾಕರ್ ಅವರುಗಳು ದಿನಾಂಕ:19.08.2025ರಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಉಭಯ ಸದನಗಳ ಮಾನ್ಯ ಶಾಸಕರುಗಳಿಗೆ ಭೋಜನ ಕೂಟ ಏರ್ಪಡಿಸಿರುವ ಬಗ್ಗೆ ಮಾನ್ಯ ಸಭಾಪತಿಯವರು ಪ್ರಕಟಿಸಿದರು.

2. ಮಾನ್ಯ ಶಾಸಕರಾದ ಶ್ರೀ ಶರವಣ ಟಿ.ಎ. ಅವರು ಚಿನ್ನ ಲೇಪನದ ಬೆಳ್ಳಿ ಗಂಡುಭೇರುಂಡ ಬ್ಯಾಡ್ಜ್‌ನ್ನು ಮಾನ್ಯ ಶಾಸಕರುಗಳಿಗೆ ವಿತರಿಸುವ ಬಗ್ಗೆ ಮಾನ್ಯ ಸಭಾಪತಿಯವರು ಪ್ರಕಟಿಸಿದರು.

ಸಂಜೆ 6.25 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ: 19.08.2025ರಂದು ಬೆಳಗ್ಗೆ 10.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**

**ಕಾರ್ಯದರ್ಶಿ**

****

# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತಾರನೆಯ ಅಧಿವೇಶನ

## ಲಘು ಪ್ರಕಟಣೆ ಭಾಗ–1

## ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಮಂಗಳವಾರ, ದಿನಾಂಕ:19.08.2025**

**(06)**

ಸದನವು ಬೆಳಗ್ಗೆ: 10.15 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

### 1. ಪ್ರಶ್ನೋತ್ತರ

ದಿನಾಂಕ:19.08.2025ರಂದು ಸದನದಲ್ಲಿ ಉತ್ತರಿಸುವ ಸಮೂಹ–IIರ 6ನೇ ಪಟ್ಟಿಯ ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

| | | |
|---|---|---|
| 1. | 76(907) | |
| 2. | 77(901) | ಕಾಲಾವಕಾಶ |
| 3. | 78(895) | ಗೈರು ಹಾಜರಿ |
| 4. | 79(923) | |
| 5. | 80(872) | |
| 6. | 81(808) | |
| 7. | 82(1207) | |
| 8. | 83(800) | |

9. 84(916)

10. 85(816) ವರ್ಗಾವಣೆ

11. 86(868) ಗೈರು ಹಾಜರಿ

12. 87(798)

13. 88(846)

14. 89(1237) ಗೈರು ಹಾಜರಿ

15. 90(826)

ದಿನಾಂಕ:19.08.2025ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IIರ 6ನೇ ಪಟ್ಟಿಯ ಒಟ್ಟು 123 ಪ್ರಶ್ನೆಗಳ ಪೈಕಿ **74** ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರ ಪರವಾಗಿ ಮಾನ್ಯ ಕೃಷಿ ಸಚಿವರು ಮಂಡಿಸಿದರು.

## 2. ಶೂನ್ಯವೇಳೆ ಪ್ರಸ್ತಾವಗಳು

1. **ಶ್ರೀ ಐವನ್ ಡಿ'ಸೋಜಾ** ಅವರು ಕರಾವಳಿಯ ವೈದ್ಯಕೀಯ ಕಾಲೇಜುಗಳಲ್ಲಿ ಎಂಬಿಬಿಎಸ್ ಪ್ರವೇಶಕ್ಕೆ ತುಳು ಕೋಟಾದಡಿ ಸೀಟು ಹಂಚಿಕೆ ಮಾಡುವುದನ್ನು ನಿಲ್ಲಿಸಿರುವುದರಿಂದ, ಸರ್ಕಾರ ಮಧ್ಯ ಪ್ರವೇಶಿಸಿ ಸೂಕ್ತ ನಿಯಮ ರೂಪಿಸಿ ತುಳು ಭಾಷಾ ಮೆರಿಟ್ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಕೃಷಿ ಸಚಿವರು ತಿಳಿಸಿದರು.

2. **ಶ್ರೀ ರಾಮೋಜಿಗೌಡ** ಅವರು ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ 22ಕ್ಕೂ ಹೆಚ್ಚು ಅರಣ್ಯ ರಕ್ಷಕ ಮತ್ತು ಅರಣ್ಯ ಕಾವಲುಗಾರರ ಹುದ್ದೆಗಳು ಖಾಲಿ ಇರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಕೃಷಿ ಸಚಿವರು ತಿಳಿಸಿದರು.

3. **ಶ್ರೀಮತಿ ಭಾರತಿ ಶೆಟ್ಟಿ ಮತ್ತು ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್)** ಅವರು ಬಿಬಿಎಂಪಿ ಅಧೀನದಲ್ಲಿರುವ ಶಿಕ್ಷಣ ಸಂಸ್ಥೆಗಳಲ್ಲಿ ಶೇ.81ರಷ್ಟು ಬೋಧಕರ ಹುದ್ದೆ ಖಾಲಿ ಇರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಉಪ ಮುಖ್ಯಮಂತ್ರಿಗಳಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಕೃಷಿ ಸಚಿವರು ತಿಳಿಸಿದರು.

4. **ಶ್ರೀ ಡಿ.ಎಸ್. ಅರುಣ್** ಅವರು ಶರವಾತಿ ಕಣಿವೆಯಲ್ಲಿ ವಿದ್ಯುತ್ ಉತ್ಪಾದನಾ ಯೋಜನೆಯನ್ನು ಕೈಬಿಟ್ಟು ಭೂಗತ ಪವರ್ ಸ್ಟೋರೇಜ್ ಅಥವಾ ಸ್ಮಾರ್ಟ್ ಗ್ರಿಡ್ ಮುಂತಾದ ಆಧುನಿಕ ಪರಿಸರ ಸ್ನೇಹಿ ಕ್ರಮಗಳನ್ನು ಅಳವಡಿಸಿಕೊಳ್ಳುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಇಂಧನ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಕೃಷಿ ಸಚಿವರು ತಿಳಿಸಿದರು.

5. **ಡಾ: ಧನಂಜಯ ಸರ್ಜಿ** ಅವರು ರಕ್ತದಾನ ಶಿಬಿರಗಳಲ್ಲಿ ಸಂಗ್ರಹವಾದ ರಕ್ತದಲ್ಲಿ ಪರೀಕ್ಷೆ ವೇಳೆ ಹೆಚ್ಐವಿ/ಹೆಪಿಟೈಟಿಸ್, ಮಲೇರಿಯಾದಂತ ಸೋಂಕು ಪತ್ತೆಯಾಗಿ ರಕ್ತ ವ್ಯರ್ಥವಾಗುತ್ತಿರುವುದರಿಂದ ದಾನ ತೆಗೆದುಕೊಳ್ಳುವ

ಸಂದರ್ಭದಲ್ಲಿ ರಕ್ತದ ಗುಣಮಟ್ಟದ ಪರೀಕ್ಷೆ ಮಾಡುವುದು ಅವಶ್ಯಕವಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಕೃಷಿ ಸಚಿವರು ತಿಳಿಸಿದರು.

6. **ಶ್ರೀ ಬಿ.ಕೆ. ಹರಿಪ್ರಸಾದ್** ಅವರು ಎಲೆಕ್ಟ್ರಾನಿಕ್ ವೋಟಿಂಗ್ ಮಷಿನ್‌ನ (ಇವಿಎಂ) ತಂತ್ರಜ್ಞಾನವನ್ನು ದುರ್ಬಳಕೆ ಮಾಡಿಕೊಂಡು ಮತ ಕಳವು ಮಾಡಲಾಗುತ್ತಿದೆ ಎಂದು ಆರೋಪಿಸುತ್ತಿರುವ ಹಿನ್ನಲೆಯಲ್ಲಿ ಪಾರದರ್ಶಕ ಚುನಾವಣಾ ವ್ಯವಸ್ಥೆ ಜಾರಿಗೆ ತರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಕೃಷಿ ಸಚಿವರು ತಿಳಿಸಿದರು.

7. **ಶ್ರೀ ಸಿ.ಟಿ. ರವಿ ಮತ್ತು ಶ್ರೀ ಗೋವಿಂದರಾಜು** ಅವರು ರಾಜ್ಯದಲ್ಲಿ ಮಕ್ಕಳ ನಾಪತ್ತೆ ಪ್ರಕರಣಗಳು ಹೆಚ್ಚಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಕೃಷಿ ಸಚಿವರು ತಿಳಿಸಿದರು.

8. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ಆರೋಗ್ಯಕ್ಕೆ ಹಾನಿಕಾರಕವಾದ ಸಿಗರೇಟ್, ವಿದೇಶಿ ಮದ್ಯ, ತಂಬಾಕು ಇತ್ಯಾದಿಗಳ ದುಶ್ಚಟಕ್ಕೆ ಯುವಕರು ಬಲಿಯಾಗುತ್ತಿರುವುದನ್ನು ನಿಯಂತ್ರಿಸುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಂದ ಉತ್ತರ ಕೊಡಿಸುವುದಾಗಿ ಮಾನ್ಯ ಕೃಷಿ ಸಚಿವರು ತಿಳಿಸಿದರು.

9. **ಶ್ರೀ ಕೇಶವ ಪ್ರಸಾದ್ ಎಸ್** ಅವರು ರಾಜ್ಯದಲ್ಲಿ ಹಾವು ಕಡಿತದಿಂದ ಮೃತಪಟ್ಟಿರುವ ಪ್ರಕರಣಗಳು ಹೆಚ್ಚಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕೃಷಿ ಸಚಿವರು ಉತ್ತರಿಸಿದರು.

10. **ಶ್ರೀ ಬಸನಗೌಡ ಬಾದರ್ಲಿ** ಅವರು ಸಿಂಧನೂರು ತಾಲ್ಲೂಕಿನ ಚಿರತನಾಳ ಗ್ರಾಮದ ಹತ್ತಿರ ಕಿರುಸೇತುವೆ ಗಟ್ಟಿ ತಳಪಾಯವಿಲ್ಲದೆ ನಿರ್ಮಾಣದಲ್ಲಿ ವಿಳಂಬವಾಗಿರುವ ಕುರಿತು ಪ್ರಸ್ತಾಪಿಸಿದರು.

ಮಾನ್ಯ ಕೃಷಿ ಸಚಿವರು ಉತ್ತರಿಸಿದರು.

### 3. ವರದಿಗಳನ್ನೊಪ್ಪಿಸುವುದು

ಅ. **ಶ್ರೀ ಶರವಣ ಟಿ.ಎ. (ಅಧ್ಯಕ್ಷರು, ಕರ್ನಾಟಕ ವಿಧಾನ ಪರಿಷತ್ತಿನ ಸರ್ಕಾರಿ ಭರವಸೆಗಳ ಸಮಿತಿ)** ಅವರು 2023-24 ಮತ್ತು 2024-25ನೇ ಸಾಲಿನ ಕರ್ನಾಟಕ ವಿಧಾನ ಪರಿಷತ್ತಿನ ಸರ್ಕಾರಿ ಭರವಸೆಗಳ ಸಮಿತಿಯ 50ನೇ ವರದಿಯನ್ನೊಪ್ಪಿಸಿದರು.

ಆ. **ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್.) (ಸದಸ್ಯರು, ಕರ್ನಾಟಕ ವಿಧಾನಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿ)** ಅವರು ಕರ್ನಾಟಕ ವಿಧಾನಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 43ನೇ ವರದಿಯನ್ನೊಪ್ಪಿಸಿದರು.

ಇ. **ಶ್ರೀ ಕಿಶೋರ್ ಕುಮಾರ್ ಪುತ್ತೂರ್** (ಸದಸ್ಯರು, **ಕರ್ನಾಟಕ ವಿಧಾನಮಂಡಲದ ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿ**) ಅವರು ಕರ್ನಾಟಕ ವಿಧಾನಮಂಡಲದ ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿಯ 40ನೇ ವರದಿಯನ್ನೊಪ್ಪಿಸಿದರು.

ಈ. **ಶ್ರೀ ಎ. ವಸಂತ ಕುಮಾರ್** (ಸದಸ್ಯರು, **ಕರ್ನಾಟಕ ವಿಧಾನಮಂಡಲದ ಅಧೀನ ಶಾಸನ ರಚನಾ ಸಮಿತಿ**) ಅವರು ಕರ್ನಾಟಕ ವಿಧಾನಮಂಡಲದ ಅಧೀನ ಶಾಸನ ರಚನಾ ಸಮಿತಿಯ 53ನೇ ವರದಿಯನ್ನೊಪ್ಪಿಸಿದರು.

**4. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು**

1. ಮಾನ್ಯ ಮುಖ್ಯಮಂತ್ರಿಯವರ ಪರವಾಗಿ ಮಾನ್ಯ ಕೃಷಿ ಸಚಿವರು ಮಾರ್ಚ್ 2023-2024ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ರಾಜ್ಯದ ಹಣಕಾಸಿನ ವ್ಯವಹಾರಗಳ ಲೆಕ್ಕಪರಿಶೋಧನಾ ವರದಿ (2025ರ ವರದಿ ಸಂಖ್ಯೆ-4)ಯನ್ನು ಸಭೆಯ ಮುಂದೆ ಮಂಡಿಸಿದರು.

2. ಮಾನ್ಯ ಮುಖ್ಯಮಂತ್ರಿಯವರ ಪರವಾಗಿ ಮಾನ್ಯ ಕೃಷಿ ಸಚಿವರು ಮಾರ್ಚ್ 2023ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ರಾಜ್ಯ ಕಂದಾಯದ ವರದಿ (2025ನೇ ವರ್ಷದ ವರದಿ ಸಂಖ್ಯೆ-5) ಯನ್ನು ಸಭೆಯ ಮುಂದೆ ಮಂಡಿಸಿದರು.

3. ಮಾನ್ಯ ಮುಖ್ಯಮಂತ್ರಿಯವರ ಪರವಾಗಿ ಮಾನ್ಯ ಕೃಷಿ ಸಚಿವರು 2020-2022ನೇ ಸಾಲಿನ ಪಂಚಾಯತ್ ರಾಜ್ ಸಂಸ್ಥೆಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳ ಮೇಲಿನ ಸಂಯೋಜಿತ ವಾರ್ಷಿಕ ತಾಂತ್ರಿಕ ಪರಿಶೀಲನಾ ವರದಿಯನ್ನು ಸಭೆಯ ಮುಂದೆ ಮಂಡಿಸಿದರು.

4. ಮಾನ್ಯ ಮುಖ್ಯಮಂತ್ರಿಯವರ ಪರವಾಗಿ ಮಾನ್ಯ ಕೃಷಿ ಸಚಿವರು ಮಾರ್ಚ್ 2023ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಅನುಸರಣಾ ಲೆಕ್ಕಪರಿಶೋಧನೆ ವರದಿ (2025ನೇ ವರ್ಷದ ವರದಿ ಸಂಖ್ಯೆ-3)ಯನ್ನು ಸಭೆಯ ಮುಂದೆ ಮಂಡಿಸಿದರು.

**05. ಗಮನ ಸೆಳೆಯುವ ಸೂಚನೆ**

1. **ಡಾ: ಉಮಾಶ್ರೀ** ಅವರು ಮೈಸೂರು ವಿಶ್ವವಿದ್ಯಾಲಯದಲ್ಲಿ ಪಿಹೆಚ್‌ಡಿ ಸಾಮಾನ್ಯ ಪ್ರವೇಶ ಪರೀಕ್ಷೆ ತೇರ್ಗಡೆಯಾಗಿ ಅರ್ಹತೆ ಹೊಂದಿದ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಮಾರ್ಗದರ್ಶಕರ ಕೊರತೆ ಉಂಟಾಗಿರುವ ಕುರಿತು ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆದರು.

ಮಾನ್ಯ ಉನ್ನತ ಶಿಕ್ಷಣ ಸಚಿವರು ಉತ್ತರಿಸಿದರು.

**06. ವಿಶೇಷ ಸದನ ಸಮಿತಿಯ ಕಾಲಾವಕಾಶವನ್ನು ವಿಸ್ತರಿಸುವ ಪ್ರಸ್ತಾವ**

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಅಧ್ಯಕ್ಷರು, ವಿಶೇಷ ಸದನ ಸಮಿತಿ) ಅವರು:-**

ರಾಜ್ಯದ ವಿವಿಧ ನಿಗಮಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳ ಸಂಬಂಧ ಪರಿಶೀಲಿಸಿ ವರದಿಯನ್ನು ಸಲ್ಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯು ವರದಿಯನ್ನು ಸಲ್ಲಿಸಲು ದಿನಾಂಕ:22.04.2025ರಿಂದ 06 ತಿಂಗಳುಗಳ ಕಾಲಾವಕಾಶವನ್ನು ಸದನದ ಸಹಮತಿಯನ್ನು ಕಾಯ್ದಿರಿಸಿ ವಿಸ್ತರಿಸಲಾಗಿರುವ ಪ್ರಸ್ತಾವನೆಗೆ ಸದನದ ಸಹಮತಿ ಕೋರಿ ಪ್ರಸ್ತಾವವನ್ನು ಮಂಡಿಸಿದರು.

ಸದನದ ಸಹಮತಿ ಪಡೆಯುವ ಪ್ರಸ್ತಾವವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

## ಗಮನ ಸೆಳೆಯುವ ಸೂಚನೆ

2. **ಶ್ರೀ ಶಶೀಲ್ ಜಿ. ನಮೋಶಿ** ಅವರು 1995ರ ನಂತರದಲ್ಲಿ ಸ್ಥಾಪನೆಯಾಗಿರುವ ಕನ್ನಡ ಮಾಧ್ಯಮ ಖಾಸಗಿ ಶಾಲಾ ಕಾಲೇಜುಗಳನ್ನು ವೇತನ ಅನುದಾನಕ್ಕೆ ಒಳಪಡಿಸುವ ಬಗ್ಗೆ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಗಮನ ಸೆಳೆದರು.

ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಉತ್ತರಿಸಿದರು.

## 7. ಅಭಿನಂದನಾ ನಿರ್ಣಯ

ಶ್ರೀ ಬಸವರಾಜ ಹೊರಟ್ಟಿ, ಮಾನ್ಯ ಸಭಾಪತಿಯವರು ಸತತವಾಗಿ 45 ವರ್ಷಗಳು ಶಾಸಕರಾಗಿ ರಾಜಕೀಯ ಕ್ಷೇತ್ರದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಜನಮಾನಸದಲ್ಲಿ ಅಚ್ಚಳಿಯದೆ ಛಾಪು ಮೂಡಿಸಿರುವ ಈ ಸುಸಂದರ್ಭದಲ್ಲಿ ಶ್ರೀ ಮಂಜುನಾಥ್ ಭಂಡಾರಿ ಅವರು ಮಂಡಿಸಿದ ಅಭಿನಂದನಾ ನಿರ್ಣಯವನ್ನು ಶ್ರೀ ಬಿ.ಕೆ. ಹರಿಪ್ರಸಾದ್ ಅನುಮೋದಿಸಿ, ಸರ್ಕಾರ ಹಾಗೂ ಸದನದ ಪರವಾಗಿ ಹೃತ್ಪೂರ್ವಕ ಅಭಿನಂದನೆಯನ್ನು ಸಲ್ಲಿಸಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಮಾತನಾಡಿದರು.

ಶ್ರೀಯುತರುಗಳಾದ:

1. ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು
2. ಅಡಗೂರ್ ಹೆಚ್. ವಿಶ್ವನಾಥ್
3. ಐವನ್ ಡಿ'ಸೋಜಾ
4. ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್)

5. ಹೇಮಲತಾ ನಾಯಕ

6. ಪಿ.ಹೆಚ್. ಪೂಜಾರ್

7. ಪುಟ್ಟಣ್ಣ

8. ಎಂ.ಬಿ. ಪಾಟೀಲ್, ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

9. ಡಾ: ಧನಂಜಯ ಸರ್ಜಿ

10. ಶಶೀಲ್ ಜಿ. ನಮೋಶಿ

11. ನಿರಾಣಿ ಹಣಮಂತ್ ರುದ್ರಪ್ಪ

12. ಸಲೀಂ ಅಹಮದ್

13. ನಸೀರ್ ಅಹ್ಮದ್

14. ಬಲ್ಕೀಸ್ ಬಾನು

15. ತಿಪ್ಪಣ್ಣಪ್ಪ ಕಮಕನೂರ

16. ಶರವಣ ಟಿ.ಎ

17. ಕೆ.ಎಸ್. ನವೀನ್

18. ಕಿಶೋರ್ ಕುಮಾರ್ ಪುತ್ತೂರ್

## 8. ಪ್ರಕಟಣೆ

ವಿಶ್ವಪರಂಪರೆ ಹಿರೇಬೆಣಕಲ್ ಪ್ರಾಗೈತಿಹಾಸಿಕ ಚಿತ್ರಣಗಳ ಉದ್ಘಾಟನೆಯನ್ನು ದಿನಾಂಕ:19.08.2025ರಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಮಧ್ಯಾಹ್ನ 2.00 ಗಂಟೆಗೆ ಮಾನ್ಯ ಮುಖ್ಯಮಂತ್ರಿಗಳು ನೆರವೇರಿಸಲಿದ್ದು, ಸದರಿ ಕಾರ್ಯಕ್ರಮದಲ್ಲಿ ಎಲ್ಲಾ

ಶಾಸಕರುಗಳು ಭಾಗವಹಿಸಬೇಕೆಂದು ಮಾನ್ಯ ಸಭಾಪತಿಯವರು ಪ್ರಕಟಿಸಿದರು.

ಮಧ್ಯಾಹ್ನ 2.00 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪ್ರಕಟಿಸಿದರು.

ಮಧ್ಯಾಹ್ನ 3.30 ಗಂಟೆಗೆ ಮಾನ್ಯ ಸಭಾಪತಿಯವರ **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**ಪ್ರಕಟಣೆ**

**ಮಾನ್ಯ ಸಭಾಧ್ಯಕ್ಷರವರಿಂದ ಬಂದಿರುವ ಕೆಳಕಂಡ ಸಂದೇಶವನ್ನು ಮಾನ್ಯ ಸಭಾಪತಿಯವರು ಪ್ರಕಟಿಸಿದರು.**

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ 104ನೇ ನಿಯಮದ ಮೇರೆಗೆ ವಿಧಾನ ಸಭೆಯು ದಿನಾಂಕ:18.08.2025ರಂದು **ಕರ್ನಾಟಕ ನಿರಪರಾಧಿಕಾರಣ (ಉಪಬಂಧಗಳ ತಿದ್ದುಪಡಿ) ವಿಧೇಯಕ, 2025 ಮತ್ತು ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕ, 2025ಗಳನ್ನು ತಿದ್ದುಪಡಿಗಳೊಂದಿಗೆ** ಹಾಗೂ ಈ ಕೆಳಕಂಡ ವಿಧೇಯಕಗಳನ್ನು ಯಾವುದೇ ತಿದ್ದುಪಡಿಗಳಿಲ್ಲದೆ ಅಂಗೀಕರಿಸಿರುತ್ತದೆಂದು ಮತ್ತು ಸದರಿ ವಿಧೇಯಕಗಳಿಗೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

1. ಕರ್ನಾಟಕ ವೈದ್ಯಕೀಯ ನೋಂದಣಿ (ತಿದ್ದುಪಡಿ) ವಿಧೇಯಕ, 2025

2. ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ, 2025

3. ಕರ್ನಾಟಕ ಅಗ್ನಿಶಾಮಕ ದಳ (ತಿದ್ದುಪಡಿ) ವಿಧೇಯಕ, 2025

4. ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ(ತಿದ್ದುಪಡಿ) ವಿಧೇಯಕ, 2025

5. ಗದಗ–ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025

6. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2025

7. ಕರ್ನಾಟಕ ಪ್ರವಾಸೋದ್ಯಮ ವ್ಯಾಪಾರ (ಸೌಲಭ್ಯ ಮತ್ತು ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2025

8. ಕರ್ನಾಟಕ ಸರ್ಕಾರಿ ವ್ಯಾಜ್ಯ ನಿರ್ವಹಣೆ (ತಿದ್ದುಪಡಿ) ವಿಧೇಯಕ, 2025

9. ಕರ್ನಾಟಕ ದೇವದಾಸಿ (ಪ್ರತಿಬಂಧಕ, ನಿಷೇಧ, ಪರಿಹಾರ ಮತ್ತು ಪುನರ್ವಸತಿ) ವಿಧೇಯಕ, 2025

10. ಬಾಲ್ಯ ವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ) ವಿಧೇಯಕ, 2025

### ಅಭಿನಂದನಾ ನಿರ್ಣಯ

ಶ್ರೀಯುತರುಗಳಾದ:

19. ಡಾ: ಎಂ.ಜಿ. ಮುಳೆ

20. ಜಗದೇವ್ ಗುತ್ತೇದಾರ್

21. ಪ್ರತಾಪ್ ಸಿಂಹ ನಾಯಕ್ ಕೆ
22. ಭಾರತಿ ಶೆಟ್ಟಿ
23. ಎಂ. ನಾಗರಾಜು
24. ಡಾ: ಎಂ.ಆರ್. ಸೀತಾರಾಂ
25. ಡಾ: ಡಿ. ತಿಮ್ಮಯ್ಯ
26. ಶಾಂತಾರಾಮ್ ಬುಡ್ನ ಸಿದ್ದಿ
27. ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು
28. ಸಿ.ಟಿ. ರವಿ
29. ಮಧು ಬಂಗಾರಪ್ಪ, ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು
30. ಎಸ್.ಎಲ್. ಭೋಜೇಗೌಡ
31. ಆರ್.ಬಿ. ತಿಮ್ಮಾಪೂರ, ಮಾನ್ಯ ಅಬಕಾರಿ ಸಚಿವರು
32. ಎನ್. ಚಲುವರಾಯಸ್ವಾಮಿ, ಮಾನ್ಯ ಕೃಷಿ ಸಚಿವರು
33. ಹೆಚ್.ಕೆ. ಪಾಟೀಲ್, ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು

ಮಾನ್ಯ ಸಭಾನಾಯಕರು ಅಭಿನಂದನಾ ನಿರ್ಣಯವನ್ನು ಮಂಡಿಸಿದರು.

## 9. ಸಭೆಯ ಮುಂದಿಡಲಾದ ಕಾಗದ ಪತ್ರಗಳು

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಕಾರ್ಯದರ್ಶಿಯವರು ಮಂಡಿಸಿದರು.

01. ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ, 2025

02. ಕರ್ನಾಟಕ ಸರ್ಕಾರಿ ವ್ಯಾಜ್ಯ ನಿರ್ವಹಣೆ (ತಿದ್ದುಪಡಿ) ವಿಧೇಯಕ, 2025

03. ಕರ್ನಾಟಕ ಪ್ರವಾಸೋದ್ಯಮ ವ್ಯಾಪಾರ (ಸೌಲಭ್ಯ ಮತ್ತು ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2025

04. ಕರ್ನಾಟಕ ಅಗ್ನಿಶಾಮಕ ದಳ (ತಿದ್ದುಪಡಿ) ವಿಧೇಯಕ, 2025

05. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2025

06. ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ(ತಿದ್ದುಪಡಿ) ವಿಧೇಯಕ, 2025

07. ಕರ್ನಾಟಕ ವೈದ್ಯಕೀಯ ನೋಂದಣಿ (ತಿದ್ದುಪಡಿ) ವಿಧೇಯಕ, 2025

08. ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025

09. ಬಾಲ್ಯ ವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ) ವಿಧೇಯಕ, 2025

10. ಕರ್ನಾಟಕ ದೇವದಾಸಿ (ಪ್ರತಿಬಂಧಕ, ನಿಷೇಧ, ಪರಿಹಾರ ಮತ್ತು ಪುನರ್ವಸತಿ) ವಿಧೇಯಕ, 2025

## ಗಮನ ಸೆಳೆಯುವ ಸೂಚನೆ

3. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ಬೆಂಗಳೂರಿನಲ್ಲಿ ಸರ್ಕಾರದಿಂದ ನಿಜಶರಣ ಅಂಬಿಗರ ಚೌಡಯ್ಯ ಪ್ರತಿಮೆಯನ್ನು ಚಾಲುಕ್ಯ ವೃತ್ತದಲ್ಲಿರುವ ಜಗಜ್ಯೋತಿ ಬಸವೇಶ್ವರರ ಪ್ರತಿಮೆಯ ಪಕ್ಕದಲ್ಲಿರುವ ಜವಾಹರಲಾಲ್ ನೆಹರೂ ಪ್ಲಾನಿಟೋರಿಯಂಗೆ ಹೊಂದಿಕೊಂಡಿರುವ ಜಾಗದಲ್ಲಿ ಸ್ಥಾಪಿಸುವ ಬಗ್ಗೆ ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಗಮನ ಸೆಳೆದರು.

ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಉತ್ತರಿಸಿದರು.

## 10. ನಿಯಮ 330ರ ಮೇರೆಗೆ

1. **ಶ್ರೀಯುತರುಗಳಾದ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು, ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಮಾನ್ಯ ಶಾಸಕರುಗಳಾದ ಸಿ.ಟಿ. ರವಿ, ಸುನೀಲ್ ವಲ್ಯಾಪುರ್, ಎಸ್.ಎಲ್. ಭೋಜೇಗೌಡ ಹಾಗೂ ಇತರರು** ಪರಿಶಿಷ್ಠ ಜಾತಿ ಅಡಿಯಲ್ಲಿ ಬರುವ ವಿವಿಧ ಸಮುದಾಯಗಳಿಗೆ ಒಳಮೀಸಲಾತಿಯನ್ನು ಅನುಷ್ಠಾನಗೊಳಿಸುವ ಕುರಿತು ಪ್ರಸ್ತಾಪಿಸಿದರು.

ಸಂಜೆ 5.25 ಗಂಟೆಯಲ್ಲಿ **ಶ್ರೀ ಮಂಜುನಾಥ್ ಭಂಡಾರಿ** ಅವರು ಸಭಾಪತಿಯವರ ಪೀಠದಲ್ಲಿ ಆಸೀನರಾದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

1. ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು
2. ಶ್ರೀ ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು

**"ಗದ್ದಲ"**

ಸಂಜೆ 6.45 ಗಂಟೆಗೆ ಸದನವನ್ನು ಮುಂದೂಡಿ ದಿನಾಂಕ: 20.08.2025ರಂದು ಬೆಳಗ್ಗೆ 10.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (ಶ್ರೀ **ಮಂಜುನಾಥ್ ಭಂಡಾರಿ**) ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**

**ಕಾರ್ಯದರ್ಶಿ**

****

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತಾರನೆಯ ಅಧಿವೇಶನ

ಲಘು ಪ್ರಕಟಣೆ ಭಾಗ – 1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಬುಧವಾರ, ದಿನಾಂಕ:20.08.2025**

**(07)**

ದಿನಾಂಕ:20.08.2025 ರಂದು ಬೆಳಗ್ಗೆ 10.20 ಗಂಟೆಗೆ ಸದನವು ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಪ್ರಕಟಣೆ

**ಮಾನ್ಯ ಸಭಾಧ್ಯಕ್ಷರವರಿಂದ ಬಂದಿರುವ ಕೆಳಕಂಡ ಸಂದೇಶವನ್ನು ಮಾನ್ಯ ಸಭಾಪತಿಯವರು ಪ್ರಕಟಿಸಿದರು.**

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ 104ನೇ ನಿಯಮದ ಮೇರೆಗೆ ವಿಧಾನ ಸಭೆಯು ದಿನಾಂಕ:19.08.2025ರಂದು **ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ, 2025 ಮತ್ತು ಕರ್ನಾಟಕ ಮುನ್ಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2025ಗಳನ್ನು ತಿದ್ದುಪಡಿಗಳೊಂದಿಗೆ** ಹಾಗೂ ಈ ಕೆಳಕಂಡ ವಿಧೇಯಕಗಳನ್ನು ಯಾವುದೇ ತಿದ್ದುಪಡಿಗಳಿಲ್ಲದೆ ಅಂಗೀಕರಿಸಿರುತ್ತದೆಂದು ಮತ್ತು ಸದರಿ ವಿಧೇಯಕಗಳಿಗೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

1. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ, 2025

2. ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025

3. ಕರ್ನಾಟಕ ವೇದಿಕೆ ಆಧಾರಿತ ಗಿಗ್ ಕಾರ್ಮಿಕರ (ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ) ವಿಧೇಯಕ, 2025

4. ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ (ತಿದ್ದುಪಡಿ) ವಿಧೇಯಕ, 2025

5. ಕರ್ನಾಟಕ ನಗರ ಪಾಲಿಕೆಗಳ(ತಿದ್ದುಪಡಿ) ವಿಧೇಯಕ, 2025

6. ಕರ್ನಾಟಕ ಬಂದರುಗಳ (ಸರಕನ್ನು ಹಡಗಿನಿಂದ ಇಳಿಸುವ ಮತ್ತು ಹಡಗಿಗೆ ತುಂಬುವ ಫೀಜುಗಳು) ತಿದ್ದುಪಡಿ ವಿಧೇಯಕ, 2025

7. ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಮತ್ತು ನಿರ್ವಹಣೆಯ ವಿನಿಯಮನ ಹಾಗೂ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2025

8. ಗ್ರೇಟರ್ ಬೆಂಗಳೂರು ಆಡಳಿತ (ತಿದ್ದುಪಡಿ) ವಿಧೇಯಕ, 2025

**2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು**

ಅ. **ಕಾರ್ಯದರ್ಶಿಯವರು ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು**

01. ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ, 2025

02. ಕರ್ನಾಟಕ ನಿರಪರಾಧೀಕರಣ (ಉಪಬಂಧಗಳ ತಿದ್ದುಪಡಿ) ವಿಧೇಯಕ, 2025

03. ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕ, 2025

04. ಕರ್ನಾಟಕ ಮುನ್ಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2025

**ಹಾಗೂ ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದೆ ಮಂಡಿಸಿದರು**

05. ಗ್ರೇಟರ್ ಬೆಂಗಳೂರು ಆಡಳಿತ (ತಿದ್ದುಪಡಿ) ವಿಧೇಯಕ, 2025

06. ಕರ್ನಾಟಕ ನಗರ ಪಾಲಿಕೆಗಳ (ತಿದ್ದುಪಡಿ) ವಿಧೇಯಕ, 2025

07. ಕರ್ನಾಟಕ ಬಂದರುಗಳ (ಸರಕನ್ನು ಹಡಗಿನಿಂದ ಇಳಿಸುವ ಮತ್ತು ಹಡಗಿಗೆ ತುಂಬುವ ಫೀಜುಗಳು) ತಿದ್ದುಪಡಿ ವಿಧೇಯಕ, 2025

08. ಕರ್ನಾಟಕ ವೇದಿಕೆ ಆಧಾರಿತ ಗಿಗ್ ಕಾರ್ಮಿಕರ (ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ) ವಿಧೇಯಕ, 2025

09. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ, 2025

10. ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025

11. ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಮತ್ತು ನಿರ್ವಹಣೆಯ ವಿನಿಯಮನ ಹಾಗೂ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2025

12. ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ (ತಿದ್ದುಪಡಿ) ವಿಧೇಯಕ, 2025

ಆ. ಮಾನ್ಯ ಮುಖ್ಯಮಂತ್ರಿಯವರ ಪರವಾಗಿ ಮಾನ್ಯ ಸಭಾನಾಯಕರು ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ ಕಲ್ಯಾಣದ ವರದಿ (2025ರ ವರದಿ ಸಂಖ್ಯೆ-2) ಯನ್ನು ಸಭೆಯ ಮುಂದೆ ಮಂಡಿಸಿದರು.

### 3. ಶಾಸನ ರಚನೆ

1. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಸಭಾನಾಯಕರು ಹಾಗೂ ಮಾನ್ಯ ಸಣ್ಣ ನೀರಾವರಿ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಐವನ್ ಡಿ'ಸೋಜಾ
2. ಶರವಣ ಟಿ.ಎ.

3. ಗೋವಿಂದರಾಜು
4. ಕೆ.ಎಸ್. ನವೀನ್
5. ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು
6. ಕೇಶವ ಪ್ರಸಾದ್ ಎಸ್
7. ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು

ಬೆಳಗ್ಗೆ 11.00 ಗಂಟೆಯಲ್ಲಿ **ಶ್ರೀ ಮಂಜುನಾಥ್ ಭಂಡಾರಿ** ಅವರು ಸಭಾಪತಿಯವರ ಪೀಠದಲ್ಲಿ ಆಸೀನರಾದರು.

8. ಹೇಮಲತಾ ನಾಯಕ
9. ರಾಮೋಜಿಗೌಡ
10. ಪಿ.ಹೆಚ್. ಪೂಜಾರ್
11. ಸಿ.ಟಿ. ರವಿ
12. ಪ್ರತಾಪ್ ಸಿಂಹ ನಾಯಕ್ ಕೆ
13. ಎಂ. ನಾಗರಾಜು
14. ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್)
15. ಕೆ. ವಿವೇಕಾನಂದ
16. ಸಿ.ಟಿ. ರವಿ
17. ಎಸ್.ಎಲ್. ಭೋಜೇಗೌಡ

ಮಾನ್ಯ ಸಣ್ಣ ನೀರಾವರಿ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ವಿರೋಧಿಸಿ ವಿರೋಧ ಪಕ್ಷದ ನಾಯಕರು ಹಾಗೂ ಮಾನ್ಯ ಶಾಸಕರುಗಳು ಸಭಾತ್ಯಾಗ ಮಾಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

2. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ನಿರಪರಾಧೀಕರಣ (ಉಪಬಂಧಗಳ ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆಗಳು, ಮೂಲಭೂತ ಸೌಕರ್ಯ ಸಚಿವರು ವಿವರಣೆ ನೀಡಿದರು.

ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಟಿ. ಛಲವಾದಿ ಟಿ. ನಾರಾಯಣಸ್ವಾಮಿ ಹಾಗೂ ಮಾನ್ಯ ಶಾಸಕರುಗಳು ತಮ್ಮ ಆಸನಗಳಿಗೆ ಹಿಂದಿರುಗಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

3. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಎಸ್.ಎಲ್. ಭೋಜೇಗೌಡ
2. ಶರವಣ ಟಿ.ಎ.
3. ಡಾ: ಧನಂಜಯ ಸರ್ಜಿ
4. ಐವನ್ ಡಿ'ಸೋಜಾ
5. ಕೆ.ಎಸ್. ನವೀನ್
6. ಗೋವಿಂದರಾಜು
7. ಸಿ.ಟಿ. ರವಿ
8. ಎಸ್. ರವಿ
9. ಕೇಶವ ಪ್ರಸಾದ್ ಎಸ್
10. ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು
11. ಬಲ್ಕೀಸ್ ಬಾನು

ಮಧ್ಯಾಹ್ನ 12.53 ಗಂಟೆಗೆ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

4. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಮುಖ್ಯಮಂತ್ರಿಯವರ ಪರವಾಗಿ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಡಿ.ಎಸ್. ಅರುಣ್
2. ಎಸ್.ಎಲ್. ಭೋಜೇಗೌಡ
3. ಎಸ್. ರವಿ
4. ನಿರಾಣಿ ಹಣಮಂತ್ ರುದ್ರಪ್ಪ
5. ಶರವಣ ಟಿ.ಎ
6. ಐವನ್ ಡಿ'ಸೋಜಾ
7. ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು
8. ಸಿ.ಟಿ. ರವಿ
9. ಪ್ರತಾಪ್ ಸಿಂಹ ನಾಯಕ್ ಕೆ.

10.ಅಡಗೂರ್ ಹೆಚ್. ವಿಶ್ವನಾಥ್

11. ಕೆ.ಎಸ್. ನವೀನ್

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸ್ಪಷ್ಟೀಕರಣ ನೀಡಿದರು.

ಮಾನ್ಯ ವಿರೋಧ ಪಕ್ಷದ ನಾಯಕರು ಸದರಿ ವಿಧೇಯಕಕ್ಕೆ ವಿರೋಧ ವ್ಯಕ್ತಪಡಿಸಿ ಮತಕ್ಕೆ ಹಾಕಬೇಕೆಂದು ಕೋರಿದರು.

ವಿಧೇಯಕವನ್ನು ಮತಕ್ಕೆ ಹಾಕಲಾಯಿತು.

ವಿಧೇಯಕದ ಪರವಾಗಿರುವವರು - 23

ವಿಧೇಯಕದ ವಿರೋಧವಾಗಿರುವವರು - 26

ವಿಧೇಯಕವನ್ನು ಪರ್ಯಾಲೋಚನೆಗೆ ತೆಗೆದುಕೊಳ್ಳುವ ಪ್ರಸ್ತಾವನೆಯನ್ನು ತಿರಸ್ಕರಿಸಲಾಯಿತು.

ಮಧ್ಯಾಹ್ನ 2.30 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

ಸದನವು ಮಧ್ಯಾಹ್ನ 3.40 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

### 4. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಪುಟ್ಟಣ್ಣ ಹಾಗೂ ಶ್ರೀ ಎಸ್.ಎಲ್. ಭೋಜೇಗೌಡ** ಅವರುಗಳು ಕೋಲಾರ ತಾಲ್ಲೂಕು ರಾಷ್ಟ್ರೀಯ ಹೆದ್ದಾರಿ 75 ರಿಂದ ನರಸಾಪುರ ಗ್ರಾಮದ ಮೂಲಕ ಹಾದು ಹೋಗುವ

ರಾಷ್ಟ್ರೀಯ ಹೆದ್ದಾರಿಯ ಹೆಚ್.ಎಲ್. ಸಂಖ್ಯೆ:345/2, 366 ಮತ್ತು ಇನ್ನಿತರೆ ನಿವೇಶನದಾರರ ಖಾತೆಗಳನ್ನು ರದ್ದುಗೊಳಿಸಿರುವ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆದರು.

**ಶಾಸನ ರಚನೆ**

5. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಸಿ.ಟಿ. ರವಿ

ಮಧ್ಯಾಹ್ನ 3.50 ಗಂಟೆಯಲ್ಲಿ **ಶ್ರೀ ಮಂಜುನಾಥ್ ಭಂಡಾರಿ** ಅವರು ಸಭಾಪತಿಯವರ ಪೀಠದಲ್ಲಿ ಆಸೀನರಾದರು.

2. ಗೋವಿಂದರಾಜು
3. ಎಸ್.ವ್ಹಿ. ಸಂಕನೂರ
4. ಕೇಶವ ಪ್ರಸಾದ್ ಎಸ್
5. ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು

6. ಶರವಣ ಟಿ.ಎ

7. ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು

ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

## 5. ಸಚಿವರ ಹೇಳಿಕೆ

**ಪರಿಶಿಷ್ಟ ಜಾತಿಗಳ ಒಳಮೀಸಲಾತಿ-ಸರ್ಕಾರದ ತೀರ್ಮಾನ ಕುರಿತು ಮುಖ್ಯಮಂತ್ರಿಗಳಿಂದ ಹೇಳಿಕೆ**

1. ಪರಿಶಿಷ್ಟ ಜಾತಿಗಳಿಗೆ ಒಳಮೀಸಲಾತಿ ಕಲ್ಪಿಸುವ ಕುರಿತಂತೆ ಗೌರವಾನ್ವಿತ ಸರ್ವೋಚ್ಛ ನ್ಯಾಯಾಲಯವು ದಿನಾಂಕ: 01.08.2024ರಂದು ಪಂಜಾಬ್ ರಾಜ್ಯ ಮತ್ತು ಇತರರು ವರ್ಸಸ್ ದೇವಿಂದರ್ ಸಿಂಗ್ ಪ್ರಕರಣದಲ್ಲಿ

   "The provision provides the State with the power to make "any" special provisions for the Schedules castes and the Scheduled Tribes. Thereby, it recognizes the wide power of the State to employ a range of means to secure substantive equality. This would include sub-classifiction within the Scheduled Castes." ಎಂದು ತೀರ್ಪು ನೀಡಿದೆ. ಅಂದರೆ, ಪರಿಶಿಷ್ಟ ಜಾತಿಗಳ ಉಪವರ್ಗೀಕರಣ ಮಾಡುವ ಅಧಿಕಾರ ರಾಜ್ಯ ಸರ್ಕಾರಗಳಿಗೆ ಸಾಂವಿಧಾನಿಕವಾಗಿ ದತ್ತವಾಗಿದೆ ಎಂದು

ಸ್ಪಷ್ಟವಾಗಿ ಹೇಳಿದೆ. ಸಂವಿಧಾನದ ಅನುಚ್ಛೇದ 14, 15 ಮತ್ತು 16ರಲ್ಲಿ ತಿಳಿಯಪಡಿಸಿರುವ ಸಮಾನತೆಯ ತತ್ವಕ್ಕೆ ಯಾವುದೇ ಚ್ಯುತಿ ಬಾರದಂತೆ ಅದರ ಮೂಲ ಆಶಯವನ್ನು ಸದೃಢಗೊಳಿಸುವ ದೃಷ್ಟಿಯಿಂದ ಒಳ ಮೀಸಲಾತಿ ವ್ಯವಸ್ಥೆ ಕಲ್ಪಿಸಬಹುದು ಎಂದು ಅಭಿಪ್ರಾಯಪಟ್ಟಿದೆ.

2. ಈ ಹಿನ್ನೆಲೆಯಲ್ಲಿ, ನಮ್ಮ ಸರ್ಕಾರವು ದಿನಾಂಕ:12.11.2024ರಂದು ಆದೇಶ ಸಂಖ್ಯೆ ಎಸ್‌ಡಬ್ಲ್ಯುಡಿ/8/ ಎಸ್‌ಎಲ್‌ಪಿ/2024(ಪಿ–1)ರ ಆದೇಶದ ಪ್ರಕಾರ ಗೌರವಾನ್ವಿತ ನ್ಯಾಯಮೂರ್ತಿ ಹೆಚ್.ಎನ್. ನಾಗಮೋಹನ್‌ದಾಸ್ ಅವರ ಏಕ ಸದಸ್ಯ ಆಯೋಗವನ್ನು ರಚಿಸಲಾಯಿತು. ಸದರಿ ಆಯೋಗವು ಸೂಕ್ತ ದತ್ತಾಂಶಗಳನ್ನು (Empirical Data) ಸಂಗ್ರಹಿಸಿ, ಒಳ ಮೀಸಲಾತಿ ನೀಡುವ ಕುರಿತು ಶಿಫಾರಸ್ಸುಗಳನ್ನು ಮಾಡಲು ಕೋರಲಾಯಿತು.

3. ಜಸ್ಟೀಸ್ ಹೆಚ್.ಎನ್. ನಾಗಮೋಹನ್‌ದಾಸ್ ಅವರ ಆಯೋಗವು ರಾಜ್ಯದ 101 ಪರಿಶಿಷ್ಟ ಜಾತಿಗಳನ್ನು ಸಮಗ್ರವಾಗಿ ಅಧ್ಯಯನ ಮಾಡಿ ದಿನಾಂಕ:01.08.2025ರಂದು ವರದಿಯನ್ನು ಸಲ್ಲಿಸಿತು. ಆಯೋಗವು ಪರಿಶಿಷ್ಟ ಜಾತಿಗಳಿಗೆ ಸೇರಿದ 1,05,09,871 ಜನರ ದತ್ತಾಂಶಗಳನ್ನು ಸಂಗ್ರಹಿಸಿದೆ. ಶೇ.93ರಷ್ಟು ಪರಿಶಿಷ್ಟ ಜಾತಿಗಳ ಜನಸಂಖ್ಯೆಯು ಈ ಸಮೀಕ್ಷೆಗೆ ಲಭ್ಯವಾಗಿದೆ. ಸಚಿವರ ಸಂಪುಟವು ಈ ವರದಿಯನ್ನು ಕೂಲಂಕಷವಾಗಿ ಪರಿಶೀಲಿಸಿದೆ.

4. **ದಿನಾಂಕ:19.08.2025ರಂದು ನಡೆದ ಸಚಿವ ಸಂಪುಟದಲ್ಲಿ ಜಸ್ಟೀಸ್ ನಾಗಮೋಹನ್ ದಾಸ್ ಅವರ ಶಿಫಾರಸ್ಸುಗಳನ್ನು ಕೆಲವು ಮಾರ್ಪಾಟುಗಳೊಂದಿಗೆ ಅಂಗೀಕರಿಸಿದ್ದೇವೆ.**

1) ಎಡಗೈ ಸಂಬಂಧಿತ ಜಾರಿಗಳೆಂದು ಆಯೋಗವು ಗುರ್ತಿಸಿರುವ ಸಮುದಾಯಗಳಿಗೆ ಶೇ.6ರಷ್ಟು ಒಳಮೀಸಲಾತಿ ಕಲ್ಪಿಸಲು ತೀರ್ಮಾನಿಸಿದ್ದೇವೆ.

2) ಜಸ್ಟೀಸ್ ನಾಗಮೋಹನ್ ದಾಸ್ ಆಯೋಗವು ಪರಯ, ಮೊಗೇರ ಮುಂತಾದ ಬಲಗೈ ಸಂಬಂಧಿತ ಜಾತಿಗಳನ್ನು ಎಡಗೈ ಸಂಬಂಧಿತ ಜಾತಿಗಳ ಜೊತೆ ಸೇರಿಸಲಾಗಿದೆ ಎಂಬುದನ್ನು ಗಮನಿಸಿದ ಸಚಿವ ಸಂಪುಟವು ಈ ಜಾತಿಗಳನ್ನು ಬಲಗೈ ಸಂಬಂಧಿತ ಜಾತಿಗಳ ಜೊತೆ ಸೇರಿಸಿ ಬಲಗೈ ಸಂಬಂಧಿತ ಜಾತಿಗಳ ಸಮೂಹಕ್ಕೆ ಶೇ.6ರಷ್ಟು ಮೀಸಲಾತಿ ಕಲ್ಪಿಸಲು ತೀರ್ಮಾನಿಸಿದ್ದೇವೆ.

3) ಇದರ ಜೊತೆಯಲ್ಲಿ ಆದಿ ಕರ್ನಾಟಕ, ಆದಿ ಆಂಧ್ರ, ಆದಿ ದ್ರಾವಿಡ ಗುಂಪುಗಳಲ್ಲಿನ 4,74,954 ಜನಸಂಖ್ಯೆಯನ್ನು ಎಡಗೈ ಸಂಬಂಧಿತ ಮತ್ತು ಬಲಗೈ ಸಂಬಂಧಿತ ಜಾತಿಗಳ ಜೊತೆ ಸಮಾನವಾಗಿ ಹಂಚಿಕೆ ಮಾಡಲು ತೀರ್ಮಾನಿಸಿದ್ದೇವೆ.

4) ಸ್ಪೃಶ್ಯ ಜಾತಿಗಳ ಗುಂಪಿಗೆ ಜಸ್ಟೀಸ್ ನಾಗಮೋಹನ್ ದಾಸ್ ಅವರು ಶೇ.4ರಷ್ಟು ಮೀಸಲಾತಿಯನ್ನು ಶಿಫಾರಸ್ಸು ಮಾಡಿದ್ದರು. ಹಾಗೆಯೇ 59 ಜಾತಿಗಳ 5,22,099 ಜನಸಂಖ್ಯೆಯನ್ನು ಪ್ರವರ್ಗ–ಎ ಎಂದು ತೀರ್ಮಾನಿಸಿ ಶೇ.1ರಷ್ಟು ಮೀಸಲಾತಿಯನ್ನು ಶಿಫಾರಸ್ಸು ಮಾಡಿದ್ದರು. ಕೆಲವು ತಾಂತ್ರಿಕ ಕಾರಣಗಳಿಂದ ಈ ಎರಡೂ ಗುಂಪುಗಳನ್ನು ಒಟ್ಟಿಗೆ ಸೇರಿಸಿ ಶೇ.5ರಷ್ಟು ಮೀಸಲಾತಿ ನೀಡಲು ತೀರ್ಮಾನಿಸಿದ್ದೇವೆ.

5) ಜಸ್ಟೀಸ್ ನಾಗಮೋಹನ್ ದಾಸ್ ಆಯೋಗವು ಎ,ಬಿ,ಸಿ,ಡಿ,ಇ ಎಂದು ಪ್ರವರ್ಗಗಳನ್ನಾಗಿ ವಿಭಾಗೀಕರಿಸಿ

ಮಾಡಿದ್ದ ಶಿಫಾರಸ್ಸನ್ನು ಸಚಿವ ಸಂಪುಟವು ಎ,ಬಿ,ಸಿ ಎಂದು ಮೂರು ಪ್ರವರ್ಗಗಳನ್ನಾಗಿ ವಿಭಾಗೀಕರಿಸಲು ಹಾಗೂ ಎಡಗೈ ಸಂಬಂಧಿತ ಜಾತಿಗಳುಳ್ಳ ಎ ಪ್ರವರ್ಗಕ್ಕೆ – ಶೇ.6, ಬಲಗೈ ಸಂಬಂಧಿತ ಜಾರಿಗಳುಳ್ಳ ಬಿ ಪ್ರವರ್ಗಕ್ಕೆ – ಶೇ.6 ಹಾಗೂ ಸಿ ಪ್ರವರ್ಗಕ್ಕೆ – ಶೇ.5ರಷ್ಟು ಒಳಮೀಸಲಾತಿ ನೀಡಲು ತೀರ್ಮಾನಿಸಿದ್ದೇವೆ. ಪರಿಶಿಷ್ಟ ಜಾತಿಗಳಲ್ಲಿರುವ ಎಲ್ಲಾ 101 ಜಾತಿಗಳಿಗೆ ಶಿಕ್ಷಣ, ಉದ್ಯೋಗಾವಕಾಶ ಹಾಗೂ ಇನ್ನಿತರೆ ವಿಷಯಗಳಲ್ಲಿ ಅವಕಾಶಗಳನ್ನು ಒದಗಿಸುವಲ್ಲಿ ಸಮಾನತೆ ಮತ್ತು ನ್ಯಾಯ ಸಮ್ಮತತೆಯನ್ನು ಖಚಿತಪಡಿಸಿಕೊಳ್ಳುವ ದೃಷ್ಟಿಯಿಂದ ಈ ಮಾರ್ಪಾಡುಗಳನ್ನು ಮಾಡಲಾಗಿದೆ. ಈ ರೀತಿ ನಿರ್ಧಾರ ಮಾಡುವಾಗ ಸಚಿವ ಸಂಪುಟವು ಗೌರವಾನ್ವಿತ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಲ್ಲಿ ನಮೂದಿಸಲಾದ ತತ್ವಗಳನ್ನು ಗಮನದಲ್ಲಿಟ್ಟುಕೊಂಡಿದೆ.

6) ಪರಿಶಿಷ್ಟ ಜಾತಿಗಳಲ್ಲಿನ ಚಲನಶೀಲತೆಯನ್ನು ಹಾಗೂ ಲಭ್ಯವಾಗುವ ದತ್ತಾಂಶಗಳನ್ನು ಪರಿಶೀಲಿಸಿಕೊಂಡು, ಕಾಲಕಾಲಕ್ಕೆ ಈ ಜಾತಿಗಳನ್ನು ಅಧ್ಯಯನ ಮಾಡಿ ವರದಿ ನೀಡಲು ಶಾಶ್ವತ ಪರಿಶಿಷ್ಟ ಜಾತಿಗಳ ಆಯೋಗವನ್ನು ರಚಿಸಲು ತೀರ್ಮಾನಿಸಿದ್ದೇವೆ.

7) ಒಳ ಮೀಸಲಾತಿಯ ಕುರಿತಂತೆ ಆದೇಶ ಹೊರಡಿಸಿದ ಕೂಡಲೇ ನೇಮಕಾತಿ ಪ್ರಕ್ರಿಯೆಗಳನ್ನು ಪ್ರಾರಂಭಿಸಲು ಹಾಗೂ ಒಂದು ಬಾರಿಗೆ ವಯೋಮಿತಿ ಸಡಿಲಿಸಲು ತೀರ್ಮಾನಿಸಿದ್ದೇವೆ.

8) ಇದೇ ಸಂದರ್ಭದಲ್ಲಿ ಒಳ ಮೀಸಲಾತಿ ಹೋರಾಟಗಾರರ ಮೇಲಿನ ಮೊಕದ್ದಮೆಗಳನ್ನು ಹಿಂಪಡೆಯಲು ತೀರ್ಮಾನಿಸಿದ್ದೇವೆ.

9) ಸರ್ಕಾರವು ಈಗ ಕೈಗೊಂಡಿರುವ ತೀರ್ಮಾನದಲ್ಲಿ ಯಾವುದಾದರೂ ಮಾರ್ಪಾಡುಗಳ ಅಗತ್ಯತೆ ಕಂಡುಬಂದರೆ ಅವುಗಳನ್ನು ಮುಂದಿನ ರಾಷ್ಟ್ರೀಯ ಜನಗಣತಿಯಲ್ಲಿನ ಅಂಕಿ-ಅಂಶಗಳನ್ನು ಆಧರಿಸಿ ಬದಲಾವಣೆಗೆ ಒಳಪಡಿಸುವ ಷರತ್ತಿಗೆ ಬದ್ಧವಾಗಿದೆ. ನ್ಯಾಯಮೂರ್ತಿ ನಾಗಮೋಹನ್‌ದಾಸ್ ಅವರ ವರದಿಯನ್ನು ಮೇಲೆ ಪ್ರಸ್ತಾಪಿಸಿದ ಮಾರ್ಪಾಟುಗಳೊಂದಿಗೆ ಅಂಗೀಕರಿಸಿದೆ ಎಂಬ ಅಂಶಗಳನ್ನು ಸದನದ ಮುಂದೆ ಮಂಡಿಸಲು ಸರ್ಕಾರವು ಸಂತೋಷ ಪಡುತ್ತದೆ. ನಮ್ಮ ಈ ತೀರ್ಮಾನವು ಒಳ ಮೀಸಲಾತಿ ಕುರಿತ ದಶಕಗಳ ಹೋರಾಟಕ್ಕೆ ನ್ಯಾಯ ಕಲ್ಪಿಸುವಲ್ಲಿ ಯಶಸ್ವಿಯಾಗಿದೆ ಎಂದು ಭಾವಿಸಿದ್ದೇವೆ. ಅಭಿವೃದ್ಧಿಶೀಲ ರಾಜ್ಯವಾದ ಕರ್ನಾಟಕವು ಸಾಮಾಜಿಕ ನ್ಯಾಯದ ವಿಚಾರದಲ್ಲೂ ಮುಂಚೂಣಿಯಲ್ಲಿದೆ ಎಂಬುದನ್ನು ನಮ್ಮ ಸರ್ಕಾರವು ಸಾಬೀತು ಮಾಡಿದೆ.

ಮಧ್ಯಾಹ್ನ 4.35 ಗಂಟೆಗೆ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪೀಠದಲ್ಲಿ ಆಸೀನರಾದರು.

**"ಗದ್ದಲ"**

ಮಾನ್ಯ ಮುಖ್ಯಮಂತ್ರಿಯವರು ನೀಡಿರುವ ಹೇಳಿಕೆಗೆ ಸ್ಪಷ್ಟೀಕರಣ ನೀಡಬೇಕೆಂದು ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಮಾನ್ಯ ಶಾಸಕರುಗಳು ಒತ್ತಾಯಿಸಿದರು.

ಸಚಿವ ಸಂಪುಟದ ತೀರ್ಮಾನವನ್ನು ಸದನದ ಗಮನಕ್ಕೆ ತರಲಾಗಿದ್ದು, ಚರ್ಚೆ ಅಥವಾ ಸ್ಪಷ್ಟೀಕರಣಕ್ಕೆ ಅವಕಾಶವಿರುವುದಿಲ್ಲ ಎಂದು ಮಾನ್ಯ ಮುಖ್ಯಮಂತ್ರಿಯವರು ತಿಳಿಸಿದರು.

ಮಧ್ಯಾಹ್ನ 4.50 ಗಂಟೆಯಲ್ಲಿ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

ಸದನವು ಸಂಜೆ 5.10 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**ಶಾಸನ ರಚನೆ**

**6.** ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಸಿ.ಎನ್. ಮಂಜೇಗೌಡ
2. ಐವನ್ ಡಿ'ಸೋಜಾ
3. ಕಿಶೋರ್ ಕುಮಾರ್ ಪುತ್ತೂರ್
4. ಎಸ್.ವ್ಹಿ. ಸಂಕನೂರ

ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

7. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ನಗರ ಪಾಲಿಕೆಗಳ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಸಿ.ಟಿ. ರವಿ
2. ಐವನ್ ಡಿ'ಸೋಜಾ
3. ಶರವಣ ಟಿ.ಎ

ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

8. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು

ಸೂಚಿಸಿ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಕೆ.ಎಸ್. ನವೀನ್
2. ಪಿ.ಹೆಚ್. ಪೂಜಾರ್
3. ಶರವಣ ಟಿ.ಎ
4. ಕೇಶವ ಪ್ರಸಾದ್ ಎಸ್
5. ಡಾ: ಧನಂಜಯ ಸರ್ಜಿ
6. ಡಾ: ಡಿ. ತಿಮ್ಮಯ್ಯ
7. ಬಲ್ಕೀಸ್ ಬಾನು

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

9. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ವೈದ್ಯಕೀಯ ನೋಂದಣಿ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಡಾ: ಧನಂಜಯ ಸರ್ಜಿ

2. ಕೇಶವ ಪ್ರಸಾದ್ ಎಸ್

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

**10.** ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಉನ್ನತ ಶಿಕ್ಷಣ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಕೆ. ಪ್ರತಾಪ್ ಸಿಂಹ ನಾಯಕ್ ಕೆ

2. ಐವನ್ ಡಿ'ಸೋಜಾ

3. ಎಂ. ನಾಗರಾಜು

4. ಡಾ: ತಳವಾರ್ ಸಾಬಣ್ಣ

5. ಕೆ.ಎಸ್. ನವೀನ್

ಮಾನ್ಯ ಉನ್ನತ ಶಿಕ್ಷಣ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

11. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ವೇದಿಕೆ ಆಧಾರಿತ ಗಿಗ್ ಕಾರ್ಮಿಕರ (ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಕಾರ್ಮಿಕ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಐವನ್ ಡಿ'ಸೋಜಾ
2. ಅಡಗೂರ್ ಹೆಚ್. ವಿಶ್ವನಾಥ್
3. ಸಿ.ಟಿ. ರವಿ
4. ಕೆ.ಎಸ್. ನವೀನ್
5. ಡಿ.ಎಸ್. ಅರುಣ್
6. ಡಾ: ತಳವಾರ್ ಸಾಬಣ್ಣ
7. ಪ್ರತಾಪ್ ಸಿಂಹ ನಾಯಕ್ ಕೆ
8. ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು
9. ಎಸ್.ವ್ಹಿ. ಸಂಕನೂರ
10. ಶರವಣ ಟಿ.ಎ.

ಮಾನ್ಯ ಕಾರ್ಮಿಕ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

**12.** ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಬಾಲ್ಯ ವಿವಾಹ ನಿಷೇಧ(ಕರ್ನಾಟಕ ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಹೇಮಲತಾ ನಾಯಕ
2. ಶರವಣ ಟಿ.ಎ.
3. ಭಾರತಿ ಶೆಟ್ಟಿ
4. ಪಿ.ಹೆಚ್. ಪೂಜಾರ್
5. ಡಾ: ಉಮಾಶ್ರೀ

ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

13. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ "ಕರ್ನಾಟಕ ದೇವದಾಸಿ (ಪ್ರತಿಬಂಧಕ, ನಿಷೇಧ, ಪರಿಹಾರ ಮತ್ತು ಪುನರ್ವಸತಿ) ವಿಧೇಯಕ"ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಭಾರತಿ ಶೆಟ್ಟಿ
2. ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್)
3. ಡಾ: ಉಮಾಶ್ರೀ
4. ಹೇಮಲತಾ ನಾಯಕ

ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

14. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ "ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು

ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಎಸ್. ರವಿ
2. ಎ. ವಸಂತ ಕುಮಾರ್
3. ಪ್ರತಾಪ್ ಸಿಂಹ ನಾಯಕ್ ಕೆ
4. ಕೇಶವ ಪ್ರಸಾದ್ ಎಸ್
5. ನಿರಾಣಿ ಹಣಮಂತ್ ರುದ್ರಪ್ಪ
6. ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು
7. ಎಂ. ನಾಗರಾಜು
8. ಐವನ್ ಡಿ'ಸೋಜಾ
9. ಛಲವಾದಿ ಟಿ. ನಾರಾಯಣಸ್ವಾಮಿ

ಮಾನ್ಯ ಶಾಸಕರಾದ ಶ್ರೀ ನಸೀರ್ ಅಹ್ಮದ್ ಅವರು ಪ್ರಧಾನ ಮಂತ್ರಿಯ ಬಗ್ಗೆ ಆಡಿದ ಮಾತಿನ ಬಗ್ಗೆ ಕ್ಷಮಾಪಣೆ ಕೋರಬೇಕೆಂದು ಮಾನ್ಯ ವಿರೋಧ ಪಕ್ಷದ ಶಾಸಕರುಗಳು ಸದನದ ಭಾವಿಯಲ್ಲಿ ಧರಣಿ ನಿರತರಾದರು.

**"ಗದಲ"**

ಮಾನ್ಯ ಶಾಸಕರಾದ ಶ್ರೀ ನಸೀರ್ ಅಹ್ಮದ್ ಕ್ಷಮೆಯಾಚಿಸಿದ ತರುವಾಯ ವಿರೋಧ ಪಕ್ಷದ ಮಾನ್ಯ ಶಾಸಕರುಗಳು ಧರಣಿ ಕೈಬಿಟ್ಟು ತಮ್ಮ ತಮ್ಮ ಆಸನಗಳಿಗೆ ತೆರಳಿದರು.

ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

ದಿನಾಂಕ:20.08.2025ರ ಸಮೂಹ 7ನೇ ಪಟ್ಟಿಯ ಚುಕ್ಕೆ ಗುರುತಿನ 15 ಪ್ರಶೆಗಳು ಹಾಗೂ ಲಿಖಿತ ಮೂಲಕ ಉತ್ತರಿಸುವ ಒಟ್ಟು 140 ಪ್ರಶ್ನೆಗಳ ಪೈಕಿ 82 ಪ್ರಶ್ನೆಗಳಿಗೆ ಮಾನ್ಯ ಸಭಾನಾಯಕರು ಉತ್ತರಗಳನ್ನು ಮಂಡಿಸಿದರು.

ಸದನವನ್ನು ಬೆಳಗ್ಗೆ 12.01 ಗಂಟೆಯಲ್ಲಿ ಮುಂದೂಡಿ ದಿನಾಂಕ: 21.08.2025ರಂದು ಬೆಳಗ್ಗೆ 10.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**

**ಕಾರ್ಯದರ್ಶಿ**

****

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತಾರನೆಯ ಅಧಿವೇಶನ

ಲಘು ಪ್ರಕಟಣೆ ಭಾಗ–1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಗುರುವಾರ, ದಿನಾಂಕ:21.08.2025**

**(08)**

ಸದನವು ಬೆಳಗ್ಗೆ: 10.30 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಸಭೆಯ ಮುಂದಿಡಲಾಗುವ ಕಾಗದ ಪತ್ರ

ಮಾನ್ಯ ಮುಖ್ಯಮಂತ್ರಿಯವರ ಪರವಾಗಿ ಮಾನ್ಯ ಸಭಾನಾಯಕರು ಮಾರ್ಚ್ 2023ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ವರದಿ (2025ರ ವರದಿ ಸಂಖ್ಯೆ–6)ಯನ್ನು ಸಭೆಯ ಮುಂದೆ ಮಂಡಿಸಿದರು.

## 2. ವಿತ್ತೀಯ ಕಾರ್ಯಕಲಾಪ

2024–25ನೇ ಸಾಲಿನ ಪೂರಕ ಅಂದಾಜುಗಳ ಮೊದಲನೇ ಕಂತನ್ನು ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಮಾನ್ಯ ಸಭಾನಾಯಕರು ಮಂಡಿಸಿದರು.

## 3. ಚುನಾವಣಾ ಪ್ರಸ್ತಾವ

2025–26ನೇ ಸಾಲಿನ ವಿಧಾನಮಂಡಲದ ಜಂಟಿ ಸಮಿತಿಗಳಿಗೆ ಹಾಗೂ ವಿಧಾನ ಪರಿಷತ್ತಿನ ಸ್ಥಾಯಿ ಸಮಿತಿಗಳಿಗೆ ವಿಧಾನ ಪರಿಷತ್ತಿನ ಸದಸ್ಯರುಗಳನ್ನು ಚುನಾಯಿಸುವ ಬದಲು ನಾಮನಿರ್ದೇಶಿಸಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಬಗ್ಗೆ ಮಾನ್ಯ ಸಭಾನಾಯಕರು ಪ್ರಸ್ತಾವ ಮಂಡಿಸಿದರು.

ಪ್ರಸ್ತಾವವು ಅಂಗೀಕರಿಸಲ್ಪಟ್ಟಿತು.

**4. ಶಾಸನ ರಚನೆ**

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

1. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಮತ್ತು ನಿರ್ವಹಣೆಯ ವಿನಿಯಮನ ಹಾಗೂ ನಿಯಂತ್ರಣ) (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಸಭಾನಾಯಕರು ಹಾಗೂ ಮಾನ್ಯ ಸಣ್ಣ ನೀರಾವರಿ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಐವನ್ ಡಿ'ಸೋಜಾ
2. ಪಿ.ಹೆಚ್. ಪೂಜಾರ್
3. ಗೋವಿಂದರಾಜು
4. ಶರವಣ ಟಿ.ಎ.
5. ಡಿ.ಎಸ್. ಅರುಣ್
6. ಸಿ.ಎನ್. ಮಂಜೇಗೌಡ
7. ಭಾರತಿ ಶೆಟ್ಟಿ

8. ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್)

9. ಚಿದಾನಂದ್ ಎಂ. ಗೌಡ

10. ಹೆಚ್.ಎಸ್. ಗೋಪಿನಾಥ್

11. ಡಾ: ಉಮಾಶ್ರೀ

12. ಬಲ್ಕೀಸ್ ಬಾನು

13. ಹೇಮಲತಾ ನಾಯಕ

14. ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು

ಮಾನ್ಯ ಸಣ್ಣ ನೀರಾವರಿ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

2. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಗ್ರೇಟರ್ ಬೆಂಗಳೂರು ಆಡಳಿತ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಸಭಾನಾಯಕರು ಹಾಗೂ ಮಾನ್ಯ ಉಪ ಮುಖ್ಯಮಂತ್ರಿಯವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಗೋವಿಂದರಾಜು

2.ಶರವಣ ಟಿ.ಎ.

3.ಹೆಚ್.ಎಸ್. ಗೋಪಿನಾಥ್

ಮಾನ್ಯ ಉಪ ಮುಖ್ಯಮಂತ್ರಿಯವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

ಮಾನ್ಯ ಶಾಸಕರಾದ ಶ್ರೀ ಕೆ.ಎಸ್. ನವೀನ್ ಅವರು ಚಿತ್ರದುರ್ಗದಲ್ಲಿ ವಿದ್ಯಾರ್ಥಿಯನ್ನು ಹೆದ್ದಾರಿಯಲ್ಲಿ ಸುಟ್ಟು ಹಾಕಿರುವ ಬಗ್ಗೆ ಪ್ರಸ್ತಾಪಿಸಿದರು.

ಮಾನ್ಯ ಗೃಹ ಸಚಿವರು ವಿವರವಾದ ಉತ್ತರವನ್ನು ನಾಳೆ ಒದಗಿಸುವುದಾಗಿ ತಿಳಿಸಿದರು.

3. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ಅಗ್ನಿಶಾಮಕ ದಳ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಗೃಹ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಐವನ್ ಡಿ'ಸೋಜಾ
2. ಶರವಣ ಟಿ.ಎ.
3. ಗೋವಿಂದರಾಜು

4. ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು

5. ಡಿ.ಎಸ್. ಅರುಣ್

6. ಸಿ.ಎನ್. ಮಂಜೇಗೌಡ

7. ಕೆ.ಎಸ್. ನವೀನ್,

8. ಕೇಶವ ಪ್ರಸಾದ್ ಎಸ್.

9. ಕಿಶೋರ್ ಕುಮಾರ್ ಪುತ್ತೂರ್

10. ಕೆ. ವಿವೇಕಾನಂದ

ಮಾನ್ಯ ಗೃಹ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

**4.** ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ಬಂದರುಗಳ (ಸರಕನ್ನು ಹಡಗಿನಿಂದ ಇಳಿಸುವ ಮತ್ತು ಹಡಗಿಗೆ ತುಂಬುವ ಫೀಜುಗಳು) ತಿದ್ದುಪಡಿ ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಮೀನುಗಾರಿಕೆ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

**5.** ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ಮುನ್ಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ)**

**ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಭಾಗವಹಿಸಿದರು.

ಶ್ರೀಯುತರುಗಳಾದ:

1. ಕೇಶವ ಪ್ರಸಾದ್ ಎಸ್

2.ಡಾ: ಧನಂಜಯ ಸರ್ಜಿ

3.ಶರವಣ ಟಿ.ಎ.

4.ನಸೀರ್ ಅಹ್ಮದ್

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

## 5. ಪ್ರಕಟಣೆ

ದಿನಾಂಕ:20.08.2025ರಂದು ನಡೆದ ಉಪವೇಶನದಲ್ಲಿ ರಾತ್ರಿ 12.00 ಗಂಟೆವರೆಗೆ ವಿಧೇಯಕದ ಮೇಲೆ ನಡೆದ ಸುದೀರ್ಘ ಚರ್ಚೆಗೆ ಮಾನ್ಯ ಸಭಾಪತಿಯವರು ಅಭಿನಂದನೆಯನ್ನು ಸಲ್ಲಿಸಿದರು.

ನಮ್ಮ ಕರ್ನಾಟಕ ರಾಜ್ಯ ಬದ್ಧತೆಗೆ ಹೆಸರು ಮಾಡಿರುವುದು ನಮ್ಮೆಲ್ಲರ ಹೆಮ್ಮೆ, ಇದರಿಂದಾಗಿಯೇ ನಮ್ಮ ರಾಜ್ಯ ಯಾವತ್ತಿಗೂ ಇಡೀ ದೇಶಕ್ಕೆ ಮಾದರಿಯಾಗಿ ನಿಂತಿರುವುದೂ ಸಹ ಸರ್ವವೇದ್ಯವೇ ಆಗಿರುತ್ತದೆ. ಈ ಹಿನ್ನಲೆಯಲ್ಲಿ ದಿನಾಂಕ:20.08.2025ರಂದು ಸದನವು ರಾತ್ರಿ 12.00 ಗಂಟೆಯವರೆಗೂ ಮಹತ್ತರವಾದ ಚರ್ಚೆಗಳನ್ನು ನಡೆಸಿ ಇಡೀ ರಾಷ್ಟ್ರವೇ ನಮ್ಮ ರಾಜ್ಯವನ್ನು ತಿರುಗಿ ನೋಡುವಂತೆ ಮಾಡಿದೆ. ಇದು ನಮ್ಮೆಲ್ಲರ ಹಿರಿಮೆಗೆ ಮತ್ತೊಂದು ಗರಿಯನ್ನು ಮೂಡಿಸಿದೆ. ಹೀಗೆ ಸರಿ ರಾತ್ರಿಯಾದರೂ ರಾಜ್ಯದ ಹಿತಾಸಕ್ತಿಯನ್ನು

ಮನದಲ್ಲಿಟ್ಟುಕೊಂಡು ಗುಣಮಟ್ಟದ ಚರ್ಚೆಗಳನ್ನು ನಡೆಸಿ ವಿಧೇಯಕಗಳನ್ನು ಎಲ್ಲಾ ಆಯಾಮಗಳಲ್ಲಿ ಪರಾಮರ್ಶಿಸಿ ಸದನದ ಹಿರಿಮೆಯನ್ನು ಹೆಚ್ಚಿಸಲು ಸಹಕಾರ ನೀಡಿರುವ ಸನ್ಮಾನ್ಯ ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳು, ಸಭಾನಾಯಕರು, ಸಚಿವರುಗಳು, ವಿರೋಧ ಪಕ್ಷದ ನಾಯಕರು, ಸರ್ಕಾರಿ ಮುಖ್ಯ ಸಚೇತಕರು, ವಿರೋಧ ಪಕ್ಷದ ಮುಖ್ಯ ಸಚೇತಕರು, ಶಾಸಕರುಗಳು ಮತ್ತು ಸಿಬ್ಬಂದಿ ವರ್ಗದವರಿಗೆ ನಾನು ಕೃತಜ್ಞತೆಗಳನ್ನು ಅರ್ಪಿಸುತ್ತೇನೆ.

ನಮ್ಮ ಅವಧಿಯಲ್ಲಿ ಈ ರೀತಿಯ ಗುಣಮಟ್ಟದ ಚರ್ಚೆಗಳು ನಡೆಯುತ್ತಿರುವುದು ಸಂತೋಷದಾಯಕವಾಗಿದ್ದು, ದೇಶದಲ್ಲಿಯೇ ವಿಧಾನ ಪರಿಷತ್ತನ್ನು ಒಂದು ಮಾದರಿ ಸದನವನ್ನಾಗಿ ರೂಪಿಸುವುದಕ್ಕೆ ತಮ್ಮೆಲ್ಲರ ಸಹಕಾರ ಸದಾಕಾಲ ಹೀಗೆಯೇ ಮುಂದುವರೆಯಬೇಕೆಂದು ನನ್ನ ಅಭಿಲಾಷೆ. ತಮ್ಮೆಲ್ಲರಿಗೆ ಮತ್ತೊಮ್ಮೆ ನನ್ನ ವಂದನೆಗಳು.

## ಶಾಸನ ರಚನೆ

## <u>ವಿಧೇಯಕಗಳನ್ನು ಹಿಂಪಡೆಯುವುದು</u>

1. ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ **“ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ”**ವನ್ನು ಮಾನ್ಯ ಮುಖ್ಯಮಂತ್ರಿಯವರ ಪರವಾಗಿ ಮಾನ್ಯ ಸಭಾನಾಯಕರು ಹಿಂಪಡೆಯುವ ಪ್ರಸ್ತಾವನೆಯನ್ನು ಮಂಡಿಸಿದರು.

   ವಿಧೇಯಕವನ್ನು ಹಿಂಪಡೆಯಲಾಯಿತು.

2. ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ **“ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ”**ವನ್ನು ಮಾನ್ಯ

ಮುಖ್ಯಮಂತ್ರಿಯವರ ಪರವಾಗಿ ಮಾನ್ಯ ಸಭಾನಾಯಕರು ಹಿಂಪಡೆಯುವ ಪ್ರಸ್ತಾವನೆಯನ್ನು ಮಂಡಿಸಿದರು.

ವಿಧೇಯಕವನ್ನು ಹಿಂಪಡೆಯಲಾಯಿತು.

3. ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ **"ನೋಂದಣಿ (ಕರ್ನಾಟಕ ತಿದ್ದುಪಡಿ) ವಿಧೇಯಕ"**ವನ್ನು ಮಾನ್ಯ ಮುಖ್ಯಮಂತ್ರಿಯವರ ಪರವಾಗಿ ಮಾನ್ಯ ಸಭಾನಾಯಕರು ಹಿಂಪಡೆಯುವ ಪ್ರಸ್ತಾವನೆಯನ್ನು ಮಂಡಿಸಿದರು.

ವಿಧೇಯಕವನ್ನು ಹಿಂಪಡೆಯಲಾಯಿತು.

## ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

6. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರ ಪರವಾಗಿ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ವಿವರಣೆ ನೀಡಿದರು.

ಮಾನ್ಯ ಶಾಸಕರಾದ ಶ್ರೀ ಎಸ್.ವ್ಹಿ. ಸಂಕನೂರ ಅವರು ಚರ್ಚೆಯಲ್ಲಿ ಭಾಗವಹಿಸಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

7. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ಸರ್ಕಾರಿ ವ್ಯಾಜ್ಯ ನಿರ್ವಹಣೆ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ವಿವರಣೆ ನೀಡಿದರು.

ಮಧ್ಯಾಹ್ನ 1.35 ಗಂಟೆಯಲ್ಲಿ **ಶ್ರೀ ಮಂಜುನಾಥ್ ಭಂಡಾರಿ** ಅವರು ಸಭಾಪತಿಯವರ ಪೀಠದಲ್ಲಿ ಆಸೀನರಾದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಪಿ.ಹೆಚ್. ಪೂಜಾರ್

2.ಐವನ್ ಡಿ'ಸೋಜಾ

3.ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು

4.ಪ್ರತಾಪ್ ಸಿಂಹ ನಾಯಕ್ ಕೆ.

5.ನಿರಾಣಿ ಹಣಮಂತ್ ರುದ್ರಪ್ಪ

6.ಶರವಣ ಟಿ.ಎ.

7.ಸಿ.ಎನ್. ಮಂಜೇಗೌಡ

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

ಮಧ್ಯಾಹ್ನ 2.25 ಗಂಟೆಗೆ ಸದನವನ್ನು ಮುಂದೂಡಿ ಮಧ್ಯಾಹ್ನ 3.30 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರ ಪೀಠದಲ್ಲಿ ಆಸೀನರಾಗಿದ್ದ **ಶ್ರೀ ಮಂಜುನಾಥ್ ಭಂಡಾರಿ** ಅವರು ಪ್ರಕಟಿಸಿದರು.

ಸದನವು ಮಧ್ಯಾಹ್ನ 4.15 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

**ಪ್ರಕಟಣೆ**

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ **104ನೇ ನಿಯಮದ** ಮೇರೆಗೆ ವಿಧಾನ ಸಭೆಯು **"ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ, 2025"ನ್ನು** ಪುನರ್ ಪರ್ಯಾಲೋಚಿಸಿ ಅಂಗೀಕರಿಸಿರುತೆಂದು, ಹಾಗೂ ಈ ಕೆಳಕಂಡ ವಿಧೇಯಕಗಳನ್ನು ಅಂಗೀಕರಿಸಿರುತ್ತದೆಂದು ಹಾಗೂ ಸದರಿ ವಿಧೇಯಕಗಳಿಗೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

1. ಬಸವನ ಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025
2. ಕರ್ನಾಟಕ ಸಾಂಪ್ರದಾಯಿಕ ಅಲೆಮಾರಿ ಕುರಿಗಾಹಿಗಳ (ಕ್ಷೇಮಾಭಿವೃದ್ಧಿ ಕ್ರಮಗಳು ಮತ್ತು ದೌರ್ಜನ್ಯಗಳ ವಿರುದ್ಧ ರಕ್ಷಣೆ) ವಿಧೇಯಕ, 2025
3. ಕರ್ನಾಟಕ ಲಿಫ್ಟ್‌ಗಳ, ಎಸ್ಕಲೇಟರ್‌ಗಳ ಮತ್ತು ಪ್ಯಾಸೆಂಜರ್ ಕನ್ವೇಯರ್‌ಗಳ (ತಿದ್ದುಪಡಿ) ವಿಧೇಯಕ, 2025

4. ಕರ್ನಾಟಕ ಅಕ್ರಮ ಗಣಿಗಾರಿಕೆ ಮತ್ತು ಅಪರಾಧದ ಉತ್ಪತ್ತಿಗಳಿಂದಾದ ಸ್ವತ್ತನ್ನು ವಶಪಡಿಸಿಕೊಳ್ಳುವುಕ್ಕಾಗಿ ಮತ್ತು ಜಪ್ತಿಗಾಗಿ ವಸೂಲಾತಿ ಆಯುಕ್ತರ ನೇಮಕಾತಿ ವಿಧೇಯಕ, 2025

## 6. ವರದಿಯನ್ನೊಪ್ಪಿಸುವುದು

**ಡಾ: ಡಿ ತಿಮ್ಮಯ್ಯ (ಸದಸ್ಯರು, ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ)** ಅವರು ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 5ನೇ ವರದಿಯನ್ನು ಒಪ್ಪಿಸಿದರು.

## 7. ಪ್ರಶ್ನೋತ್ತರ

ದಿನಾಂಕ:21.08.2025ರಂದು ಸದನದಲ್ಲಿ ಉತ್ತರಿಸುವ ಸಮೂಹ–IVರ 8ನೇ ಪಟ್ಟಿಯ ಈ ಕೆಳಕಂಡ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

1. 106(1218)
2. 107(1139)
3. 108(1234+1292)
4. 109(1239)
5. 110(1180)
6. 111(1403)
7. 112(1150)
8. 113(1117)

9. 114(1255) ವರ್ಗಾವಣೆ

10. 115(1141) ಕಾಲಾವಕಾಶ

11. 116(1125)

12. 117(1236)

13. 118(1178) ಗೈರು ಹಾಜರಿ

14. 119(1176)

15. 120(1192)

**ದಿನಾಂಕ:11.08.2025ರ 1ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆ**

1. 13(133) ಕಾಲಾವಕಾಶ

**ದಿನಾಂಕ:14.08.2025ರ 4ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆಗಳು**

1. 54(558) ಕಾಲಾವಕಾಶ

2.56(493)

3.60(522)

ದಿನಾಂಕ:21.08.2025ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–IVರ 8ನೇ ಪಟ್ಟಿಯ ಒಟ್ಟು 142 ಪ್ರಶ್ನೆಗಳ ಪೈಕಿ 104 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

**ಪ್ರಕಟಣೆ**

**ಮಾನ್ಯ ಸಭಾಧ್ಯಕ್ಷರಿಂದ ಬಂದಿರುವ ಸಂದೇಶವನ್ನು ಮಾನ್ಯ ಸಭಾಪತಿಯವರು ಪ್ರಕಟಿಸಿದರು.**

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ 104ನೇ ನಿಯಮದ ಮೇರೆಗೆ ವಿಧಾನ ಸಭೆಯು 2025ನೇ ಸಾಲಿನ "ಕರ್ನಾಟಕ ಧನವಿನಿಯೋಗ(ಸಂಖ್ಯೆ:3) ವಿಧೇಯಕವನ್ನು ಅಂಗೀಕರಿಸಿರುತ್ತದೆಂದು ಮತ್ತು ಸದರಿ ವಿಧೇಯಕಕ್ಕೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

**ಸಭೆಯ ಮುಂದಿಡಲಾಗುವ ಕಾಗದ ಪತ್ರ**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಕರ್ನಾಟಕ ಧನವಿನಿಯೋಗ(ಸಂಖ್ಯೆ:3) ವಿಧೇಯಕವನ್ನು ಕಾರ್ಯದರ್ಶಿಯವರು ಮಂಡಿಸಿದರು.

**8. ಅಧಿಕೃತ ನಿರ್ಣಯಗಳು**

ಅ. **ಶ್ರೀ ಎಚ್.ಕೆ. ಪಾಟೀಲ್ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು) ಅವರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.**

"ಸುಸ್ಥಿರ ಶಾಂತಿಯು ಅಂತರರಾಷ್ಟ್ರೀಯ ಸಮುದಾಯದ ಜವಾಬ್ದಾರಿ ಮಾತ್ರವಲ್ಲದೆ, ಸ್ಥಳೀಯ ಸಮುದಾಯಗಳು ಮತ್ತು ಪಾಲುದಾರರು ಸಾಮೂಹಿಕವಾಗಿ ನಿರ್ಮಿಸಬೇಕಾದ ಹಂಚಿಕೆಯ ಬಾಧ್ಯತೆಯಾಗಿರುತ್ತದೆ. ದಿವ್ಯತೆಯ ಸಂಸ್ಕೃತಿ, ವಿಶ್ವ ಶಾಂತಿ, ಬೆಳಕಿನ ಮರುಸ್ಥಾಪನೆಯಿಂದ (HWPL) ಮಾರ್ಚ್ 14, 2016ರಂದು ಉದ್ಘೋಷಿಸಲಾದ ಶಾಂತಿ ಮತ್ತು ಯುದ್ಧ ನಿಲುಗಡೆ ಘೋಷಣೆಯು (DPCW), ಸಂಘರ್ಷ ತಡೆಗಟ್ಟುವಿಕೆ ಮತ್ತು ಪರಿಹಾರ, ನಿಶ್ಯಸ್ತ್ರೀಕರಣ ಮತ್ತು ಶಾಂತ ಸಂಸ್ಕೃತಿಯ ಪ್ರಸರಣಕ್ಕಾಗಿ ನಿರ್ದಿಷ್ಟ ಉಪಬಂಧಗಳನ್ನು ಒಳಗೊಂಡ ಅಂತರರಾಷ್ಟ್ರೀಯ ಸಮಗ್ರ ಕಾನೂನಾತ್ಮಕ ಚೌಕಟ್ಟಾಗಿ ಕಾರ್ಯನಿರ್ವಹಿಸುತ್ತಿದೆ.

ಶಾಂತಿ ಮತ್ತು ಯುದ್ಧ ನಿಲುಗಡೆ ಘೋಷಣೆಯು (DPCW), ಅಂತರರಾಷ್ಟ್ರೀಯ ಮಾನವ ಹಕ್ಕುಗಳ ಮಾನದಂಡಗಳು ಮತ್ತು

ವಿಶ್ವಸಂಸ್ಥೆ ಸನ್ನದಿನ ತತ್ವಗಳನ್ನು ಆಧರಿಸಿದೆ ಮತ್ತು ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಭವಿಷ್ಯದ ಒಪ್ಪಂದಗಳು ಅಥವಾ ನಿರ್ಣಯಗಳಿಗೆ ಕಾರ್ಯಸಾಧ್ಯವಾಗಬಲ್ಲ ಕರಡು ಘೋಷಣೆಯಾಗಿ ಕಾರ್ಯನಿರ್ವಹಿಸುತ್ತಿದೆ.

ಶಾಂತಿ ತತ್ವಗಳ ಅನುಷ್ಠಾನವನ್ನು ಸ್ವಯಂಪ್ರೇರಣೆಯಿಂದ ತಳಮಟ್ಟದಲ್ಲಿಯೇ ಮುನ್ನಡೆಸುತ್ತಿರುವ ಸರ್ಕಾರೇತರ ಸಂಸ್ಥೆಗಳು, ಶೈಕ್ಷಣಿಕ ಸಂಸ್ಥೆಗಳು, ಯುವ ಸಂಘಟನೆಗಳು ಮತ್ತು ಧಾರ್ಮಿಕ ಸಮುದಾಯಗಳನ್ನು ಒಳಗೊಂಡಂತೆ ಬೆಳೆಯುತ್ತಿರುವ ಭಾರತೀಯ ನಾಗರಿಕ ಸಮಾಜದ ಪಾತ್ರವು ಸ್ಮರಣೀಯವಾಗಿದೆ.

ದಿವ್ಯತೆಯ ಸಂಸ್ಕೃತಿ, ವಿಶ್ವಶಾಂತಿ, ಬೆಳಕಿನ ಮರುಸ್ಥಾಪನೆಯ (HWPL) ಶಾಂತಿ ಉಪಕ್ರಮಗಳಾದ ಯುವ ನಾಯಕತ್ವ ಅಭಿವೃದ್ಧಿ, ಪ್ರತಿಬಂಧಕ ಶಾಂತಿ ಶಿಕ್ಷಣ ಮತ್ತು ನಾಗರಿಕ ಮುಂದಾಳತ್ವದ ಪರಿಸರ ಅಭಿಯಾನಗಳು ಪ್ರತಿನಿಧಿಸುವ ಸ್ವಯಂಪ್ರೇರಿತ ಪಾಲ್ಗೊಳ್ಳುವಿಕೆ ಮತ್ತು ಸಾರ್ವಜನಿಕ ಹಿತದ ಆಧಾರದ ಮೇಲಿನ ಸಮುದಾಯ ಕೇಂದ್ರಿತ ಶಾಂತಿ ಮಾದರಿಯನ್ನು ಪರಿಗಣಿಸಬೇಕಾಗಿದೆ.

ಶಾಂತಿ ಮತ್ತು ಯುದ್ಧ ನಿಲುಗಡೆ ಘೋಷಣೆಯು (DPCW) ನಮ್ಮ ಕಾಲಘಟ್ಟದ ಶಾಂತಿಯುತ ಸಹಬಾಳ್ವೆಗಾಗಿನ ಘೋಷಣೆ ಮಾತ್ರವಲ್ಲದೆ, ಭವಿಷ್ಯದ ಪೀಳಿಗೆಗಾಗಿ ದೀರ್ಘಾವಧಿಯ ಕಾನೂನಾತ್ಮಕ ಮಾನದಂಡ ಮತ್ತು ಸಾಂಸ್ಥಿಕ ನೀಲನಕ್ಷೆಯಾಗಿ, ಶಾಂತಿಯನ್ನು ಶಾಶ್ವತ ಪರಂಪರೆಯಾಗಿ ಸಮರ್ಪಿಸುವುದನ್ನು ದೃಢೀಕರಿಸಬೇಕಾಗಿದೆ.

**ಆದ್ದರಿಂದ, ಈ ಸದನವು ಸರ್ವಾನುಮತದಿಂದ ಈ ಮೂಲಕ ಕೆಳಗಿನಂತೆ ನಿರ್ಣಯಿಸುತ್ತದೆ:-**

1) ಶಾಂತಿ ಮತ್ತು ಯುದ್ಧ ನಿಲುಗಡೆ ಘೋಷಣೆಯಲ್ಲಿ (DPCW) ಪ್ರತಿಪಾದಿಸಲಾದ ತತ್ವಗಳು ಮತ್ತು ಲೇಖನಗಳಿಗೆ ಸಂಪೂರ್ಣ ಬೆಂಬಲವನ್ನು ಘೋಷಿಸುತ್ತದೆ.

2) ಶಾಂತಿ ಶಿಕ್ಷಣ, ಸಮುದಾಯ ಆಧಾರಿತ ಪರಿಸರ ಉಪಕ್ರಮಗಳು ಮತ್ತು ಸಾಂಸ್ಕೃತಿಕ ವೈವಿಧ್ಯತೆಯ ಜಾಗೃತಿ ಅಭಿಯಾನಗಳನ್ನು ಒಳಗೊಂಡ ಕಾರ್ಯಕ್ರಮಗಳನ್ನು ಜಂಟಿಯಾಗಿ ಅಭಿವೃದ್ಧಿಪಡಿಸಲು ಮತ್ತು ಕಾರ್ಯಗತಗೊಳಿಸಲು ದಿವ್ಯತೆಯ ಸಂಸ್ಕೃತಿ, ವಿಶ್ವಶಾಂತಿ, ಬೆಳಕಿನ ಮರುಸ್ಥಾಪನೆಯೊಂದಿಗೆ (HWPL) ಸಹಭಾಗಿ ಹಂದರವನ್ನು (framework) ಸ್ಥಾಪಿಸಲು ಬದ್ಧವಾಗಿರುತ್ತದೆ.

3) ಶಾಂತಿ ಮತ್ತು ಯುದ್ಧ ನಿಲುಗಡೆ ಘೋಷಣೆಯಲ್ಲಿನ (DPCW) ಶಾಸನಾತ್ಮಕ ಚರ್ಚೆಗಳನ್ನು ಮತ್ತು ವ್ಯಾಪಕ ಪ್ರಸರಣವನ್ನು ಉತ್ತೇಜಿಸುವುದಕ್ಕಾಗಿ, ಈ ನಿರ್ಣಯವನ್ನು ಕೇಂದ್ರ ಸರ್ಕಾರ ಮತ್ತು ಇತರ ರಾಜ್ಯ ಸರ್ಕಾರಗಳೊಂದಿಗೆ ಹಂಚಿಕೊಳ್ಳಲು ಶಿಫಾರಸ್ಸು ಮಾಡುತ್ತದೆ.

4) ಶಾಂತಿ ಮತ್ತು ಯುದ್ಧ ನಿಲುಗಡೆ ಘೋಷಣೆಯ (DPCW) ಆಧಾರದ ಮೇಲೆ "ಸುಸ್ಥಿರ ಶಾಂತಿ ಗ್ರಾಮಗಳು" ಅಥವಾ "ಶಾಂತಿ ನಗರಗಳು" ಎಂಬ ಪದನಾಮದ ಪ್ರಾಯೋಗಿಕ ಅನುಷ್ಠಾನವನ್ನು ಬೆಂಬಲಿಸುತ್ತದೆ ಮತ್ತು ಈ ಪ್ರಯತ್ನಗಳನ್ನು ವಿಸ್ತರಿಸುವುದಕ್ಕಾಗಿ ಅಂತರ-ನಗರ ಸಹಕಾರವನ್ನು ಪ್ರೋತ್ಸಾಹಿಸುತ್ತದೆ.

5) ಶಾಂತಿ ಮತ್ತು ಯುದ್ಧ ನಿಲುಗಡೆ ಘೋಷಣೆಯಲ್ಲಿನ (DPCW) ಅನುಚ್ಛೇದ 10ರಲ್ಲಿ ವಿವರಿಸಿರುವ ತತ್ವಗಳನ್ನು ಒಳಗೊಂಡಂತೆ ನಾಗರಿಕ ಪಾಲ್ಗೊಳ್ಳುವಿಕೆ, ಶಾಂತಿ ಶಿಕ್ಷಣ ಮತ್ತು ಸಾಂಸ್ಕೃತಿಕ ಪ್ರಸರಣವನ್ನು ಸ್ಥಳೀಯ ಸರ್ಕಾರದ

ಶಾಂತಿ ನೀತಿಗಳು ಮತ್ತು ಯೋಜನಾ ಚೌಕಟ್ಟುಗಳಲ್ಲಿ ಸಂಯೋಜಿಸಲಾಗುತ್ತಿದೆ ಎಂಬುದನ್ನು ಖಾತ್ರಿಪಡಿಸುತ್ತದೆ.

ಈ ನಿರ್ಣಯವು ರಾಷ್ಟ್ರೀಯ ಮಟ್ಟದಲ್ಲಿ ವೈಯಕ್ತಿಕ ನಿರ್ಣಯಗಳ ಸಂಭಾವ್ಯ ಸಲ್ಲಿಕೆಯನ್ನು ಬೆಂಬಲಿಸಲು ಒಂದು ಮೂಲಭೂತ ದಸ್ತಾವೇಜಿನಂತೆ ಕಾರ್ಯನಿರ್ವಹಿಸುತ್ತದೆ ಹಾಗೂ ಇದನ್ನು ದಾಖಲಿಸುವುದಕ್ಕಾಗಿ ಮತ್ತು ಹೆಚ್ಚಿನ ತೊಡಗಿಸಿಕೊಳ್ಳುವಿಕೆಗಾಗಿ ಸಂಬಂಧಪಟ್ಟ ಮಂತ್ರಾಲಯಗಳು ಮತ್ತು ವಿಶ್ವಸಂಸ್ಥೆಯ ಮಾಹಿತಿ ಕೇಂದ್ರಕ್ಕೆ ಕಳುಹಿಸಲಾಗುವುದೆಂದು ಈ ಮೂಲಕ ಘೋಷಿಸುತ್ತದೆ."

ನಿರ್ಣಯವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

ಆ. **ಶ್ರೀ ದಿನೇಶ್ ಗುಂಡೂರಾವ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) ಅವರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.**

"ಭಾರತ ಸಂವಿಧಾನದ 252ನೇ ಅನುಚ್ಛೇದದ ಖಂಡ(1)ರಡಿ ಮತ್ತು ಸದರಿ ಅಧಿನಿಯಮದಲ್ಲಿನ 1ನೇ ಪ್ರಕರಣದ (3)ನೇ ಉಪ ಪ್ರಕರಣದಡಿಯಲ್ಲಿ ಅಗತ್ಯಪಡಿಸಿದಂತೆ, ಮಾನವ ಅಂಗಾಂಗ ಕಸಿ (ತಿದ್ದುಪಡಿ) ಅಧಿನಿಯಮ, 2011 (2011ರ ಕೇಂದ್ರ ಅಧಿನಿಯಮ 16) ಅನ್ನು ಕರ್ನಾಟಕ ರಾಜ್ಯದಲ್ಲಿ ಅಳವಡಿಸಿಕೊಳ್ಳಲು ಈ ಸದನವು ಸರ್ವಾನುಮತದಿಂದ ನಿರ್ಣಯಿಸುತ್ತದೆ."

ನಿರ್ಣಯವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

## ಶಾಸನ ರಚನೆ

**ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

**8.** ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ಧನವಿನಿಯೋಗ (ಸಂಖ್ಯೆ:3)**

**ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಮುಖ್ಯಮಂತ್ರಿಗಳು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಕೆ.ಎಸ್. ನವೀನ್
2. ಛಲವಾದಿ ಟಿ. ನಾರಾಯಣಸ್ವಾಮಿ
3. ಶರವಣ ಟಿ.ಎ.

**"ಗದ್ದಲ"**

ಮಾನ್ಯ ಮುಖ್ಯಮಂತ್ರಿಗಳು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

ಸದನವನ್ನು ಸಂಜೆ 7.00 ಗಂಟೆಯಲ್ಲಿ ಮುಂದೂಡಿ ದಿನಾಂಕ:22.08.2025ರಂದು ಬೆಳಗ್ಗೆ 11.00 ಗಂಟೆಗೆ ಸಭೆ ಸೇರುವುದಾಗಿ ಮಾನ್ಯ ಸಭಾಪತಿಯವರು (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಪ್ರಕಟಿಸಿದರು.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

****

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತಾರನೆಯ ಅಧಿವೇಶನ

ಲಘು ಪ್ರಕಟಣೆ ಭಾಗ–1

ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

ಶುಕ್ರವಾರ, ದಿನಾಂಕ:22.08.2025

(09)

ಸದನವು ಬೆಳಗ್ಗೆ: 10.25 ಗಂಟೆಗೆ ಮಾನ್ಯ ಸಭಾಪತಿಯವರ (**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**) ಅಧ್ಯಕ್ಷತೆಯಲ್ಲಿ ಸಭೆ ಸೇರಿತು.

## 1. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಕಾರ್ಯದರ್ಶಿಯವರು ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದೆ ಮಂಡಿಸಿದರು.**

1. ವಿಧಾನಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕಾರವಾದ ರೂಪದಲ್ಲಿ ಮತ್ತು ವಿಧಾನ ಪರಿಷತ್ತಿನಿಂದ ತಿರಸ್ಕೃತಗೊಂಡಿರುವ ರೂಪದಲ್ಲಿ ಹಾಗೂ ಎರಡನೇ ಬಾರಿ ವಿಧಾನ ಸಭೆಯಿಂದ ಅಂಗೀಕಾರವಾದ ರೂಪದಲ್ಲಿರುವ ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ, 2025
2. ಕರ್ನಾಟಕ ಸಾಂಪ್ರದಾಯಿಕ ಅಲೆಮಾರಿ ಕುರಿಗಾಹಿಗಳ (ಕ್ಷೇಮಾಭಿವೃದ್ಧಿ ಕ್ರಮಗಳು ಮತ್ತು ದೌರ್ಜನ್ಯಗಳ ವಿರುದ್ಧ ರಕ್ಷಣೆ) ವಿಧೇಯಕ, 2025
3. ಕರ್ನಾಟಕ ಅಕ್ರಮ ಗಣಿಗಾರಿಕೆ ಮತ್ತು ಅಪರಾಧದ ಉತ್ಪತ್ತಿಗಳಿಂದಾದ ಸ್ವತ್ತನ್ನು ವಶಪಡಿಸಿಕೊಳ್ಳುವುದಕ್ಕಾಗಿ ಮತ್ತು

ಜಪ್ತಿಗಾಗಿ ವಸೂಲಾತಿ ಆಯುಕ್ತರ ನೇಮಕಾತಿ ವಿಧೇಯಕ, 2025

4. ಕರ್ನಾಟಕ ಲಿಫ್ಟ್‌ಗಳ, ಎಸ್ಕಲೇಟರ್‌ಗಳ ಮತ್ತು ಪ್ಯಾಸೆಂಜರ್ ಕನ್ವೇಯರ್‌ಗಳ (ತಿದ್ದುಪಡಿ) ವಿಧೇಯಕ, 2025

5. ಬಸವನ ಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025

## 2. ವರದಿಗಳನ್ನೊಪ್ಪಿಸುವುದು

ಅ. **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ಸದಸ್ಯರು, ಗಂಗಾ ಕಲ್ಯಾಣ ಯೋಜನಾ ವಿಶೇಷ ಸದನ ಸಮಿತಿ)** ಅವರು ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ವಿವಿಧ ನಿಗಮಗಳಲ್ಲಿ ನಡೆದಿರುವ ಅವ್ಯವಹಾರಗಳ ಕುರಿತು ಪರಿಶೀಲಿಸಲು ರಚಿಸಲಾದ ವಿಧಾನ ಪರಿಷತ್ತಿನ ವಿಶೇಷ ಸದನ ಸಮಿತಿ ಅಂತಿಮ ವರದಿಯನ್ನೊಪ್ಪಿಸಿದರು.

ಆ. **ಶ್ರೀ ಕೆ. ಅಬ್ದುಲ್ ಜಬ್ಬರ್ (ಸದಸ್ಯರು, ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ)** ಅವರು ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ 2ನೇ ವರದಿಯನ್ನೊಪ್ಪಿಸಿದರು.

## 3. ಶಾಸನ ರಚನೆ

### ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1. ವಿಧಾನಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕಾರವಾದ ರೂಪದಲ್ಲಿ ಮತ್ತು ವಿಧಾನ ಪರಿಷತ್ತಿನಿಂದ

ತಿರಸ್ಕೃತಗೊಂಡಿರುವ ರೂಪದಲ್ಲಿ ಹಾಗೂ ಎರಡನೇ ಬಾರಿ ವಿಧಾನ ಸಭೆಯಿಂದ ಅಂಗೀಕಾರವಾದ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಮುಖ್ಯಮಂತ್ರಿಯವರ ಪರವಾಗಿ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ವಿವರಣೆ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

2. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಕರ್ನಾಟಕ ಪ್ರವಾಸೋದ್ಯಮ ವ್ಯಾಪಾರ (ಸೌಲಭ್ಯ ಮತ್ತು ನಿಯಂತ್ರಣ) (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಕೆ.ಎಸ್. ನವೀನ್
2. ಐವನ್ ಡಿ'ಸೋಜಾ
3. ಡಿ.ಎಸ್. ಅರುಣ್

4. ಹೇಮಲತಾ ನಾಯಕ

5. ಅಡಗೂರ್ ಹೆಚ್. ವಿಶ್ವನಾಥ್

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

3. ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ "ಕರ್ನಾಟಕ ಸಾಂಪ್ರದಾಯಿಕ ಅಲೆಮಾರಿ ಕುರಿಗಾಹಿಗಳ (ಕ್ಷೇಮಾಭಿವೃದ್ಧಿ ಕ್ರಮಗಳು ಮತ್ತು ದೌರ್ಜನ್ಯಗಳ ವಿರುದ್ಧ ರಕ್ಷಣೆ) ವಿಧೇಯಕ"ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್)
2. ಶಾಂತಾರಾಮ್ ಬುಡ್ನ ಸಿದ್ದಿ
3. ಡಾ: ಉಮಾಶ್ರೀ
4. ಅಡಗೂರ್ ಹೆಚ್. ವಿಶ್ವನಾಥ್
5. ಡಾ: ಡಿ. ತಿಮ್ಮಯ್ಯ

ಮಧ್ಯಾಹ್ನ 11.15 ಗಂಟೆಯಲ್ಲಿ **ಶ್ರೀಮತಿ ಭಾರತಿ ಶೆಟ್ಟಿ** ಅವರು ಸಭಾಪತಿ ಪೀಠದಲ್ಲಿ ಆಸೀನರಾದರು.

6. ಎಂ. ನಾಗರಾಜು
7. ಪಿ.ಹೆಚ್. ಪೂಜಾರ್
8. ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು
9. ಗೋವಿಂದರಾಜು

ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

**4.** ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ "ಕರ್ನಾಟಕ ಅಕ್ರಮ ಗಣಿಗಾರಿಕೆ ಮತ್ತು ಅಪರಾಧದ ಉತ್ಪತ್ತಿಗಳಿಂದಾದ ಸ್ವತ್ತನ್ನು ವಶಪಡಿಸಿಕೊಳ್ಳುವುದಕ್ಕಾಗಿ ಮತ್ತು ಜಪ್ತಿಗಾಗಿ ವಸೂಲಾತಿ ಆಯುಕ್ತರ ನೇಮಕಾತಿ ವಿಧೇಯಕ"ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರ ಪರವಾಗಿ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಐವನ್ ಡಿ'ಸೋಜಾ

2. ಕೆ.ಎಸ್. ನವೀನ್

3. ಶರವಣ ಟಿ.ಎ

4. ವೈ.ಎಂ. ಸತೀಶ್

5. ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು

6. ಕೇಶವ ಪ್ರಸಾದ್ ಎಸ್

7. ಪಿ.ಹೆಚ್. ಪೂಜಾರ್

ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

ಮಧ್ಯಾಹ್ನ 12.55 ಗಂಟೆಗೆ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ)** ಪೀಠದಲ್ಲಿ ಆಸೀನರಾದರು.

**5.** ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ "ಕರ್ನಾಟಕ ಲಿಫ್ಟ್‌ಗಳ, ಎಸ್ಕಲೇಟರ್‌ಗಳ ಮತ್ತು ಪ್ಯಾಸೆಂಜರ್ ಕನ್ವೇಯರ್‌ಗಳ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಇಂಧನ ಸಚಿವರು ವಿವರಣೆ ನೀಡಿದರು.

ಈ ಕೆಳಕಂಡ ಮಾನ್ಯ ಶಾಸಕರುಗಳು ಸ್ಪಷ್ಟೀಕರಣ ಕೋರಿದರು.

ಶ್ರೀಯುತರುಗಳಾದ:

1. ಡಾ: ಧನಂಜಯ ಸರ್ಜಿ

2. ಎಂ. ನಾಗರಾಜು

3. ಕೇಶವ ಪ್ರಸಾದ್ ಎಸ್

ಮಾನ್ಯ ಇಂಧನ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

6. ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ **"ಬಸವನ ಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಿ ಅಂಗೀಕರಿಸಬೇಕೆಂದು ಸೂಚಿಸಿ ಮಾನ್ಯ ಕಂದಾಯ ಸಚಿವರು ವಿವರಣೆ ನೀಡಿದರು.

ಮಾನ್ಯ ಶಾಸಕರಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಅವರು ಚರ್ಚೆಯಲ್ಲಿ ಭಾಗವಹಿಸಿದರು.

ಮಾನ್ಯ ಕಂದಾಯ ಸಚಿವರು ಸ್ಪಷ್ಟೀಕರಣ ನೀಡಿದರು.

ವಿಧೇಯಕವನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು.

## 4. ಪ್ರಶ್ನೋತ್ತರ

ದಿನಾಂಕ:22.08.2025ರಂದು ಸದನದಲ್ಲಿ ಉತ್ತರಿಸುವ ಸಮೂಹ–Vರ 9ನೇ ಪಟ್ಟಿಯ ಈ ಕೆಳಕಂಡ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಲಾಯಿತು.

| | | |
|---|---|---|
| 1. | 121(1282) | ವರ್ಗಾವಣೆ |
| 2. | 122(1269) | ಕಾಲಾವಕಾಶ |
| 3. | 123(1406) | |
| 4. | 124(1026) | |
| 5. | 125(1334) | |
| 6. | 126(1260+1254) | |
| 7. | 127(1301) | |
| 8. | 128(1381) | |
| 9. | 129(1295) | |
| 10. | 130(1414) | 7 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು. |
| 11. | 131(1370) | |
| 12. | 132(1420) | |
| 13. | 133(1357) | |
| 14. | 134(1362) | |
| 15. | 135(1312) | |

**ದಿನಾಂಕ:12.08.2025ರ 2ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆ**

1. 33(233)

**ದಿನಾಂಕ:12.08.2025ರ 8ನೇ ಪಟ್ಟಿಯಿಂದ ತಡೆಹಿಡಿಯಲಾದ ಪ್ರಶ್ನೆಗಳು**

1. 114(1255)
2. 115(1141)

ದಿನಾಂಕ:22.08.2025ರಂದು ಲಿಖಿತ ಮೂಲಕ ಉತ್ತರಿಸುವ ಸಮೂಹ–Vರ 9ನೇ ಪಟ್ಟಿಯ ಒಟ್ಟು 165 ಪ್ರಶ್ನೆಗಳ ಪೈಕಿ 61 ಪ್ರಶ್ನೆಗಳಿಗೆ ಉತ್ತರಗಳನ್ನು ಮಾನ್ಯ ಸಭಾನಾಯಕರು ಮಂಡಿಸಿದರು.

ದಿನಾಂಕ:11.08.2025 ರಿಂದ 22.08.2025ರವರೆಗೆ ನಡೆದ 156ನೇ ಅಧಿವೇಶನದಲ್ಲಿ ನಿಯಮ–72ರಡಿ ಸ್ವೀಕರಿಸಲಾದ ಒಟ್ಟು 134 ಸೂಚನೆಗಳ ಪೈಕಿ 65 ಸೂಚನೆಗಳಿಗೆ ಹಾಗೂ ನಿಯಮ–330ರಡಿ ಸ್ವೀಕರಿಸಲಾದ ಒಟ್ಟು 84 ಸೂಚನೆಗಳ ಪೈಕಿ 32 ಸೂಚನೆಗಳಿಗೆ ಮಾನ್ಯ ಸಭಾನಾಯಕರು ಉತ್ತರಗಳನ್ನು ಮಂಡಿಸಿದರು.

## 5. ಶೂನ್ಯವೇಳೆ ಪ್ರಸ್ತಾವಗಳಿಗೆ ಉತ್ತರ

1. **ಶ್ರೀ ಸಿ.ಎನ್. ಮಂಜೇಗೌಡ** ಅವರು ರಾಜ್ಯದ ಆರು ಸಾವಿರ ಗ್ರಾಮ ಪಂಚಾಯತಿಗಳಿಗೆ, 187 ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸುವ ಸಂಬಂಧ ಮೀಸಲಾತಿ ಪಟ್ಟಿಯನ್ನು ಚುನಾವಣೆ ಆಯೋಗಕ್ಕೆ ರಾಜ್ಯ ಸರ್ಕಾರ ಈವರೆಗೂ ನೀಡದಿರುವ ಕುರಿತು ದಿನಾಂಕ:11.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

2. **ಶ್ರೀ ಮಂಜುನಾಥ್ ಭಂಡಾರಿ** ಅವರು ಭೂ ಪರಿವರ್ತಿತ ಜಮೀನಿನ ಏಕವಿನ್ಯಾಸ ನಕ್ಷೆಗಳಿಗೆ ಜಿಲ್ಲಾ ಕೇಂದ್ರ ಅನುಮೋದನೆ ಪಡೆಯಬೇಕಾಗಿರುವುದರಿಂದ ತೊಂದರೆ ಯಾಗುತ್ತಿದ್ದು, ಯೋಜನಾ ಪ್ರದೇಶದ ವ್ಯಾಪ್ತಿಯಿಂದ ಹೊರಗಿರುವ ಗ್ರಾಮ ಪಂಚಾಯತಿಗಳಿಗೆ ಪ್ರತ್ಯೇಕ ಗ್ರಾಮಾಂತರ ಯೋಜನೆ ರೂಪಿಸಿ ಸರಳ ನಿಯಮಗಳನ್ನು ಅಳವಡಿಸುವ ಕುರಿತು ದಿನಾಂಕ:12.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

3. **ಡಾ: ಧನಂಜಯ ಸರ್ಜಿ** ಅವರು ಕೇಂದ್ರ ಸರ್ಕಾರವು ದಿನಾಂಕ:25.06.2025ರಲ್ಲಿ ಹೊರಡಿಸಿರುವ ಆದೇಶದಲ್ಲಿ ತಿಳಿಸಿರುವಂತೆ ಹೊಸ ವಿದ್ಯುತ್ ಸಂಪರ್ಕ ಕಲ್ಪಿಸುವ ಸಂಬಂಧ ಇರುವ ಕಾಯ್ದೆಗೆ ತಿದ್ದುಪಡಿ ತರುವ ಕುರಿತು ದಿನಾಂಕ:12.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

4. **ಶ್ರೀ ಶರವಣ ಟಿ.ಎ** ಅವರು ಸರ್ಕಾರದ ವಿವಿಧ ವಸತಿ ಯೋಜನೆಗಳಡಿ ಅಪೂರ್ಣಗೊಂಡಿರುವ ಮನೆಗಳ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸುವ ಕುರಿತು ದಿನಾಂಕ:12.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

5. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು 2012ರಲ್ಲಿ ಆಫ್ರಿಕನ್ ಕ್ಯಾಟ್‌ಫಿಶ್‌ಗಳ ಸಾಕಾಣಿಕೆಯನ್ನು ಸರ್ಕಾರ ನಿಷೇಧಿಸಿದ್ದರೂ, ಅಕ್ರಮವಾಗಿ ಸಾಕಾಣಿಕೆ ಮಾಡುತ್ತಿರುವುದು ಜನರ ಅನಾರೋಗ್ಯಕ್ಕೆ ಕಾರಣವಾಗಿರುವುದರಿಂದ ಕಟ್ಟುನಿಟ್ಟಾಗಿ ಇದನ್ನು ನಿಯಂತ್ರಿಸುವ ಕುರಿತು ದಿನಾಂಕ:13.08.2025ರಂದು

ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

6. **ಶ್ರೀ ಟಿ.ಎನ್. ಜವರಾಯಿ ಗೌಡ** ಅವರು ನೈಸ್ ಸಂಸ್ಥೆಯ ಬೆಂಗಳೂರು–ಮೈಸೂರು ಇನ್ಫ್ರಾಸ್ಟ್ರಕ್ಚರ್ ಕಾರಿಡಾರ್ (ಬಿ.ಎಂ.ಐ.ಸಿ) ಯೋಜನೆಯ ಕುರಿತು ದಿನಾಂಕ: 13.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

7. **ಶ್ರೀ ಕೆ. ಅಬ್ದುಲ್ ಜಬ್ಬಾರ್** ಅವರು ದಾವಣಗೆರೆ ಜಿಲ್ಲೆಯ ಚನ್ನಗಿರಿ ತಾಲ್ಲೂಕಿನ ಕೆರೆಬಿಳಚಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸ್ತ್ರೀರೋಗ ತಜ್ಞರ ವರ್ಗಾವಣೆ ಹಾಗೂ ಹುದ್ದೆಗಳನ್ನು ಕಡಿತಗೊಳಿಸುವ ಕುರಿತು ದಿನಾಂಕ: 13.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

8. **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.** ಅವರು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಭೂ ಪರಿವರ್ತನೆಗೊಳಿಸುವ ಜಮೀನಿಗೆ ಸರ್ಕಾರಿ ರಸ್ತೆ ಸಂಪರ್ಕ ಹೊಂದಿದ್ದರೆ ಮಾತ್ರ ಭೂ ಪರಿವರ್ತನೆ ಮಾಡುವ ಹಾಗೂ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ದೊರಕುತ್ತಿದ್ದ 9/11ಎ ಖಾತಾ ದೃಢೀಕರಣ ಪತ್ರವನ್ನು ಸ್ಥಳೀಯ ಯೋಜನಾ ಪ್ರಾಧಿಕಾರಕ್ಕೆ ವರ್ಗಾಯಿಸಿರುವ ಕುರಿತು ದಿನಾಂಕ:13.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

9. **ಶ್ರೀ ಚಿದಾನಂದ್ ಎಂ. ಗೌಡ** ಅವರು ಮೈಸೂರು ವಿಶ್ವವಿದ್ಯಾಲಯದಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗಿರುವ ಕುರಿತು ದಿನಾಂಕ:

13.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

10. **ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ, ಶ್ರೀಮತಿ ಬಲ್ಕೀಸ್ ಬಾನು, ರಾಮೋಜಿಗೌಡ ಮತ್ತು ಹೇಮಲತಾ ನಾಯಕ** ಅವರುಗಳು ರಾಜ್ಯದ ಆಶಾಕಾರ್ಯಕರ್ತೆಯರು ಗೌರವಧನ ಹೆಚ್ಚಳ ಹಾಗೂ ಇನ್ನಿತರೆ ಬೇಡಿಕೆಗಳನ್ನು ಈಡೇರಿಸಬೇಕೆಂದು ಧರಣಿ ನಡೆಸುತ್ತಿರುವ ಕುರಿತು ದಿನಾಂಕ:14.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

11. **ಶ್ರೀ ಸಿ.ಎನ್. ಮಂಜೇಗೌಡ ಮತ್ತು ಶ್ರೀ ಎಸ್.ವ್ಹಿ. ಸಂಕನೂರ** ಅವರುಗಳು ಮೈಸೂರಿನಲ್ಲಿ ಡ್ರಗ್ಸ್ ಮಾಫಿಯಾ ಹಾಗೂ ಮಾದಕ ವಸ್ತುಗಳ ಪ್ರಕರಣಗಳು ವರದಿಯಾಗಿದ್ದು, ಉನ್ನತ ಮಟ್ಟದ ತನಿಖೆ ನಡೆಸಿ NDPS & COTPA ಕಾಯ್ದೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಕುರಿತು ದಿನಾಂಕ: 14.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

12. **ಶ್ರೀ ಬಸನಗೌಡ ಬಾದರ್ಲಿ** ಅವರು ಸಿಂಧನೂರು ನಗರದ ಮಧ್ಯಭಾಗದಲ್ಲಿ ತೋಟಗಾರಿಕೆ ಇಲಾಖೆಯ 19 ಎಕರೆ ಭೂಮಿಯನ್ನು ಸದ್ಬಳಕೆ ಮಾಡಿಕೊಂಡು ಹಣ್ಣುಗಳನ್ನು ಬೆಳೆಸುವ ಕುರಿತು ದಿನಾಂಕ:14.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

13. **ಶ್ರೀಮತಿ ಭಾರತಿ ಶೆಟ್ಟಿ** ಅವರು ಪ್ರೌಢ ಶಾಲೆ ಮತ್ತು ಸಂಯುಕ್ತ ಪದವಿ ಪೂರ್ವ ಕಾಲೇಜುಗಳಿಗೆ ಏಕರೂಪದ ಅನುದಾನ ಹಂಚಿಕೆ ಆಗುತ್ತಿರುವುದರಿಂದ ಮೂಲ ಸೌಲಭ್ಯಗಳ ನಿರ್ವಹಣೆಯಲ್ಲಿ ಶಿಕ್ಷಕರ ನಡುವೆ ಗೊಂದಲು

ಸೃಷ್ಠಿಯಾಗಿರುವ ಕುರಿತು ದಿನಾಂಕ:18.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

14. **ಶ್ರೀ ಎಂ. ನಾಗರಾಜು** ಅವರು ಬಾಲ್ಯ ವಿವಾಹದ ಪಿಡುಗನ್ನು ತಡೆಗಟ್ಟುವಲ್ಲಿ ವಿಫಲವಾಗಿರುವ ಪರಿಣಾಮ ಬಾಲ ಗರ್ಭಿಣಿಯರ ಸಂಖ್ಯೆ ಹೆಚ್ಚಾಗಿದ್ದು, ಇದರಿಂದ ಆಗುವ ಸಮಸ್ಯೆಗಳ ಬಗ್ಗೆ ಪೋಷಕರಲ್ಲಿ ಮತ್ತು ಬಾಲಕಿಯರಲ್ಲಿ ಅರಿವು ಮೂಡಿಸಲು ಕ್ರಮ ಕೈಗೊಳ್ಳುವ ಕುರಿತು ದಿನಾಂಕ: 18.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

15. **ಡಾ: ತಳವಾರ್ ಸಾಬಣ್ಣ** ಅವರು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಗ್ರೇಡ್-1 ಪ್ರಾಂಶುಪಾಲರ ಹುದ್ದೆಗಳ ಅಂತಿಮ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸುವ ಕುರಿತು ದಿನಾಂಕ: 18.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

16. **ಶ್ರೀ ಕಿಶೋರ್ ಕುಮಾರ್ ಪುತ್ತೂರ್** ಅವರು ಧರ್ಮಸ್ಥಳದ ಪ್ರಕರಣಕ್ಕೆ ಸಂಬಂಧಿಸಿದಂತೆ ಅನಾಮಿಕ ದೂರುದಾರನ ಮಂಪರು ಪರೀಕ್ಷೆ ನಡೆಸಿ ವರದಿ ಬಂದ ನಂತರ ಕ್ರಮವಹಿಸದೆ SIT ರಚಿಸಿದ್ದು, 12 ಸ್ಥಳದಲ್ಲಿ ಯಾವುದೇ ಮಾಹಿತಿ ದೊರೆಯದೆ ಇರುವುದರಿಂದ ಧಾರ್ಮಿಕ ಶ್ರದ್ಧಾ ಕೇಂದ್ರವಾಗಿರುವ ಶ್ರೀ ಕ್ಷೇತ್ರ ಧರ್ಮಸ್ಥಳದ ಗೌರವವನ್ನು ಉಳಿಸುವ ಕುರಿತು ದಿನಾಂಕ:18.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

17. **ಶ್ರೀ ಕೇಶವ ಪ್ರಸಾದ್ ಎಸ್** ಅವರು ರಾಜ್ಯದಲ್ಲಿ ಹಾವು ಕಡಿತದಿಂದ ಮೃತಪಟ್ಟಿರುವ ಪ್ರಕರಣಗಳು ಹೆಚ್ಚಾಗಿರುವ

ಕುರಿತು ದಿನಾಂಕ:19.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

18. **ಶ್ರೀ ರಾಮೋಜಿಗೌಡ** ಅವರು ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ 22ಕ್ಕೂ ಹೆಚ್ಚು ಅರಣ್ಯ ರಕ್ಷಕ ಮತ್ತು ಅರಣ್ಯ ಕಾವಲುಗಾರರ ಹುದ್ದೆಗಳು ಖಾಲಿ ಇರುವ ಕುರಿತು ದಿನಾಂಕ:19.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

19. **ಡಾ: ಧನಂಜಯ ಸರ್ಜಿ** ಅವರು ರಕ್ತದಾನ ಶಿಬಿರಗಳಲ್ಲಿ ಸಂಗ್ರಹವಾದ ರಕ್ತದಲ್ಲಿ ಪರೀಕ್ಷೆ ವೇಳೆ ಹೆಚ್‌ಐವಿ/ಹೆಪಿಟೈಟಿಸ್, ಮಲೇರಿಯಾದಂತ ಸೋಂಕು ಪತ್ತೆಯಾಗಿ ರಕ್ತ ವ್ಯರ್ಥವಾಗುತ್ತಿರುವುದರಿಂದ ದಾನ ತೆಗೆದುಕೊಳ್ಳುವ ಸಂದರ್ಭದಲ್ಲಿ ರಕ್ತದ ಗುಣಮಟ್ಟದ ಪರೀಕ್ಷೆ ಮಾಡುವುದು ಅವಶ್ಯಕವಾಗಿರುವ ಕುರಿತು ದಿನಾಂಕ:14.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

20. **ಶ್ರೀ ಸಿ.ಟಿ. ರವಿ ಮತ್ತು ಶ್ರೀ ಗೋವಿಂದರಾಜು** ಅವರುಗಳು ರಾಜ್ಯದಲ್ಲಿ ಮಕ್ಕಳ ನಾಪತ್ತೆ ಪ್ರಕರಣಗಳು ಹೆಚ್ಚಾಗಿರುವ ಕುರಿತು ದಿನಾಂಕ:19.08.2025ರಂದು ಪ್ರಸ್ತಾಪಿಸಿದ ಸೂಚನೆಗೆ ಮಾನ್ಯ ಸಭಾನಾಯಕರು ಉತ್ತರ ಮಂಡಿಸಿದರು.

ಮಾನ್ಯ ಶಾಸಕರಾದ ಶ್ರೀ ಶಶೀಲ್ ಜಿ. ನಮೋಶಿ ಅವರು ಗೌರಿ-ಗಣೇಶ ಹಬ್ಬದ ಆಚರಣೆಗೆ ಮಾರ್ಗಸೂಚಿಗಳನ್ನು ಬಿಬಿಎಂಪಿ ಯಿಂದ ಹೊರಡಿಸಿರುವುದರ ಬಗ್ಗೆ ಪ್ರಸ್ತಾಪಿಸಿದರು.

ಮಾನ್ಯ ಸಭಾನಾಯಕರು ಸದರಿ ವಿಷಯವು ಜಿಲ್ಲಾಡಳಿತಕ್ಕೆ ಸಂಬಂಧಿಸಿರುವುದಾಗಿ ತಿಳಿಸಿದರು.

ಮಾನ್ಯ ಶಾಸಕರಾದ ಶ್ರೀ ಸುನೀಲ್ ವಲ್ಯಾಪುರ್ ಅವರು ನಿಯಮ 68ರಡಿ ನೀಡಿದ್ದ ಸೂಚನೆಯನ್ನು ಪ್ರಸ್ತಾಪಿಸಲು ಅವಕಾಶ ನೀಡಬೇಕೆಂದು ಕೋರಿದರು.

## ಸಾರಾಂಶ

**ಮಾನ್ಯ ಸಭಾಪತಿಯವರು:-**

ವಿಧಾನ ಪರಿಷತ್ತಿನ 156ನೇ ಅಧಿವೇಶನದ ಉಪವೇಶನದಲ್ಲಿ ನಡೆದಿರುವ ಕಾರ್ಯಕಲಾಪಗಳ ವಿವರವನ್ನು ಸದನಕ್ಕೆ ತಿಳಿಸಲು ಇಚ್ಛಿಸುತ್ತೇನೆ. ಪ್ರಸ್ತುತ ಅಧಿವೇಶನವು ದಿನಾಂಕ:11.08.2025 ರಿಂದ 22.08.2025ರವರೆಗೆ ಒಟ್ಟು 09 ದಿನಗಳು ಅಂದರೆ, 55 ಗಂಟೆ 25 ನಿಮಿಷಗಳ ಕಾಲ ನಡೆಸಲಾಗಿರುತ್ತದೆ.

ಪ್ರತಿ ಅಧಿವೇಶನದ ಪ್ರಾರಂಭದಲ್ಲಿ ಸಂವಿಧಾನದ ಪೀಠಿಕೆಯನ್ನು ಎಲ್ಲಾ ಮಾನ್ಯ ಶಾಸಕರುಗಳು ಓದಬೇಕೆಂದು ನಿರ್ಣಯಿಸಲಾಗಿರುವ ರೀತ್ಯಾ, ಪ್ರಸ್ತುತ ಅಧಿವೇಶನದ ಮೊದಲ ದಿನದ ಉಪವೇಶನದಲ್ಲಿ ಎಲ್ಲಾ ಮಾನ್ಯ ಶಾಸಕರುಗಳಿಂದ ಸಂವಿಧಾನದ ಪೀಠಿಕೆಯನ್ನು ಪಠಣ ಮಾಡಲಾಯಿತು.

ಕಳೆದ ಅಧಿವೇಶನದಿಂದೀಚೆಗೆ ನಿಧನರಾದ ಒಟ್ಟು 11 ಗಣ್ಯರುಗಳಿಗೆ ಸದನವು ತನ್ನ ಸಂತಾಪವನ್ನು ವ್ಯಕ್ತಪಡಿಸಿತು.

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಮಂಡಿಸಿದರು.

2025-26ನೇ ಸಾಲಿನ ಪೂರಕ ಅಂದಾಜುಗಳು (ಮೊದಲನೇ ಕಂತು) ಹಾಗೂ ಸಭೆಯ ಮುಂದಿಡಲಾಗುವ ಕಾಗದ ಪತ್ರಗಳ 1 ಮತ್ತು 2ನೇ ಪಟ್ಟಿಗಳನ್ನು ಮಂಡಿಸಲಾಯಿತು.

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, 2023-24ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ರಾಜ್ಯದ ಹಣಕಾಸಿನ ವ್ಯವಹಾರಗಳ ಲೆಕ್ಕಪರಿಶೋಧನಾ (2025ರ ವರದಿ ಸಂಖ್ಯೆ:4) ವರದಿ, ಮಾರ್ಚ್ 2023ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ರಾಜ್ಯ ಕಂದಾಯದ ವರದಿ (2025ರ ವರದಿ ಸಂಖ್ಯೆ:5), 2020-2022ನೇ ಸಾಲಿನ ಪಂಚಾಯತ್‌ರಾಜ್ ಸಂಸ್ಥೆಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳ ಮೇಲಿನ ಸಂಯೋಜಿತ ವಾರ್ಷಿಕ ತಾಂತ್ರಿಕ ಪರಿಶೀಲನಾ ವರದಿ, ಮಾರ್ಚ್ 2023ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಅನುಸರಣಾ ಲೆಕ್ಕಪರಿಶೋಧನಾ ವರದಿ (2025ರ ವರದಿ ಸಂಖ್ಯೆ:3), ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ ಕಲ್ಯಾಣದ (2025ರ ವರದಿ ಸಂಖ್ಯೆ:02) ವರದಿ ಹಾಗೂ ಮಾರ್ಚ್2023ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಅನುಸರಣಾ ಲೆಕ್ಕಪರಿಶೋಧನೆ-ಸಿವಿಲ್ (2025ರ ವರದಿ ಸಂಖ್ಯೆ:06) ವರದಿಗಳನ್ನು ಮಂಡಿಸಲಾಯಿತು.

ಕರ್ನಾಟಕ ವಿಧಾನ ಪರಿಷತ್ತಿನ ಹಕ್ಕುಬಾಧ್ಯತಾ ಸಮಿತಿಯ 104ನೇ ವರದಿ, ವಿಧಾನ ಪರಿಷತ್ತಿನ ಸರ್ಕಾರಿ ಭರವಸೆಗಳ ಸಮಿತಿಯ 2023-24 ಹಾಗೂ 2024-25ನೇ ಸಾಲಿನ 50ನೇ ವರದಿ, ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್‌ರಾಜ್ ಸಂಸ್ಥೆಗಳ ಸಮಿತಿಯ 43ನೇ ವರದಿ, ಅಧೀನ ಶಾಸನ ರಚನಾ ಸಮಿತಿಯ 53ನೇ ವರದಿ, ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 5ನೇ ವರದಿ, ಹಿಂದುಳಿದ ವರ್ಗಗಳ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಸಮಿತಿಯ 02ನೇ ವರದಿಗಳನ್ನು ಒಪ್ಪಿಸಲಾಯಿತು.

ವಿಧಾನ ಮಂಡಲದ ಜಂಟಿ ಸಮಿತಿಗಳು ಹಾಗೂ ವಿಧಾನ ಪರಿಷತ್ತಿನ ವಿವಿಧ ಸ್ಥಾಯಿ ಸಮಿತಿಗಳಿಗೆ ಚುನಾವಣೆ ನಡೆಸುವ ಬದಲು ಸದಸ್ಯರುಗಳನ್ನು ನಾಮನಿರ್ದೇಶಿಸಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಬಗ್ಗೆ ಪ್ರಸ್ತಾವವನ್ನು ಸದನದಲ್ಲಿ ಮಂಡಿಸಿ ಸದನದ ಸಹಮತಿಯನ್ನು ಪಡೆಯಲಾಯಿತು.

ರಾಜ್ಯದ ವಿವಿಧ ನಿಗಮಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳ ಸಂಬಂಧ ಪರಿಶೀಲಿಸಿ ವರದಿಯನ್ನು ಸಲ್ಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯ ಕಾಲಾವಕಾಶವನ್ನು ದಿನಾಂಕ: 22.04.2025ರವರೆಗೆ ವಿಸ್ತರಿಸಿರುವ ಪ್ರಸ್ತಾವನೆಯನ್ನು ಮಂಡಿಸಿ ಅಂಗೀಕರಿಸಲಾಯಿತು ಹಾಗೂ ಸಮಿತಿಯ ಅಂತಿಮ ವರದಿಯನ್ನು ಒಪ್ಪಿಸಲಾಯಿತು.

ಮೂರು ಅಧಿಕೃತ ನಿರ್ಣಯಗಳನ್ನು ಸ್ವೀಕರಿಸಲಾಗಿದ್ದು, ಆ ಪೈಕಿ ಎರಡು ಅಧಿಕೃತ ನಿರ್ಣಯಗಳನ್ನು ಸದನದಲ್ಲಿ ಮಂಡಿಸಿ ಅಂಗೀಕರಿಸಲಾಗಿರುತ್ತದೆ.

ನಿಯಮ 59 ರಡಿಯಲ್ಲಿ ಒಟ್ಟು 04 ಸೂಚನೆಗಳನ್ನು ಸ್ವೀಕರಿಸಲಾಗಿದ್ದು, ಆ ಪೈಕಿ 01 ಸೂಚನೆಯನ್ನು ನಿಯಮ 68ಕ್ಕೆ ಪರಿವರ್ತಿಸಿ ಉತ್ತರಿಸಲಾಯಿತು. ಉಳಿದಂತೆ 01 ಸೂಚನೆಯನ್ನು ನಿಯಮ 72ಕ್ಕೆ ಪರಿವರ್ತಿಸಲಾಗಿರುತ್ತದೆ. 02 ಸೂಚನೆಗಳನ್ನು ನಿಯಮ 330ಕ್ಕೆ ಪರಿವರ್ತಿಸಿ, ಒಂದನ್ನು ಚರ್ಚಿಸಿ ಉತ್ತರಿಸಲಾಯಿತು.

ನಿಯಮ 68ರಡಿಯಲ್ಲಿ 04 ಸೂಚನೆಗಳನ್ನು ಸ್ವೀಕರಿಸಲಾಗಿದ್ದು, ಚರ್ಚೆಯಾಗಿರುವುದಿಲ್ಲ.

ಪ್ರಸ್ತುತ ಅಧಿವೇಶನದಲ್ಲಿ ಒಟ್ಟು 1431 ಪ್ರಶ್ನೆಗಳನ್ನು ಸ್ವೀಕರಿಸಲಾಗಿರುತ್ತದೆ. ಅದರಲ್ಲಿ 135 ಪ್ರಶ್ನೆಗಳನ್ನು ಚುಕ್ಕೆ ಗುರುತಿನ

ಪ್ರಶ್ನೆಗಳನ್ನಾಗಿ ಅಂಗೀಕರಿಸಿದ್ದು, ಅವುಗಳ ಪೈಕಿ 95 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು. (34) ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಗಿರುತ್ತದೆ. ಲಿಖಿತ ಮೂಲಕ ಉತ್ತರಿಸುವ ಒಟ್ಟು 1296 ಪ್ರಶ್ನೆಗಳ ಪೈಕಿ 798 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 58ರಡಿಯಲ್ಲಿ ಅರ್ಧಗಂಟೆ ಕಾಲಾವಧಿ ಚರ್ಚೆಗಾಗಿ ಒಟ್ಟು 04 ಸೂಚನೆಗಳನ್ನು ಸ್ವೀಕರಿಸಲಾಗಿರುತ್ತದೆ. ಯಾವುದೇ ಸೂಚನೆಯನ್ನು ಚರ್ಚೆಗೆ ತೆಗೆದುಕೊಂಡಿರುವುದಿಲ್ಲ.

ನಿಯಮ 72ರಡಿಯಲ್ಲಿ 134 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 15 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 65 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 330ರಡಿಯಲ್ಲಿ 84 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 04 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 32 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ಶೂನ್ಯ ವೇಳೆ ಪ್ರಸ್ತಾವನೆಯ ಒಟ್ಟು 71 ಸೂಚನೆಗಳ ಪೈಕಿ 26 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 19 ಸೂಚನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸಲಾಯಿತು.

ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 04 ವಿಧೇಯಕಗಳು ಹಾಗೂ ಅಂಗೀಕೃತ ರೂಪದಲ್ಲಿರುವ 33 ವಿಧೇಯಕಗಳು ಸೇರಿದಂತೆ ಒಟ್ಟು 37 ವಿಧೇಯಕಗಳಿಗೆ ವಿಧಾನ ಪರಿಷತ್ತು ತನ್ನ ಸಹಮತಿಯನ್ನು ನೀಡಿರುತ್ತದೆ ಹಾಗೂ 03 ವಿಧೇಯಕಗಳನ್ನು ಹಿಂಪಡೆಯಲಾಯಿತು.

**ಮಾನ್ಯ ಸಭಾನಾಯಕರು ಹಾಗೂ ವಿರೋಧ ಪಕ್ಷದ ಸದಸ್ಯರು ಮಾತನಾಡಿದ ನಂತರ:-**

ಮಾನ್ಯ ಮುಖ್ಯಮಂತ್ರಿಗಳಿಗೆ, ಮಾನ್ಯ ಉಪ ಮುಖ್ಯಮಂತ್ರಿಗಳಿಗೆ, ಮಾನ್ಯ ಸಭಾನಾಯಕರಿಗೆ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ, ಎಲ್ಲಾ ಮಂತ್ರಿ ವರ್ಗದವರಿಗೆ, ಸರ್ಕಾರದ ಮುಖ್ಯ ಸಚೇತಕರಿಗೆ, ವಿರೋಧ ಪಕ್ಷದ ಮುಖ್ಯ ಸಚೇತಕರಿಗೆ ಹಾಗೂ ಎಲ್ಲಾ ಶಾಸಕರುಗಳಿಗೆ, ಪತ್ರಿಕಾ ಹಾಗೂ ಮಾಧ್ಯಮ ವರದಿಗಾರರಿಗೆ, ವಿಧಾನ ಪರಿಷತ್ತಿನ ಸಚಿವಾಲಯದ ಅಧಿಕಾರಿ/ನೌಕರ ವರ್ಗದವರಿಗೆ ಮತ್ತು ಸರ್ಕಾರದ ಎಲ್ಲಾ ಅಧಿಕಾರಿ/ನೌಕರ ವೃಂದದವರಿಗೆ ಸದನದ ಕಾರ್ಯಕಲಾಪಗಳನ್ನು ಸುಗಮವಾಗಿ ನಡೆಸಲು ಸಹಕರಿಸಿದ್ದಕ್ಕೆ ತುಂಬು ಹೃದಯದ ಧನ್ಯವಾದಗಳನ್ನು ಸಲ್ಲಿಸುತ್ತಾ, ಮಧ್ಯಾಹ್ನ 1.30 ಗಂಟೆಯಲ್ಲಿ ರಾಷ್ಟ್ರಗೀತೆಯನ್ನು ನುಡಿಸುವುದರ ಮೂಲಕ ಮಾನ್ಯ ಸಭಾಪತಿಯವರು **(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ) ಸದನವನ್ನು ಅನಿರ್ದಿಷ್ಟ ಕಾಲದವರೆಗೆ ಮುಂದೂಡಿದರು.**

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

*****

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಕಾ.ಸೂ.363/ಪಿ5